ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 164 ಸಂಚಿಕೆ- 164 | PAGE- 8 ಪುಟ-8 | ಶನಿವಾರ 09.08.2025 | RS.2/- ಬೆಲೆ 2/-

# ಮತಗಳ್ಳತನ ಮಾಡಿ ಮೋದಿ ಪ್ರಧಾನಿಯಾಗಿದ್ದಾರೆ: ರಾಹುಲ್ ಗಾಂಧಿ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಅ.8: ನರೇಂದ್ರ ಮೋದಿ ಅವರು ಮತಗಳ್ಳತನ ಮಾಡಿ ಪ್ರಧಾನ ಮಂತ್ರಿಯಾಗಿದ್ದಾರೆ ಎಂದು ಲೋಕಸಭಾ ವಿಪಕ್ಷನಾಯಕ ರಾಹುಲ್ ಗಾಂಧಿ ಗಂಭೀರ ಆರೋಪ ಮಾಡಿದ್ದಾರೆ. ಚುನಾವಣಾ ಆಯೋಗ ಮತ್ತು ಬಿಜೆಪಿ ಮತ ಕಳ್ಳತನ ಮಾಡಿದೆ ಎಂದು ನಾವು ಶೇ.100ರಷ್ಟು ಸಾಬೀತುಪಡಿಸಿದ್ದೇವೆ ಎಂದು ರಾಹುಲ್ ಗಾಂಧಿ ಹೇಳಿದರು.

ಕಾಂಗ್ರೆಸ್ ಪ್ರತಿಭಟನೆಯಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಕಳೆದ ಚುನಾವಣೆಯಲ್ಲಿ ನಾವು ಸಂವಿಧಾನ ಉಳಿಸುವ ಕೆಲಸ ಮಾಡಿದೆವು. ಸಂವಿಧಾನ ಪುಸ್ತಕದಲ್ಲಿ ಸಾವಿರಾರು ವರ್ಷಗಳ ಇತಿಹಾಸ ಇದೆ. ಗಾಂಧೀಜಿ, ಅಂಬೇಡ್ಕರ್, ನೆಹರೂ, ಪಟೇಲ್‌ರ ಧ್ವನಿ ಇದೆ. ಬಸವಣ್ಣ, ಫುಲೆಯವರ ಧ್ವನಿಯೂ ಇದೆ. ಈ ಪುಸ್ತಕದ ಅಡಿಪಾಯ ಒನ್ ಮ್ಯಾನ್, ಒನ್ ಹೋಪ್, ಒಬ್ಬನಿಗೆ ಒಂದೇ ಮತ. ಭಾರತೀಯರಿಗೆ ಈ ಪುಸ್ತಕ ಒಂದೇ ಮತದ ಹಕ್ಕು ಕೊಟ್ಟಿದೆ. ಆದರೆ, ಕಳೆದ ಲೋಕಸಭೆ ಚುನಾವಣೆಯಲ್ಲಿ ಬಿಜೆಪಿ, ಮೋದಿಯವರು ಈ ಗ್ರಂಥದ ಮೇಲೆ ಆಕ್ರಮಣ ಮಾಡಿದ್ದಾರೆ. ಸಂವಿಧಾನ ಮುಗಿಸುವ ಷಡ್ಯಂತ್ರ ಮಾಡಿದ್ದಾರೆ ಎಂದು ಟೀಕಿಸಿದರು.




ಲೋಕಸಭೆ ಚುನಾವಣೆ ನಂತರ ಮಹಾರಾಷ್ಟ್ರ ವಿಧಾನಸಭೆ ಚುನಾವಣೆ ನಡೆಯಿತು. ಲೋಕಸಭೆಯಲ್ಲಿ ನಮ್ಮ ಮೈತ್ರಿ ಕೂಟ ಜಯ ಸಾಧಿಸಿತು. ನಾಲ್ಕು ತಿಂಗಳ ನಂತರ ನಡೆದ ಮಹಾರಾಷ್ಟ್ರ ಚುನಾವಣೆಯಲ್ಲಿ ಬಿಜೆಪಿ ಗೆದ್ದಿತು. ಮಹಾರಾಷ್ಟ್ರದಲ್ಲಿ 1 ಕೋಟಿ ಹೊಸದಾದ ಮತದಾರರು ಮತ ಹಾಕಿದ್ದಾರೆ. ಈ 1 ಕೋಟಿ ಜನ ಲೋಕಸಭೆಯಲ್ಲಿ ಮತ ಹಾಕಿರಲಿಲ್ಲ. ಆದರೆ, ಈ ಜನ ವಿಧಾನಸಭೆ ಚುನಾವಣೆಯಲ್ಲಿ ಮತ ಹಾಕಿದ್ದು ಅಚ್ಚರಿ ತಂದಿದೆ. ಈ ಮೂಲಕ ಬಿಜೆಪಿ ಮಹಾರಾಷ್ಟ್ರ ಗೆಲ್ಲುತ್ತದೆ. ನಮಗೆ ಲೋಕಸಭೆಯಲ್ಲಿ ಎಷ್ಟು ಮತ ಸಿಕ್ಕಿತೋ, ಮಹಾರಾಷ್ಟ್ರ ವಿಧಾನಸಭೆ ಚುನಾವಣೆಯಲ್ಲೂ ಸಿಕ್ಕು. ಇಲ್ಲಿ ಏನೋ ಷಡ್ಯಂತ್ರ ಇದೆ ಅಂತ ಆವತ್ತೇ ಅನಿಸಿತು ಎಂದು ಆರೋಪಿಸಿದರು.


ಕರ್ನಾಟಕದಲ್ಲಿ ನಮ್ಮ ಆಂತರಿಕ ಸರ್ವೆ ನಮಗೆ 16 ಕ್ಷೇತ್ರದಲ್ಲಿ ಗೆಲ್ಲುವ ವರದಿ ಕೊಟ್ಟಿತ್ತು. ಆದರೆ, ನಾವು ಗೆದ್ದಿದ್ದು 9 ರಲ್ಲಿ ಮಾತ್ರ. ಹಾಗಾಗಿ ನಾವು ಪ್ರಶ್ನೆ ಕೇಳಲು ಮುಂದಾಗಿದ್ದೇವೆ. ನಾವು ನಿಜಕ್ಕೂ ಈ ಕ್ಷೇತ್ರಗಳಲ್ಲಿ ಸೋತೆವಾ? ಅಥವಾ ಬಿಜೆಪಿ ಕೈವಾಡ ಇದೆಯಾ ಅಂತ ಕೇಳಿದೆವು. ಹಾಗಾಗಿ, ನಾವು ಒಂದು

(2ನೇ ಪುಟ ನೋಡಿ)

## ಅರಣ್ಯ ಸಚಿವರ ಜಿಲ್ಲೆಯಲ್ಲಿಯೆ ವಿಲೇವಾರಿ ಆಗದ ಕಡತಗಳು!

ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪಾ, ಅ.8: ತಾಲ್ಲೂಕಿನ ಬೆಮಳಖೇಡಾ ಗ್ರಾಮದ ಸರ್ವೆ ಸಂಖ್ಯೆ 440 ಈ ಜಮೀನನ್ನು ಸರ್ವೆ ಮಾಡಿ ರೈತರ ಪಹಣಿ ಕರೆಕ್ಷನ್ ಇರುತ್ತದೆ. ಈ ಕಡತ-ಕ್ಕೆ ಸಂಬಂಧಿಸಿದಂತೆ ಚಿಟಗುಪ್ಪಾ ತಹಸೀಲ್ದಾರ ರವರು ಅರಣ್ಯ ಇಲಾಖೆಗೆ ಕಡತವನ್ನು ಈ ಫೈಲ್ ಮೊಲಕ ಸಲ್ಲಿಸಿ ಸುಮಾರು 8 ತಿಂಗಳು ಗತಿಸುತ್ತಿದೆ. ಆದರೆ ಅರಣ್ಯ ಇಲಾಖೆಯವರು ಮಾತ್ರ. ಈ ಫೈಲ್ ಕಿಯನ್ನು ಇಲ್ಲಿಯವರೆಗೆ ಲಾಗಿನ್




ಮಾಡಿಕೊಂಡಿರುವುದಿಲ್ಲ ಎಂಬ ಮಾಹಿತಿ ದೊರಕಿದೆ. ಹಾಗಾದರೇ ಈ ಫೈಲಿಂಗ್ ಮಾಡಿದ್ದು ಜನರ ಕೆಲಸಗಳು ಬೇಗ ಆಗಬೇಕಂತೋ ಅಥವಾ ಡಿಲೆ ಆಗಬೇಕಮತೋ ಎಂಬ ಪ್ರಶ್ನೆ ರೈತರಲ್ಲಿ ಕಾಡುತ್ತಿದೆ.

ಚಿಟಗುಪ್ಪಾ ತಹಸೀಲ್ದಾರ ಕಛೇರಿಯಲ್ಲಿ ನಾಲ್ಕು ತಿಂಗಳ ಅಲೆದಾಟ ಇವಾಗ ಅರಣ್ಯ ಇಲಾಖೆಯಲ್ಲಿ 8 ತಿಂಗಳಿಂದ ಅಲೆದಾಟ. ಅರಣ್ಯ ಸಚಿವರು ಅಲ್ಲದೇ ಜಿಲ್ಲಾ ಉಸ್ತುವಾರಿ ಸಚಿವರು ಇಲ್ಲಿಯವರೇ ಇದ್ದಾರೆ. ತಕ್ಷಣ ಕಂದಾಯ ಇಲಾಖೆಯವರು ತಪ್ಪಿಸ್ಥರಿದ್ದರೆ ಅವರ ಮೇಲೆ ಕ್ರಮ ಜರುಗಲಿ ಅಥವಾ ಅರಣ್ಯ ಇಲಾಖೆಯವರಿದ್ದರೆ ಅವರ ಮೇಲೆ ಕ್ರಮ ಜರುಗಿಸಿ ರೈತರಿಗೆ ಆದಷ್ಟು ಬೇಗ ಪರಿಹಾರ ದೊರಕುವಂತಾಗಬೇಕು ಎಂದು ರೈತರು ಒತ್ತಾಯಿಸಿದ್ದಾರೆ.

## ಮಾಜಿ ಸಚಿವ ದಿ.ಬಸವರಾಜ ಪಾಟೀಲರ ೯ ನೇ ಪುಣ್ಯ ಸ್ಮರಣೆಯಲ್ಲಿ ಭಾಗವಹಿಸಲು ಮನವಿ

ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್. ಮಾಜಿ ಸಚಿವರು. ಧಿಮಮತ ನಾಯಕರಾಗಿ ಕಾರ್ಯನಿರ್ವಹಿಸಿದ ದಿ.ಬಸವರಾಜ ಪಾಟೀಲ ರವರ 9ನೇ ಪುಣ್ಯ ಸ್ಮರಣೆ ಅ.10 ರಂದು ಗ್ರಾಮ ದೇವರಾದ ಶ್ರೀ ವೀರಭದ್ರೇಶ್ವರ ದೇವಸ್ಥಾನದ ಸಮಿಪ ಇರುವ ಬಸವರಾಜ ಪಾಟೀಲ ರವರ ಕಲ್ಯಾಣ ಮಂಟಪದಲ್ಲಿ ಬೆಳಗ್ಗೆ 11 ಗಂಟೆಗೆ ಜರುಗಲಿದೆ. ಎಂದು ಉದ್ಯಮಿ ಹರವಿಂದರ್ ಸಿಂಗ್




ಪತ್ರಿಕೆಗೆ ಮಾಹಿತಿ ನೀಡಿದ್ದಾರೆ.

ಇಂದು ಪುಣ್ಯಸ್ಮರಣೆ ನಿಮಿತ್ಯ ಭಜನೆ ಕೀರ್ತನೆ, ಸೇರಿದಂತೆ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗುವವು. ಹಾಗಾಗಿ ಹುಮನಾಬಾದ್ ನಗರದ ವಿವಿಧ ಸಂಘ ಸಂಸ್ಥೆ ಯವರು, ಅಭಿಮಾನಿಗಳು, ಕಾಂಗ್ರೆಸ್ ಪಕ್ಷದ ಕಾರ್ಯಕರ್ತರು, ಹಿತಚಿಂತಕರು, ಗಣ್ಯರು ಸೇರಿದಂತೆ ಸರ್ವರು ಈ ಕಾರ್ಯಕ್ರಮದಲ್ಲಿ ಭಾಗವಹಿಸಬೇಕೆಂದು ಹರವಿಂದರ್ ಸಿಂಗ್ ಮನವಿ ಮಾಡಿದ್ದಾರೆ

## ನಕಲಿ ವೋಟ್ ನಿಂದಲೇ ನನ್ನ ಮೊದಲ ಸೋಲಾಯ್ತು: ಖರ್ಗೆ

ಮಲ್ಲಮ್ಮನುಡಿವಾರ್ತೆ ಬೆಂಗಳೂರು:ಅ.8: ಸೋಲಿಲ್ಲದ ಸರದಾರ ಎಂದೇ ಗುರುತಿಸಿಕೊಂಡಿದ್ದ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು 2019 ರ ಲೋಕಸಭಾ ಚುನಾವಣೆಯಲ್ಲಿ ತಮ್ಮ ಮೊದಲ ಸೋಲಿಗೆ ಚುನಾವಣಾ ಅಕ್ರಮವೇ ಕಾರಣ ಎಂದು ಶುಕ್ರವಾರ ಆರೋಪಿಸಿದ್ದಾರೆ ಮತಗಳ್ಳತನದ ವಿರುದ್ಧ ಇಂದು ನಗರದ ಫ್ರೀಡಂಪಾರ್ಕ್‌ನಲ್ಲಿ ನಡೆದ ಕಾಂಗ್ರೆಸ್ ಬೃಹತ್ ಪ್ರತಿಭಟನೆಯಲ್ಲಿ ಮಾತನಾಡಿದ ಮಲ್ಲಿಕಾರ್ಜುನ ಖರ್ಗೆ ಅವರು, ತಮ್ಮ ಸುದೀರ್ಘ ರಾಜಕೀಯ ಜೀವನದಲ್ಲಿ 2019ರ ಸೋಲು ಹೊರತುಪಡಿಸಿ, ಎಂದಿಗೂ ಚುನಾವಣೆಯಲ್ಲಿ ಸೋಲು ಅನುಭವಿಸಿಲ್ಲ ಎಂದು ಹೇಳಿದರು. ನಾನು 2019ರ ಲೋಕಸಭೆ ಚುನಾವಣೆ ವೇಳೆ ಚುನಾವಣಾ ರಿಗ್ಗಿಂಗ್‌ಗೆ



ಬಲಿಯಾಗಿದ್ದೇನೆ. ನನ್ನ ಜೀವನದಲ್ಲಿ 12ಕ್ಕೂ ಹೆಚ್ಚು ಚುನಾವಣೆಗಳನ್ನು ಗೆದ್ದಿದ್ದೇನೆ. ಆದರೆ 2019 ರ ಲೋಕಸಭಾ ಚುನಾವಣೆಯಲ್ಲಿ ಮೊದಲ ಬಾರಿಗೆ ಚುನಾವಣಾ ಅಕ್ರಮದಿಂದಾಗಿ ನಾನು ಸೋತಿದ್ದೇನೆ" ಎಂದು ಕಾಂಗ್ರೆಸ್ ಮುಖ್ಯಸ್ಥರು ಆರೋಪಿಸಿದರು.

2019ರ ಸಂಸತ್ ಚುನಾವಣೆಯಲ್ಲಿ ತಾವು ಸ್ಪರ್ಧಿಸಿದ್ದ ಗುಲ್ಬರ್ಗ ಲೋಕಸಭಾ ಕ್ಷೇತ್ರ ವ್ಯಾಪ್ತಿಯ ಐದು ವಿಧಾನಸಭಾ ಕ್ಷೇತ್ರಗಳಲ್ಲಿ ಬಿಜೆಪಿ "ನಕಲಿ ಮತದಾನ"ದಲ್ಲಿ ತೊಡಗಿತ್ತು. ಪ್ರತಿಯೊಂದರಲ್ಲೂ 20,000 ಮತಗಳನ್ನು ಗಳಿಸಿದೆ ಎಂದು ಖರ್ಗೆ ಗಂಭೀರ ಆರೋಪ ಮಾಡಿದ್ದಾರೆ.

ವಿರೋಧಿಗಳನ್ನು "ಬೆದರಿಸಲು" ಮತ್ತು ಅಧಿಕಾರ ಪಡೆಯಲು ಬಿಜೆಪಿ ಜಾರಿ ನಿರ್ದೇಶನಾಲಯ, ಕೇಂದ್ರ ತನಿಖಾ ಸಂಸ್ಥೆ ಮತ್ತು ಆದಾಯ ತೆರಿಗೆ ಇಲಾಖೆಯನ್ನು ಬಳಸುತ್ತಿದೆ ಎಂದು ಖರ್ಗೆ, ಮೋದಿ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದರು.

ಕರ್ನಾಟಕದ ಉದಾಹರಣೆಯನ್ನು ಉಲ್ಲೇಖಿಸಿ,

(2ನೇ ಪುಟ ನೋಡಿ)

## ಮತಗಳ್ಳತನ; ಕೂಡಲೇ ಪ್ರಧಾನಿ ಮೋದಿ ರಾಜೀನಾಮೆ ನೀಡಬೇಕು: ಸಿಎಂ ಆಗ್ರಹ

ಬೆಂಗಳೂರು:ಅ.8: ಲೋಕಸಭಾ ಚುನಾವಣೆಯಲ್ಲಿ ಕರ್ನಾಟಕ ಮಾತ್ರವಲ್ಲದೆ ಇಡೀ ದೇಶದಲ್ಲಿ ಮತಗಳ್ಳತನವಾಗಿದೆ. ಹೀಗಾಗಿ ಮೋದಿ ಪ್ರಧಾನಿ ಸ್ಥಾನದಲ್ಲಿ ಮುಂದುವರೆಯಲು ಯಾವುದೇ ನೈತಿಕತೆ ಇಲ್ಲ. ಅವರು ಕೂಡಲೇ ರಾಜೀನಾಮೆ ಕೊಡಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಶುಕ್ರವಾರ ಆಗ್ರಹಿಸಿದ್ದಾರೆ.

ಮತಗಳ್ಳತನದ ವಿರುದ್ಧ ಇಂದು ನಗರದ ಫ್ರೀಡಂಪಾರ್ಕ್‌ನಲ್ಲಿ ನಡೆದ ಕಾಂಗ್ರೆಸ್ ಬೃಹತ್ ಪ್ರತಿಭಟನೆಯಲ್ಲಿ ಮಾತನಾಡಿದ ಸಿಎಂ ಸಿದ್ದರಾಮಯ್ಯ, ನರೇಂದ್ರ ಮೋದಿಗೆ ಪ್ರಧಾನಿ ಕುರ್ಚಿಯಲ್ಲಿ ಕೂರುವ ನೈತಿಕ ಹಕ್ಕಿಲ್ಲ. ಈ ಕೂಡಲೇ ರಾಜೀನಾಮೆ ನೀಡಬೇಕು ಎಂದರು.

ಚುನಾವಣಾ ಆಯೋಗ ಬಿಜೆಪಿಯ ಶಾಖಾ ಕಚೇರಿ ಆಗಿದೆ.



ಮತಗಳ್ಳತನದ ವಿರುದ್ಧ ಕರ್ನಾಟಕ ರಾಜ್ಯದಿಂದ ಆರಂಭವಾಗಿರುವ ಪ್ರತಿಭಟನಾ ಅಭಿಯಾನ ಇಡೀ ದೇಶಾದ್ಯಂತ ವ್ಯಾಪಿಸಲಿದೆ. ರಾಹುಲ್ ಗಾಂಧಿಯವರು ಸಂಪೂರ್ಣವಾಗಿ ಅಧ್ಯಯನ ಮಾಡಿ, ಮತದಾನದ ಅಂಕಿ ಅಂಶಗಳನ್ನು ಸಂಗ್ರಹಿಸಿ ವಿಶ್ಲೇಷಣೆ ಮಾಡಿ ದಾಖಲೆಗಳ ಸಮೇತ ದೇಶದ ಜನರ ಮುಂದೆ ಇಟ್ಟಿದ್ದಾರೆ.

ಚುನಾವಣಾ ಆಯೋಗ ಸಂವಿಧಾನದ ಅಡಿಯಲ್ಲಿ ನ್ಯಾಯಬದ್ಧವಾಗಿ ನಡೆದುಕೊಳ್ಳಬೇಕು. ಸಂವಿಧಾನ ಕೊಟ್ಟಿರುವ ಮತದಾನದ ಮೂಲಭೂತ ಹಕ್ಕನ್ನು ಯಾರೂ ಕಿತ್ತುಕೊಳ್ಳಲು ಸಾಧ್ಯವಿಲ್ಲ. ಅದಕ್ಕೆ ದೇಶದ ಜನತೆ ಅವಕಾಶ ಕೊಡುವುದಿಲ್ಲ ಎಂದರು.

ಮನುವಾದಿಗಳು ಸಂವಿಧಾನ ವಿರೋಧಿಗಳು. ಇವರು ಸಂವಿಧಾನದ ಪ್ರಕ್ರಿಯೆಯನ್ನೇ ತಪ್ಪುದಾರಿಗೆ ಎಳೆಯುತ್ತಿದ್ದಾರೆ. ಮಹದೇವಪುರ ವಿಧಾನಸಭಾ ಕ್ಷೇತ್ರದಲ್ಲಿ ನಡೆದಿರುವ ವಂಚನೆ ಕಾರಣದಿಂದ ಸೆಂಟ್ರಲ್ ಲೋಕಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್ ಸೋತಿದೆಯೇ ಹೊರತು ಜನಾಭಿಪ್ರಾಯ ಕಾಂಗ್ರೆಸ್ ಪರವಾಗಿಯೇ ಇತ್ತು ಎನ್ನುವುದು ಈಗ ಗೊತ್ತಾಗಿದೆ ಎಂದರು.

ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ರಾಜ್ಯದಲ್ಲಿ 14 ಸೀಟುಗಳನ್ನು ಗೆಲ್ಲಬೇಕಿತ್ತು. ಆದರೆ ಮತಗಳ್ಳತನದ

(2ನೇ ಪುಟ ನೋಡಿ)

## ಮತದಾರರ ಗುರುತಿನ ಚೀಟಿಗೆ ಆಧಾರ್ ಲಿಂಕ್ ಮಾಡಿ: ಎಚ್‌ಡಿಕೆ

ನವದೆಹಲಿ:ಅ.8: ಚುನಾವಣೆ ಆಯೋಗದ ಮೇಲೆ ಅನುಮಾನ ಪಟ್ಟಿರುವ ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ವಿರುದ್ಧ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಆಕ್ರೋಶ ವ್ಯಕ್ತ ಪಡಿಸಿದ್ದಾರೆ.

ಈ ಸಂಬಂಧ ತಮ್ಮ ಸಾಮಾಜಿಕ ಮಾಧ್ಯಮ ಎಕ್ಸ್‌ನಲ್ಲಿ ಪೋಸ್ಟ್ ಹಂಚಿಕೊಂಡಿರುವ ಅವರು, ಮತಗಳ್ಳತನವಾಗಿದೆ ಎಂದು ಸಾಂವಿಧಾನಿಕ ಸಂಸ್ಥೆಗಳ ಮೇಲೆ ಅನುಮಾನ ಪಟ್ಟಿರುವುದು ಕಿಡಿಗೇಡಿ ಪಿತೂರಿಯಾಗಿದೆ. ಚುನಾವಣೆಯಲ್ಲಿ ಎಸಗಿದ ಪಾಪವನ್ನು ಸುಳ್ಳಿನಿಂದ ಮುಚ್ಚಿಕೊಳ್ಳಲು ಚುನಾವಣೆ ಆಯೋಗದ ಮೇಲೆ ಸುಳ್ಳಿನ ಸುರಿಮಳೆ ಜನತಂತ್ರಕ್ಕೆ ನೇಣು ಬಿಗಿಯುವ ದೂರ್ತ ಹುನ್ನಾರ. ಅಮೃತಕಾಲದ ಪ್ರಜಾಪ್ರಭುತ್ವಕ್ಕೆ ವಿಷವಿಕ್ಕುವ ಘೋರ ಷಡ್ಯಂತ್ರ ಎಂದು ಕುಮಾರಸ್ವಾಮಿ



ಕಿಡಿಕಾರಿದ್ದಾರೆ. ಮುಂದುವರೆದು, ಮತಗಳ್ಳತನ ಆರೋಪಕ್ಕೆ ಒಂದೇ ಮದ್ದು. ಮತದಾರರ ಗುರುತಿನ ಚೀಟಿಗೆ ಆಧಾರ್ ಸಂಖ್ಯೆ ಲಿಂಕ್ ಮಾಡುವುದು. ಅಷ್ಟು ಮಾಡಿದರೆ ಮತಗಳ್ಳರ ಆಟಕ್ಕೆ ಅಂಕೆ ಬೀಳುವುದು ಗ್ಯಾರಂಟಿ. ಕೇಂದ್ರೀಯ ಚುನಾವಣೆ ಆಯೋಗಕ್ಕೆ ನನ್ನ ಮನವಿ ಅಥವಾ ಒತ್ತಾಯ ಇಷ್ಟೇ; ಮುಳ್ಳನ್ನು ಮುಳ್ಳಿನಿಂದಲೇ ತೆಗೆಯಿರಿ ಎಂದು ರಾಹುಲ್ ಗಾಂಧಿ ಆರೋಪಕ್ಕೆ ತಿರುಗೇಟು ನೀಡುವ ಮೂಲಕ ಕೇಂದ್ರಕ್ಕೆ ಸಲಹೆ ನೀಡಿದ್ದಾರೆ.

## ವೃದ್ಧರು, ವಿದ್ಯಾರ್ಥಿಗಳಿಗೆ ಪ್ರತಿ ನಿತ್ಯ ೩ ಕಿ.ಮೀ. ಕಾಲ್ನಡಿಗೆ ಅನಿವಾರ್ಯ



ಮಲ್ಲಮ್ಮನುಡಿ ವಾರ್ತೆ ಬೀದರ. ಅ. 08 : ಕಮಲನಗರ ಸುಮಾರು 10 ವರ್ಷಗಳಿಂದ ಸೂಕ್ತ ಬಸ್ ವ್ಯವಸ್ಥೆಯಿಲ್ಲದ ಕಾರಣ ಇಲ್ಲಿನ ಗ್ರಾಮಸ್ಥರು ಹಾಗೂ ವಿದ್ಯಾರ್ಥಿಗಳಿಗೆ ಶಾಲಾ-ಕಾಲೇಜಿಗೆ ತೆರಳಲು, ತಾಲ್ಲೂಕು ಕೇಂದ್ರದಲ್ಲಿ ತಮ್ಮ ವೈಯಕ್ತಿಕ ಕೆಲಸಗಳಿಗಾಗಿ ತೆರಳಲು ಕಾಲ್ನಡಿಗೆ ಅನಿವಾರ್ಯವಾಗಿದೆ.

ತಲುಪಬೇಕಾದ ಸ್ಥಳಕ್ಕೆ ಹೋಗಲು ತಮ್ಮ ಬಹುತೇಕ ಸಮಯವನ್ನು ನಡಿಗೆಗಾಗಿಯೇ ವ್ಯಯಿಸಬೇಕಾಗಿದೆ.

ಇದರಿಂದ ವಿದ್ಯಾರ್ಥಿಗಳ ಮೇಲೂ ಪರಿಣಾಮ ಬೀರುತ್ತಿದೆ.

ತಾಲ್ಲೂಕಿನ ಬಾಲೂರ(ಕೆ), ಮುರುಗ(ಕೆ) ಗ್ರಾಮಗಳ ಗ್ರಾಮಸ್ಥರು, ವಿದ್ಯಾರ್ಥಿಗಳು ಪ್ರತಿ ನಿತ್ಯ 3 ಕಿ.ಮೀ. ದೂರವನ್ನು ನಡೆದೇ ಸಾಗಬೇಕು. ಕಮಲನಗರದಿಂದ ಬಾಲೂರ(ಕೆ) 3 ಕಿ.ಮೀ. ಹಾಗೂ ಮುರುಗ(ಕೆ) 1 ಕಿ.ಮೀ. ಅಂತರದಲ್ಲಿವೆ. ಎರಡೂ ಗ್ರಾಮಗಳು ಸೇರಿ ಸುಮಾರು 2ರಿಂದ 3 ಸಾವಿರಕ್ಕೂ ಅಧಿಕ ಜನಸಂಖ್ಯೆ ಇದೆ. ಗ್ರಾಮಸ್ಥರು ತಮ್ಮ ಕೆಲಸ ಕಾರ್ಯಗಳನ್ನು ಮಾಡಿಕೊಳ್ಳಬೇಕಾದರೆ ಕಮಲನಗರ ತಾಲ್ಲೂಕು ಕೇಂದ್ರಕ್ಕೆ ತೆರಳಬೇಕು. ಬಸ್ ಸೌಕರ್ಯವಿಲ್ಲ. ಈ ಸಂಬಂಧ ಹಲವು ಬಾರಿ ಜನಪ್ರತಿನಿಧಿಗಳು, ಅಧಿಕಾರಿಗಳಿಗೆ ಮನವಿ ಮಾಡಿದರೂ ಪ್ರಯೋಜನವಾಗಿಲ್ಲ ಎನ್ನುವುದು ಗ್ರಾಮಸ್ಥರ ಅಳಲು.

(2ನೇ ಪುಟ ನೋಡಿ)

## ಕೃಷಿ, ತೋಟಗಾರಿಕೆ ಉತ್ಪನ್ನಗಳಿಗೆ ಬೆಂಬಲ ಬೆಲೆ; ರೈತರಿಗೆ ಸಿಗಲಿದೆ ೮ ಸಾ. ಕೋಟಿ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಅ.8: ಈ ಬಾರಿ ರೈತರಿಗೆ ಸಿಹಿ ಸುದ್ದಿ ಕೊಡಲು ನಿರ್ಧಾರ ಮಾಡಿದ್ದೇವೆ. ಕೃಷಿ ಹಾಗೂ ತೆ-ೂೀಟಗಾರಿಕೆ ಉತ್ಪನ್ನಗಳಿಗೆ ಬೆಂಬಲ ಬೆಲೆ ನೀಡಲು ಮುಂದಾಗಿದ್ದು, 8 ಸಾವಿರ ಕೋಟಿ ರೂ. ರೈತರಿಗೆ ಸಿಗಲಿದೆ ಎಂದು ಕೃಷಿ ಸಚಿವ ಚಲುವರಾಯಸ್ವಾಮಿ ಹೇಳಿದರು.

ಬೆಂಗಳೂರಿನಲ್ಲಿ ಅವರು ಸುದ್ದಿಗಾರರೊಂದಿಗೆ ಮಾತನಾಡಿ, ಕೃಷಿ ಹಾಗೂ ತೋಟಗಾರಿಕೆ ಉತ್ಪನ್ನಗಳಿಗೆ ಬೆಂಬಲ ಬೆಲೆ ನೀಡಲು ಮುಂದಾಗಿದ್ದೇವೆ. ಸುಮಾರು 7 ಲಕ್ಷ ರೈತರಿಂದ ಕೃಷಿ ಹಾಗೂ ತೋಟಗಾರಿಕೆ ಉತ್ಪನ್ನಗಳಿಗೆ ಬೆಂಬಲ ಬೆಲೆ ಅಡಿ ಖರೀದಿಗೆ ನಿರ್ಧಾರ ಮಾಡಲಾಗಿದೆ. ಈ ವರ್ಷ ರಾಗಿ 6 ಲಕ್ಷ ಮೆಟ್ರಿಕ್ ಟನ್ ಖರೀದಿಗೆ ನಿರ್ಧಾರ ಮಾಡಲಾಗಿದೆ. ಈ ಬಾರಿ ಪ್ರತಿ ರೈತರಿಂದ ಗರಿಷ್ಠ 50 ಕ್ವಿಂಟಾಲ್ ಖರೀದಿಗೆ ನಿರ್ಧರಿಸಲಾಗಿದೆ. ಸೆಪ್ಟೆಂಬರ್‌ನಿಂದ ನೋಂದಣಿ ಪ್ರಾರಂಭ ಮಾಡುತ್ತೇವೆ.



ಜನವರಿಯಿಂದ ಮಾರ್ಚ್ ವರೆಗೂ ಖರೀದಿ ಮಾಡ್ತೀವಿ. 4,886 ರೂ. ಪ್ರತಿ ಕ್ವಿಂಟಾಲ್‌ಗೆ ನೀಡಿ ಖರೀದಿಗೆ ನಿರ್ಧಾರ ಮಾಡಲಾಗಿದೆ. ಕಳೆದ ವರ್ಷಕ್ಕಿಂತ 596 ರೂ.ಹೆಚ್ಚಳ ಮಾಡಲಾಗಿದೆ ಎಂದರು.

ಭತ್ತ 3 ಲಕ್ಷ ಮೆಟ್ರಿಕ್ ಟನ್ ಖರೀದಿಗೆ ನಿರ್ಧರಿಸಲಾಗಿದೆ. ಇದು ಸಹ ಸೆಪ್ಟೆಂಬರ್‌ನಿಂದ ನೋಂದಣಿ ಶುರುವಾಗಲಿದೆ. ನವೆಂಬರ್, ಡಿಸೆಂಬರ್‌ನಲ್ಲಿ ಖರೀದಿ ಮಾಡುತ್ತೇವೆ. 2,369 ರೂ. ಬೆಂಬಲ ಬೆಲೆ ಪ್ರತಿ ಕ್ವಿಂಟಾಲ್ ಕೊಡುತ್ತೇವೆ. ಈ ವರ್ಷ 69 ರೂ. ಜಾಸ್ತಿ ಕೊಡ್ತಿದ್ದೇವೆ. ಇನ್ನೂ ಬಿಳಿ ಜೋಳ 3 ಲಕ್ಷ ಮೆಟ್ರಿಕ್ ಟನ್ ಖರೀದಿಗೆ ನಿರ್ಧರಿಸಲಾಗಿದ್ದು, ಪ್ರತಿ ಕ್ವಿಂಟಾಲ್‌ಗೆ 3,669 ರೂ. ಕೊಡಲು ನಿರ್ಧಾರ ಮಾಡಲಾಗಿದೆ. ಕಳೆದ ವರ್ಷಕ್ಕಿಂತ 328 ರೂ. ಜಾಸ್ತಿ ನೀಡಲಾಗುತ್ತಿದೆ. ಅಕ್ಟೋಬರ್‌ನಿಂದ ನೋಂದಣಿ ಪ್ರಾರಂಭವಾಗಲಿದ್ದು, ಡಿಸೆಂಬರ್ ನಿಂದ ಮಾರ್ಚವರೆಗೆ ಖರೀದಿ ಮಾಡಲಾಗುತ್ತದೆ ಎಂದರು.

ಇದೇ ಮೊದಲ ಬಾರಿಗೆ ನವಣೆ, ಸಾಮೆ, ಹಾಕರ ಮುಂತಾದ ಸಿರಿಧಾನ್ಯಗಳು ಖರೀದಿಗೆ ನಿರ್ಧಾರ ಮಾಡಲಾಗಿದೆ. ಎಂಎಸ್‌ಪಿ 4,886 ಜೊತೆಗೆ ಸರ್ಕಾರದಿಂದ 114 ರೂ. ಸೇರಿ 5,000 ರೂ. ಪ್ರತಿ ಕ್ವಿಂಟಾಲ್‌ಗೆ ನೀಡಿ ಖರೀದಿಸಲಾಗುತ್ತದೆ. ಒಟ್ಟಾರೆ 7 ಲಕ್ಷಕ್ಕೂ ಹೆಚ್ಚು ರೈತರಿಂದ 15 ಲಕ್ಷ ಮೆಟ್ರಿಕ್ ಟನ್ ಉತ್ಪನ್ನಗಳನ್ನ ಅಂದಾಜು 8 ಸಾವಿರ ಕೋಟಿ ರೂ. ವೆಚ್ಚದಲ್ಲಿ ಖರೀದಿಗೆ ನಿರ್ಧಾರ ಮಾಡಲಾಗಿದೆ. ಯೋಜನೆಯ ಲಾಭವನ್ನು ಮಧ್ಯವರ್ತಿಗಳು ಪಡೆಯುವುದನ್ನ ತಡೆಯಲು ಕರ್ನಾಟಕ

(2ನೇ ಪುಟ ನೋಡಿ)

## ಮತಗಳ್ಳತನ ಆರೋಪ: ಘೋಷಣೆಗೆ ಸಹಿ ಹಾಕಿ ಅಥವಾ ಕ್ಷಮೆಯಾಚಿಸಿ




ಮಲ್ಲಮ್ಮನುಡಿವಾರ್ತೆ ನವದೆಹಲಿ:ಅ.8: ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿಯವರು ಮತಕಳ್ಳತನ ಬಗ್ಗೆ ತಾವು ನೀಡುವ ವಿವರಣೆ ಸತ್ಯವಾಗಿದೆ ಎಂದು ಹೇಳುವುದಾದರೆ, ಚುನಾವಣಾ ನಿಯಮಗಳ ಅಡಿಯಲ್ಲಿ ಘೋಷಣೆಗೆ ಸಹಿ ಹಾಕಲಿ ಮತ್ತು ಮತದಾರರ ಪಟ್ಟಿಯಿಂದ ತಪ್ಪಾಗಿ ಸೇರಿಸಲಾದ ಅಥವಾ ತೆಗೆದುಹಾಕಲಾದ ಹೆಸರುಗಳನ್ನು ಸಲ್ಲಿಸಲಿ ಎಂದು ಚುನಾವಣಾ ಆಯೋಗ ಸವಾಲು ಹಾಕಿದೆ ಎಂದು ತಿಳಿದುಬಂದಿದೆ.

ಕನಿಷ್ಠ ಮೂರು ರಾಜ್ಯಗಳಲ್ಲಿ ಮತ ಕಳ್ಳತನ ನಡೆದಿದೆ ಎಂದು ರಾಹುಲ್ ಗಾಂಧಿ ಆರೋಪಿಸಿದ್ದು ಈ ಬಗ್ಗೆ ಇಂದು ವಿಡಿಯೊ ಮೂಲಕ ವಿವರಣೆ ನೀಡಿದ್ದಾರೆ ಮತ್ತು ಬೆಂಗಳೂರಿನಲ್ಲಿ ಇಂದು ನಡೆದ ರ‍್ಯಾಲಿಯಲ್ಲಿ ಚುನಾವಣಾ ಆಯೋಗ ಮತ್ತು ಮೋದಿ ಸರ್ಕಾರ ವಿರುದ್ಧ ಹರಿಹಾಯ್ದಿದ್ದಾರೆ. ಇದೀಗ ರಾಹುಲ್ ಗಾಂಧಿಯವರು ಮಾಡುತ್ತಿರುವ ಆರೋಪಗಳು, ಕೊಡುತ್ತಿರುವ ವಿವರಣೆಗಳ ಬಗ್ಗೆ ಸಹಿ ಮಾಡದಿದ್ದರೆ, ಅವರು ತಮ್ಮ ವಿಶ್ಲೇಷಣೆಯಲ್ಲಿ ನಂಬಿಕೆ ಇಟ್ಟುಕೊಂಡಿಲ್ಲ ಎಂದರ್ಥ ಮತ್ತು ಇದರಿಂದ ಅವರು ಮಾಡುತ್ತಿರುವುದು ಅಸಂಬದ್ಧ ಆರೋಪ ಎಂಬ ತೀರ್ಮಾನಕ್ಕೆ ಬರಬೇಕಾಗುತ್ತದೆ ಎಂದು ಹೇಳಿದೆ. ಒಂದು ವೇಳೆ ವಿಫಲವಾದರೆ ರಾಷ್ಟ್ರದ ಮುಂದೆ ಕ್ಷಮೆಯಾಚಿಸಬೇಕಾಗುತ್ತದೆ ಎಂದು ಚುನಾವಣಾ ಆಯೋಗ ಹೇಳಿದೆ.

(2ನೇ ಪುಟ ನೋಡಿ)

## ಒಂದನೇ ಪುಟದಿಂದ

# ೩ ಕಿ.ಮೀ. ಕಾಲ್ನಡಿಗೆ ಅನಿವಾರ್ಯ

ಹತ್ತು ವರ್ಷಗಳಿಂದ ಸಾರಿಗೆ ವ್ಯವಸ್ಥೆ ಇಲ್ಲ. 6 ತಿಂಗಳ ಹಿಂದೆ ಕಲ್ಯಾಣ ಕರ್ನಾಟಕ ಸಾರಿಗೆ ಸಂಸ್ಥೆ ಬಸ್ ಹೋರಂಡಿ ಮಾರ್ಗವಾಗಿ ಬಾಲೂರ(ಕೆ), ಮುರುಗ(ಕೆ) ಗ್ರಾಮದಿಂದ ಕಮಲನಗರಕ್ಕೆ ಬೆಳಿಗ್ಗೆ–ಸಂಜೆ ಎರಡು ಬಾರಿಯಂತೆ ಸುಮಾರು ಒಂದು ತಿಂಗಳು ಸಂಚರಿಸಿತ್ತು. ನಂತರ ತದನಂತರ ಇದೀಗ ಮತ್ತೆ ಬಸ್ ವ್ಯವಸ್ಥೆ ಇಲ್ಲದಂತಾಗಿದೆ. ಬಸ್ ಅವ್ಯವಸ್ಥೆಯಿಂದ ವೃದ್ಧರು, ಶಾಲಾ–ಕಾಲೇಜು ವಿದ್ಯಾರ್ಥಿಗಳು ತೊಂದರೆ ಅನುಭವಿಸುವಂತಾಗಿದೆ ಎಂದು ಗ್ರಾಮಸ್ಥರಾದ ಶಿವಕುಮಾರ ಸಿರಸಗೆ, ಅವಿನಾಶ ಮೇತ್ರೆ, ಬಾಲಾಜಿ ಪಾಟೀಲ ಬೇಸರ ವ್ಯಕ್ತಪಡಿಸಿದರು.

ಕೂಡಲೇ ಸಂಬಂಧಪಟ್ಟ ಈಶಾನ್ಯ ಸಾರಿಗೆ ಸಂಸ್ಥೆ ಅಧಿಕಾರಿಗಳು ಬಾಲೂರ(ಕೆ), ಮುರುಗ(ಕೆ) ಗ್ರಾಮಕ್ಕೆ ಬಸ್ ವ್ಯವಸ್ಥೆ ಮಾಡಬೇಕು. ಇಲ್ಲದಿದ್ದರೆ ಮುಂಬರುವ ದಿನಗಳಲ್ಲಿ ಪ್ರತಿಭಟನೆ ನಡೆಸಲಾಗುವುದು ಎಂದು ಯುವರಾಜ ಬಿರಾದಾರ, ನೇತಾಜಿ ಪಾಟೀಲ, ವಿಜು ಮುರ್ಕೆ ಎಚ್ಚರಿಕೆ ನೀಡಿದ್ದಾರೆ.

ವಿಠ್ಠಲರಾವ ಪಾಟೀಲ ರೈತ ಮುಖಂಡವಿದ್ಯಾರ್ಥಿಗಳು ನಡಿಗೆಯಲ್ಲಿ ಶಾಲಾ–ಕಾಲೇಜುಗಳಿಗೆ ತೆರಳುವುದರಿಂದ ಸುಸ್ತಾಗುತ್ತಾರೆ. ಇದರಿಂದ ಅಭ್ಯಾಸದ ಮೇಲೆ ಪರಿಣಾಮ ಬೀರುತ್ತಿದೆ. ಹೀಗಾಗಿ ವಿದ್ಯಾರ್ಥಿಗಳಿಗಾಗಿ ಬಸ್ ವ್ಯವಸ್ಥೆ ಮಾಡಬೇಕುಜ್ಞಾನೇಶ್ವರ ಚ್ಯಾಂಡೇಶ್ವರೆ ಗ್ರಾಮಸ್ಥಬಾಲೂರ(ಕೆ) ಮುರುಗ(ಕೆ) ಗ್ರಾಮಗಳಿಗೆ ಸಾರಿಗೆ ಸಂಸ್ಥೆ ಬಸ್ ಓಡಿಸಿದರೆ ಶಾಲಾ–ಕಾಲೇಜು ಮಕ್ಕಳಿಗೆ ಅನುಕೂಲವಾಗುತ್ತದೆ. ಗ್ರಾಮಸ್ಥರಿಗೆ ತಮ್ಮ ವೈಯಕ್ತಿಕ ಕಾರ್ಯ ಮಾಡಿಕೊಳ್ಳಲು ನೆರವಾಗುತ್ತದೆರಾಜಶೇಖರ ವ್ಯವಸ್ಥಾಪಕ ಔರಾದ್ ಬಸ್ ಘಟಕ.ಘಟಕಕ್ಕೆ ಹೊಸದಾಗಿ ಬಂದಿದ್ದೇನೆ. ಈ ಗ್ರಾಮಗಳಿಗೆ ಬಸ್ ಬಂದ್ ಆಗಿರುವುದು ನನ್ನ ಗಮನಕ್ಕೆ ಬಂದಿಲ್ಲ. ಗ್ರಾಮಸ್ಥರಿಂದ ಮನವಿ ಬಂದರೆ ಮೇಲಧಿಕಾರಿಗಳ ಗಮನಕ್ಕೆ ತಂದು ಅಗತ್ಯ ಕ್ರಮಕೈಗೊಳ್ಳುತ್ತೇನೆ.

# ಬೆಂಬಲ ಬೆಲೆ; ರೈತರಿಗೆ ಸಿಗಲಿದೆ ೮ ಸಾ. ಕೋಟಿ

ರಿಮೋಟ್ ಸೆನ್ಸಿಂಗ್ ಏಜನ್ಸಿಯಿಂದ ಉಪಗ್ರಹ ಛಾಯಾಚಿತ್ರ ಪಡೆದು ಬೆಳೆ ಸಮೀಕ್ಷೆ ವರದಿಯೊಂದಿಗೆ ತಾಳೆ ಮಾಡಿ ನೈಜ ರೈತರಿಗೆ ಲಾಭ ತಲುಪಿಸಲು ಕ್ರಮಕೈಗೊಳ್ಳಲಾಗಿದೆ ಎಂದರು.

ಈ ಬಾರಿ ಕೇಂದ್ರ ಸರ್ಕಾರ ಜೊತೆ ಸೇರಿ 10.23 ಲಕ್ಷ ಕ್ವಿಂಟಾಲ್ ಮಾವಿಗೆ, 15 ಸಾವಿರ ಫಲಾನುಭವಿಗಳಿಗೆ 42 ಕೋಟಿ ರೂ. ಪರಿಹಾರ ಕೊಡಲಾಗಿದೆ. ಇನ್ನೂ ರಾಗಿಯನ್ನು ಅರ್ಧ ಕೆಜಿ, 1 ಕೆಜಿ ಪ್ಯಾಕ್ ಮಾಡಿ ಬೇರೆ ರಾಜ್ಯಗಳಿಗೆ ಮಾರಾಟ ಮಾಡುವ ಯೋಚನೆ ಇದೆ. ಅದನ್ನು ಮುಂದಿನ ದಿನಗಳಲ್ಲಿ ಮಾಡುತ್ತೇವೆ ಎಂದರು.

# ಮೊದಲ ಸೋಲಾಯ್ತು: ಖರ್ಗೆ

ಸ್ಪಷ್ಟ ಬಹುಮತವಿಲ್ಲದಿದ್ದರೂ ಸಹ, ಬಿಜೆಪಿ ಅನೇಕ ಶಾಸಕರ ಪಕ್ಷಾಂತರವನ್ನು ಪ್ರೇರೇಪಿಸುವ ಮೂಲಕ ಆಗಿನ ಆಡಳಿತಾರೂಢ ಸಮ್ಮಿಶ್ರ ಸರ್ಕಾರವನ್ನು ಉರುಳಿಸಿತು ಎಂದರು.

ಗೋವಾ, ಮಹಾರಾಷ್ಟ್ರ ಮತ್ತು ಮಣಿಪುರದಲ್ಲೂ ಇದೇ ಆಗಿದೆ. ಅವರು(ಬಿಜೆಪಿ) ಯಾವುದೇ ಚುನಾವಣೆಯಲ್ಲಿ ಗೆಲ್ಲಲಿಲ್ಲ, ಆದರೆ ಅವರು ಜನರಿಗೆ ಹಣ ನೀಡಿ ಸರ್ಕಾರವನ್ನು ಖರೀದಿಸಿದರು" ಎಂದು ಕಾಂಗ್ರೆಸ್ ಅಧ್ಯಕ್ಷ ಆರೋಪಿಸಿದರು.

2024 ರ ಲೋಕಸಭಾ ಚುನಾವಣೆಯಲ್ಲಿ "ಮೋದಿ ಮತ್ತು ಕಂಪನಿ" ಕಾನೂನುಬದ್ಧವಾಗಿ ಗೆಲುವು ಸಾಧಿಸಿಲ್ಲ. ಬಿಜೆಪಿ ಗೆಲುವು "ರಹಸ್ಯ" ಈಗ ಬಯಲಾಗಿದೆ. ಅವರು ಮತಗಳ್ಳತನದಿಂದ ಗೆಲುವು ಸಾಧಿಸಿದ್ದಾರೆ ಎಂದು ಖರ್ಗೆ ಆರೋಪಿಸಿದರು.

# ರಾಜೀನಾಮೆ ನೀಡಬೇಕು: ಸಿಎಂ ಆಗ್ರಹ

ಕಾರಣದಿಂದ ನಾವು ಸೋತಿದ್ದೇವೆ. ಇವಿಎಂ ಬಂದ ಮೇಲೆ ಇವನ್ನು ದುರುಪಯೋಗ ಮಾಡಿಕೊಳ್ಳುವ ಕೆಲಸ ಆಗುತ್ತಿರುವುದು ಈಗ ದಾಖಲೆ ಸಮೇತ ಸಿಕ್ಕಿಬಿದ್ದಿದ್ದಾರೆ.

ರಾಹುಲ್ ಗಾಂಧಿಯಿಂದ ಪ್ರಜಾಪ್ರಭುತ್ವ ಮತ್ತು ಸಂವಿಧಾನ ರಕ್ಷಣೆಗೆ ಚಳವಳಿ ಆರಂಭವಾಗಿದೆ. ಇದಕ್ಕೆ ಇಡೀ ರಾಜ್ಯದ ಜನತೆ ಬೆಂಬಲಕ್ಕೆ ನಿಲ್ಲಲಿದ್ದಾರೆ ಎಂದರು.

ಚುನಾವಣಾ ಆಯೋಗ ಸಂವಿಧಾನದ ಆಶಯದಂತೆ ನಡೆದುಕೊಳ್ಳಬೇಕು. ಸಂವಿಧಾನ ದೇಶದ ಪ್ರತಿಯೊಬ್ಬ ಪ್ರಜೆಗೂ ಮತದಾನದ ಹಕ್ಕು ಕೊಟ್ಟಿದ್ದು, ಮತದಾನ ನಮ್ಮ ಮೂಲಭೂತ ಹಕ್ಕು, ನಮ್ಮ ಹಕ್ಕನ್ನು ಚಲಾಯಿಸಬೇಕು ಎಂದು ಸಿಎಂ ಸಿದ್ದರಾಮಯ್ಯ ಹೇಳಿದರು.

# ಪ್ರಧಾನಿಯಾಗಿದ್ದಾರೆ: ರಾಹುಲ್ ಗಾಂಧಿ

ಲೋಕಸಭಾ ಕ್ಷೇತ್ರ ಮುಂದಿಟ್ಟು ಪ್ರಶ್ನೆ ಕೇಳಲು ಮುಂದಾಗಿದ್ದೇವೆ. ಬೆಂಗಳೂರು ಕೇಂದ್ರ ಲೋಕಸಭೆ ಕ್ಷೇತ್ರದಲ್ಲಿ ಅಕ್ರಮ ಬಗ್ಗೆ ಪ್ರಶ್ನೆ ಮಾಡಿದ್ವಿ. ಮಹಾದೇವಪುರದಲ್ಲಿ 6.5 ಲಕ್ಷ ಮತಗಳಿವೆ, ಈ ಪೈಕಿ 1,00,250 ಮತಗಳ ಕಳವು ಆಗಿವೆ. ಪ್ರತಿ ಆರು ಮತಗಳಲ್ಲಿ ಒಂದು ಮತದ ಕಳವು ಮಾಡಲಾಗಿದೆ. ಐದು ಹಂತದಲ್ಲಿ ಮತ ಕಳವು ನಡೆದಿದೆ ಎಂದು ಗಂಭೀರ ಆರೋಪ ಮಾಡಿದರು.

ಒಬ್ಬನೇ ನಾಲ್ಕೈದು ಮತಗಟ್ಟೆಗಳಲ್ಲಿ ಮತ ಹಾಕಿದ್ದಾನೆ. ಇಂಥ 12 ಸಾವಿರ ಮತಗಳು ಚಲಾವಣೆ ಆಗಿವೆ. ನಕಲಿ ವಿಳಾಸ ಇರುವ 40 ಸಾವಿರ ಮತಗಳಿವೆ. ಒಂದೇ ವಿಳಾಸದಲ್ಲಿ 40–50 ಜನ ಇದ್ದಾರೆ. ಅಲ್ಲಿ ಹೋಗಿ ನೋಡಿದರೆ ಯಾರೂ ಸಿಗಲಿಲ್ಲ. ಆ ಮನೆಯ ಮಾಲೀಕ ಬಿಜೆಪಿಯ ಮುಖಂಡ. ನಕಲಿ ಫೋಟೊ ಇರುವ 4 ಸಾವಿರ ಮತಗಳಿವೆ. 34 ಸಾವಿರ ಮತಗಳು ಹೊಸ ಮತದಾರರಾಗಿ ಚಲಾವಣೆ, ಆದ್ರೆ ಇವರೆಲ್ಲ ವೃದ್ಧರು. ಈ ಥರ 1,00,250 ಮತಗಳವು ಆಗಿದ್ದು, ಆ ಕೆಲಸವನ್ನು ಬಿಜೆಪಿ ಮಾಡಿದೆ ಎಂದು ವಾಗ್ದಾಳಿ ನಡೆಸಿದರು.

ನಕಲಿ ಮತ ಹಾಕಿದ ಒಬ್ಬ ಕರ್ನಾಟಕದಲ್ಲೂ ಉತ್ತರ ಪ್ರದೇಶದಲ್ಲೂ, ಮಹಾರಾಷ್ಟ್ರದಲ್ಲೂ ಮತ ಹಾಕ್ತಾನೆ. ಈ ಥರ ದೇಶದ ಬೇರೆ ಬೇರೆ ರಾಜ್ಯಗಳಲ್ಲಿ ಈ ವ್ಯಕ್ತಿಗೆ ಮತಚೀಟಿ ಇದೆ. ಮತ ಹಾಕುವ ಹಕ್ಕು ಪಡೆದಿದ್ದಾನೆ. ಇವತ್ತು ಚುನಾವಣಾ ಆಯೋಗ ನನ್ನಿಂದ ಪ್ರಮಾಣ ಪತ್ರ ಕೇಳ್ತಿದೆ. ನಾನು ಸಂಸತ್‌ನಲ್ಲಿ ಪ್ರತಿಜ್ಞೆ ಮಾಡಿದ್ದೇನೆ. ಸಂವಿಧಾನದ ಮೇಲೆ ಪ್ರತಿಜ್ಞೆ ಮಾಡಿದ್ದೇನೆ. ನಾನು ಹೇಳೋದು ಸತ್ಯ ಅಂತ ಪ್ರತಿಜ್ಞೆ ಮಾಡಿದ್ದೇನೆ ಎಂದು ತಿಳಿಸಿದರು.

ನಮ್ಮ ಬೇರೆ ಬೇರೆ ರಾಜ್ಯಗಳ ವೆಬ್‌ಸೈಟ್ ಲಾಕ್ ಮಾಡಿದ್ದಾರೆ. ದೇಶದ ಜನ ಪ್ರಶ್ನೆ ಮಾಡಿದ್ರೆ, ಪ್ರಶ್ನೆ ಕೇಳದಂತೆ ಮಾಡ್ತಾರೆ. ಚುನಾವಣಾ ಆಯೋಗ ಇಡೀ ದೇಶದ ಎಲ್ಲ ಮತದಾರರ ಪಟ್ಟಿಯನ್ನು ಡಿಜಿಟಲ್ ರೂಪದಲ್ಲಿ ಕೊಡಲಿ. ಮತ ಚಲಾವಣೆಯ ವಿಡಿಯೋ ಕೊಡಲಿ. ಇಷ್ಟು ಕೊಟ್ಟರೆ ನಾವು ಅಕ್ರಮ ಸಾಬೀತು ಮಾಡ್ತೇವೆ. ಕರ್ನಾಟಕ ಮಾತ್ರವಲ್ಲ ದೇಶಾದ್ಯಂತ ಈ ರೀತಿ ಅಕ್ರಮ ಆಗಿದೆ ಎಂದು ಹೇಳಿದರು.


ಚುನಾವಣಾ ಆಯೋಗ ಬಿಜೆಪಿ ಪರ, ಸಂವಿಧಾನದ ವಿರುದ್ಧ ಕೆಲಸ ಮಾಡ್ತಿದೆ. ಕರ್ನಾಟಕದಲ್ಲಿ ಒಂದು ಕ್ಷೇತ್ರದ ಅಕ್ರಮ ತೋರಿಸಿದ್ದೀವಿ. ಒಂದೇ ಅಲ್ಲ ಇಲ್ಲಿ ಇನ್ನೂ ಹಲವು ಕ್ಷೇತ್ರಗಳಲ್ಲಿ ಅಕ್ರಮ ಆಗಿದೆ. ಸಂವಿಧಾನದ ಮೇಲೆ ದಾಳಿ ಮಾಡಿದ್ರೆ ಬಿಜೆಪಿ ಉಳಿಯಲ್ಲ. ನಿಮ್ಮನ್ನು ಈ ಅಕ್ರಮದಲ್ಲಿ ಹಿಡಿದೇ ಹಿಡಿಯುತ್ತೇವೆ. ಇದಕ್ಕೆ ಸಮಯ ಬೇಕಾಗುತ್ತೆ, ಆದ್ರೆ ನಿಮ್ಮನ್ನು ಹಿಡಿದೇ ಹಿಡೀತಿವಿ. ಮೋದಿಯವರು ಕೇವಲ 25 ಸೀಟುಗಳಿಂದ ಪ್ರಧಾನಿ ಆಗಿದ್ದಾರೆ. ಈಗ ಒಂದು ಸೀಟ್‌ನ ಅಕ್ರಮ ತೋರಿಸಿದ್ದೇವೆ. ಇನ್ನೂ ಉಳಿದ ಸೀಟ್‌ಗಳಲ್ಲಿ 35 ಸಾವಿರ ಮತಗಳ ಕಳವು ಸಹ ಪತ್ತೆ ಮಾಡಿದ್ದೇವೆ. ನಮಗೆ ಆಯೋಗ ಡಿಜಿಟಲ್ ದಾಖಲೆ ಕೊಡಲಿ, ವಿಡಿಯೋ ಕೊಡಲಿ. ಆಗ ಮೋದಿ ಅವರ ಅಕ್ರಮ ಬಯಲಿಗೆ ಎಳೆಯುತ್ತೇವೆ ಎಂದು ಸವಾಲು ಹಾಕಿದರು.

## ಸಹಿ ಹಾಕಿ ಅಥವಾ ಕ್ಷಮೆಯಾಚಿಸಿ

ನಿನ್ನೆ ರಾಹುಲ್ ಗಾಂಧಿಯವರು ಮೂರು ರಾಜ್ಯಗಳಲ್ಲಿ ಮತದಾರರ ಪಟ್ಟಿಯಿಂದ ತಪ್ಪಾಗಿ ಸೇರಿಸಲಾಗಿದೆ ಅಥವಾ ಹೊರಗಿಡಲಾಗಿದೆ ಎಂದು ಹೇಳಲಾದ ಮತದಾರರ ಹೆಸರುಗಳನ್ನು ಹಂಚಿಕೊಳ್ಳಲು ಮತ್ತು ಈ ವಿಷಯದಲ್ಲಿ ಅಗತ್ಯ ಕ್ರಮಗಳನ್ನು ಪ್ರಾರಂಭಿಸಲು ಚುನಾವಣಾ ಅಧಿಕಾರಿಗಳಿಗೆ ಸಹಿ ಮಾಡಿದ ಘೋಷಣೆಯೊಂದಿಗೆ ಹಂಚಿಕೊಳ್ಳಲು ಚುನಾವಣಾ ಅಧಿಕಾರಿಗಳು ಕೇಳಿಕೊಂಡಿದ್ದರು.

ನಿನ್ನೆ ರಾಹುಲ್ ಗಾಂಧಿಯವರು, ಕರ್ನಾಟಕದ ಒಂದು ಕ್ಷೇತ್ರದಲ್ಲಿ 1,00,250 ಮತಗಳ ಕಳ್ಳತನವಾಗಿದ್ದು, ಈ ಕ್ಷೇತ್ರದಲ್ಲಿ 11,965 ನಕಲಿ ಮತದಾರರು, ನಕಲಿ ಮತ್ತು ಅಮಾನ್ಯ ವಿಳಾಸಗಳನ್ನು ಹೊಂದಿರುವ 40,009 ಮತದಾರರು, 10,452 ಬಹು ಸಂಖ್ಯಾತ ಮತದಾರರು ಅಥವಾ ಏಕ ವಿಳಾಸ ಮತದಾರರು, ಅಮಾನ್ಯ ಫೋಟೋಗಳನ್ನು ಹೊಂದಿರುವ 4,132 ಮತದಾರರು, 33,692 ಮತದಾರರು ಹೊಸ ಮತದಾರರ ನಮೂನೆ 6 ನ್ನು ದುರುಪಯೋಗಪಡಿಸಿಕೊಂಡಿದ್ದಾರೆ ಎಂದು ಹೇಳಿದ್ದರು.

## ಮತಗಳ್ಳತನ ಆರೋಪ; ಚುನಾವಣಾ ಆಯೋಗಕ್ಕೆ ಕೆಪಿಸಿಸಿ ದೂರು



ಬೆಂಗಳೂರು:ಅ.8:ಮಹಾದೇವಪುರ ಕ್ಷೇತ್ರದಫಲಿತಾಂಶವನ್ನುಸಮೀಕ್ಷೆ ಮಾಡಿದಾಗ ಮತಗಳ್ಳತನ ಆಗಿರುವುದು ತಿಳಿದುಬಂದಿದೆ ಎಂದುಆರೋಪಿಸಿಚುನಾವಣಾ ಆಯೋಗಕ್ಕೆ ಕೆಪಿಸಿಸಿ ದೂರು ನೀಡಿದೆ.ಕರ್ನಾಟಕದಲ್ಲಿಮತಗಳ್ಳತನ ಆಗಿದೆ ಎಂದು ಆರೋಪಿಸಿ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ,ಬೆಂಗಳೂರಿನ ಸ್ವಾತಂತ್ರ್ಯ ಉದ್ಯಾನದಲ್ಲಿ ಶುಕ್ರವಾರ 'ನಮ್ಮ ಮತ, ನಮ್ಮ ಹಕ್ಕು, ನಮ್ಮ ಹೋರಾಟ' ಸಮಾವೇಶದಲ್ಲಿ ಪಾಲ್ಗೊಂಡಿದ್ದರು.ಸಮಾವೇಶದಬಳಿಕ ಕೆಪಿಸಿಸಿಅಧ್ಯಕ್ಷಡಿ.ಕೆ.ಶಿವಕುಮಾರ್ ನೇತೃತ್ವದಲ್ಲಿಚುನಾವಣಾಆಯೋಗಕ್ಕೆ ದೂರು ನೀಡಲಾಯಿತು. 2024ರಲೋಕಸಭಾಚುನಾವಣೆಯಲ್ಲಿ ಮಹಾದೇವಪುರದಲ್ಲಿಮತಗಳ್ಳತನ ಆಗಿದೆ ಎಂದು ದೂರಿನಲ್ಲಿ ಉಲ್ಲೇಖಿಸಿದ್ದಾರೆ.ಕೆಪಿಸಿಸಿಯಿಂದಮಾತ್ರ ಚುನಾವಣಾ ಆಯೋಗಕ್ಕೆ ದೂರು ನೀಡಲಾಗಿದೆ.ಆದರೆ, ಎಐಸಿಸಿಯಿಂದದೂರುನೀಡಿಲ್ಲ.ದೂರು ಪತ್ರದಲ್ಲಿವೇಣುಗೋಪಾಲ್,ರಣದೀಪ್ ಸುರ್ಜೇವಾಲಾ,ಡಿ.ಕೆ.ಶಿವಕುಮಾರ್, ಸಿದ್ದರಾಮಯ್ಯಸಹಿ ಇದೆ.ಆದರೆ, ಆರೋಪಮಾಡಿದ ರಾಹುಲ್ ಗಾಂಧಿ,ಮಲ್ಲಿಕಾರ್ಜುನ ಖರ್ಗೆ ಅವರು ಅಂತರ ಕಾಯ್ದು–ಕೊಂಡಿದ್ದಾರೆ. ದೂರನ್ನು ಸ್ವೀಕರಿಸಿರುವ ಚುನಾವಣಾ ಆಯೋಗವು ಡಿಕೆಶಿಗೆ ಪತ್ರ ಬರೆದಿದೆ. ನಿಮ್ಮ ದೂರಿಗೆ ದಾಖಲೆ ಕೊಡಿ,ಡಿಕ್ಲರೇಷನ್‌ಗೆ ಸಹಿ ಹಾಕಿ ಎಂದು ಪತ್ರದಲ್ಲಿ ಆಯೋಗ ತಿಳಿಸಿದೆ.

# ಕೊಪ್ಪಳದಲ್ಲಿ ಮುಸ್ಲಿಂ ಕುಟುಂಬದಿಂದ ವರಮಹಾಲಕ್ಷ್ಮಿ ಪೂಜೆ; ಸಾಮರಸ್ಯಕ್ಕೆ ಸಾಕ್ಷಿಯಾದ ನಜೀರುದ್ದಿನ್ ಕುಟುಂಬ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ :ಅ.8: ತಾಲೂಕಿನ ಅಳವಂಡಿ ಗ್ರಾಮದಲ್ಲಿರುವ ನಜೀರುದ್ದೀನ್ ಅವರ ಕುಟುಂಬ ಹಿಂದೂ–ಮುಸ್ಲಿಂಭಾವೈಕ್ಯತೆಯ ಪ್ರತಿರೂಪವೆಂದರೆ ಉತ್ಪ್ರೇಕ್ಷೆ ಅನಿಸದು. ಅವರ ಮನೆಯಲ್ಲಿ ಇಂದು ವರಮಹಾಲಕ್ಷ್ಮಿ ಹಬ್ಬ ಆಚರಿಸಲಾಗಿದೆ. ಹಿಂದೂ ಸಂಪ್ರದಾಯದ ಹಾಗೆ ಮನೆಗೆ ತಳಿರು ತೋರಣಗಳನ್ನು ಕಟ್ಟಿ ವರಮಹಾಲಕ್ಷ್ಮೀಗೆ ಪೂಜೆ ಸಲ್ಲಿಸಿ ನೈವೇದ್ಯ ಸಮರ್ಪಿಸಲಾಗಿದೆ. ಹಿಂದೂ–ಮುಸ್ಲಿಂ ಬಾಂಧವ್ಯಕ್ಕೆ ಇದಕ್ಕಿಂತ ಉತ್ತಮ ಉದಾಹರಣೆ ಬೇಕೆ?!



ಮುಸ್ಲಿಂ ಕುಟುಂಬವೊಂದರಲ್ಲಿ ವರಮಹಾಲಕ್ಷ್ಮಿ ಪೂಜೆ ಮಾಡುವ ಮೂಲಕ ಸಾಮರಸ್ಯಕ್ಕೆ ಸಾಕ್ಷಿಯಾದ ಘಟನೆ ಕೊಪ್ಪಳ ತಾಲೂಕಿನ ಅಳವಂಡಿ ಗ್ರಾಮದಲ್ಲಿ ನಡೆದಿದೆ. ನಿನ್ನೆ ಹಿಂದು ಸಂಸ್ಕೃತಿಯ ವರ ಮಹಾಲಕ್ಷ್ಮಿ ಹಬ್ಬವನ್ನು ನೆರವೇರಿಸುವ ಭಾವೈಕ್ಯತೆಯನ್ನು ಅಳವಂಡಿ ಗ್ರಾಮದ ನಜೀರುದ್ದಿನ್ ಕುಟುಂಬ ಸಾರಿದೆ.

ಧಾರ್ಮಿಕ ಆಚರಣೆಗಳನ್ನು ಗ್ರಾಮದಲ್ಲಿ ಹಿಂದೂ–ಮುಸ್ಲಿಂ ಬಾಂಧವರು ಭಾವೈಕ್ಯತೆಯಿಂದ ಆಚರಿಸುತ್ತಾ ಬಂದಿದ್ದಾರೆ. ಪ್ರತಿಯೊಂದು ಧಾರ್ಮಿಕ ಆಚರಣೆಗಳನ್ನು ಒಗ್ಗಟ್ಟಾಗಿ ಆಚರಿಸುತ್ತಾರೆ. ಅದರಂತೆ ಮುಸ್ಲಿಂ ಸಮುದಾಯದ ಕುಟುಂಬವೊಂದು ಕಳೆದ ಆರೇಳು ವರ್ಷಗಳಿಂದ ತಮ್ಮ ಹಬ್ಬ ಆಚರಿಸುವ ರೀತಿಯಲ್ಲಿಯೇ ಸಂಪ್ರದಾಯ ಬದ್ಧವಾಗಿ ವರ ಮಹಾಲಕ್ಷ್ಮಿ ಹಬ್ಬವನ್ನು ಆಚರಿಸುತ್ತಾ ಬಂದಿದ್ದಾರೆ. ಅಳವಂಡಿ ಗ್ರಾಮದ ನಜುರುದ್ದೀನ್ ಬಿಸರಳ್ಳಿ ಅವರು ಮುಸ್ಲಿಂ ಕುಟುಂಬದ ಮನೆಯಲ್ಲಿ ವರ ಮಹಾಲಕ್ಷ್ಮಿ ಹಬ್ಬವನ್ನು ಮನೆತನದ ಹಬ್ಬದ ರೀತಿ ಆಚರಿಸುತ್ತಿದ್ದಾರೆ.

ಹಬ್ಬದ ಪ್ರಯುಕ್ತ ಮನೆಯಲ್ಲಿ ದೀಪಾಲಂಕಾರ,ವಿಶೇಷಪೂಜೆಯಿಂದ ನೆರವೇರಿಸಿದ್ದಾರೆ. ಹೋಳಿಗೆ ನೈವೇದ್ಯ, ವಿವಿಧ ತರಹದ ಹಣ್ಣುಗಳು ಸಮರ್ಪಿಸಿ,ಹಣತೆ ಹಚ್ಚಿ ಭಾವೈಕ್ಯತೆ ಮೆರೆದಿದ್ದಾರೆ. ಮನೆಯನ್ನು ವಿದ್ಯುತ್ ದೀಪ ಹಾಗೂ ತಳೀರು ತೋರಣ ಕಟ್ಟಿ ಸಿಂಗರಿಸಲಾಗಿತ್ತು. ನಜೀರುದ್ದೀನ್ ಬಿಸರಳ್ಳಿ ಅವರು ವರ ಮಹಾಲಕ್ಷ್ಮಿ ಹಬ್ಬದ ಪ್ರಯುಕ್ತ ಸರ್ವ ಧರ್ಮದ ಸ್ನೇಹಿತರನ್ನು ಆಹ್ವಾನಿಸಿ ಆತಿಥ್ಯ ಸತ್ಕರಿಸಿದರು.

ಇದೇ ವೇಳೆ ಅಳವಂಡಿಯ ಮರುಳಾರಾಧ್ಯ ಪೂಜ್ಯರು ಕೂಡ ಪೂಜೆಯಲ್ಲಿ ಭಾಗವಹಿಸಿ ಆಶೀರ್ವಾದಿಸಿದರು.ಈ ಕುರಿತಂತೆ ನಜೀರುದ್ದೀನ್ ಮಾತನಾಡಿ, ಕಳೆದ ಆರೇಳು ವರ್ಷದ ಹಿಂದೆ ವರ ಮಹಾಲಕ್ಷ್ಮಿ ಹಬ್ಬದ ದಿನದಂದು ನನ್ನ ಮನೆಯ ಗೃಹ ಪ್ರವೇಶ ಕಾರ್ಯಕ್ರಮ ನಡೆಯಿತು. ಅದರಂತೆ ಪ್ರತಿವರ್ಷ ಹಿಂದೂ ಸಂಪ್ರದಾಯದಂತೆ ವರಮಹಾಲಕ್ಷ್ಮಿ ಹಬ್ಬ ಮಾಡುತ್ತಾ ಬಂದಿದ್ದೇನೆ. ಇದರಿಂದ ಒಳ್ಳೆಯದು ಆಗಿದೆ. ನಾನು ಕೂಡ ಗ್ರಾಮದ ಪ್ರತಿಯೊಂದು ಧಾರ್ಮಿಕ ಆಚರಣೆಗಳಲ್ಲಿ ಪಾಲ್ಗೊಳ್ಳುತ್ತೇನೆ ಎಂದರು.

ಅಳವಂಡಿಯ ಮರುಳಾರಾಧ್ಯ ಪರಮಪೂಜ್ಯರು ಬೇಟಿ ನೀಡಿ ಶುಭ ಹಾರೈಸಿದರು.ಇದೇ ವೇಳೆ ಮಾತನಾಡಿದ ಅವರು ನಾವೆಲ್ಲರೂ ಒಂದೇ ನೆಲದ ಮಕ್ಕಳು,ಭಾರತೀಯರು.ಶಾಂತಿ ಸೌಹಾರ್ದ ನೆಲೆಸಿದ ಈ ನಾಡಿನಲ್ಲಿ ಇಂತಹ ಮುಸ್ಲಿಂ ಬಾಂಧವರು ಸಮಾಜಕ್ಕೆ ಮಾದರಿ.ಭಾರತ ದೇಶವು ವಿವಿಧತೆಯಲ್ಲಿ ಏಕತೆಯನ್ನು,ಅನೇಕತೆಯಲ್ಲಿ ಭ್ರಾತೃತ್ವಕ್ಕೆ ಸಾಕ್ಷಿಯಾಗಿದೆ,ದ್ವೇಷ ಬಿಡು ಪ್ರೀತಿ ಮಾಡು,ಸೌಹಾರ್ದ ಸ್ನೇಹಮಯ ಜೀವನ ನಮ್ಮದಾಗಲಿ,ಈ ನೆಲದ ಮಹಾತ್ಮರ,ಶರಣರ ಸಂದೇಶವನ್ನು ನಾವೆಲ್ಲ ಪಾಲಿಸೋಣ ಎಂದರು.ಹಿಂದು ಮುಸ್ಲಿಂ ಬಾಂಧವರು ಹಿರಿಯರು ಮುಖಂಡರು ಸ್ನೇಹಿತರು ಹಾಗೂ ಕುಟುಂಬಸ್ಥರು ಭಾಗಿಯಾಗಿ ಹಬ್ಬದ ಮೆರಗು ಹೆಚ್ಚಿಸಿದರು. ಇದೇ ವೇಳೆ ಎಲ್ಲರಿಗೂ ಸಿಹಿ ಅಡುಗೆಯ ಅನ್ನಸಂತರ್ಪಣೆ ಮಾಡುವ ಮೂಲಕ ಕೋಮು ಸೌಹಾರ್ಧತೆಗೆ ಸಾಕ್ಷಿಯಾದರು.

# ವಿಶ್ವ ಸ್ತನ್ಯಪಾನ ಸಪ್ತಾಹ ಅಂಗವಾಗಿ ಭಿತ್ತಿಪತ್ರ ಬಿಡುಗಡೆ

ಕಲಬುರಗಿ,ಆ.08:ಮಗುವಿನ ಉತ್ತಮ ಆರೋಗ್ಯ ಕಾಪಾಡಲು ತಾಯಿಯ ಎದೆ ಹಾಲು ಸಂಜೀವಿನಿಯಾಗಿದೆ ಎಂದು ಕಲಬುರಗಿ ಜಿಲ್ಲಾ ಆರ್‌ಸಿಹೆಚ್ ಅಧಿಕಾರಿಗಳಾದ ಡಾ. ಸಿದ್ದು ಪಾಟೀಲ್ ಅವರು ಹೇಳಿದರು.




ಕಲಬುರಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಸಾರ್ವಜನಿಕ ಸರ್ಕಾರಿ (ಜಿಮ್ಸ್) ಆಸ್ಪತ್ರೆ, ಗುಲಬರ್ಗಾ ಇನ್ಸ್‌ಟ್ಯೂಟ್ ಆಫ್ ಮೆಡಿಕಲ್ ಸೈನ್ಸ್‌ನ ಮಕ್ಕಳ ವಿಭಾಗ ಇವುಗಳ ಸಹಯೋಗದೊಂದಿಗೆ ಕಲಬುರಗಿ ನಗರದ ವಿಶೇಷ ನವಜಾತ ಶಿಶು ಮತ್ತು ತಾಯಿ ಘಟಕದ ಎಸ್‌ಎನ್‌ಸಿಯು ಸಮಿನಾರ್‌ಹಾಲ್‌ದಲ್ಲಿಗುರುವಾರ ಹಮ್ಮಿಕೊಳ್ಳಲಾಗಿದ್ದ ವಿಶ್ವಸ್ತನ್ಯಪಾನ ಸಪ್ತಾಹ ಕಾರ್ಯಕ್ರಮ ಹಾಗೂ ವಿಶ್ವ ಸ್ತನ್ಯಪಾನ ಸಪ್ತಾಹದ ಬಿತ್ತಿಪತ್ರ ಬಿಡುಗಡೆ ಮಾಡಿ ಅವರು ಮಾತನಾಡಿದರು. ಮಗು ಹುಟ್ಟಿದ ನಂತರ ಆ ಮಗುವಿಗೆ ತಾಯಿ ಹಾಲು ಕುಡಿಸುವುದರಿಂದ ಮಗುವಿನಲ್ಲಿ ರೋಗ ನಿರೋಧಕ ಶಕ್ತಿ ಹೆಚ್ಚಾಗುವುದರ ಜೊತೆಗೆ ಉತ್ತಮ ಅರೋಗ್ಯ ಮತ್ತು ದೈಹಿಕ ಬೆಳವಣಿಗೆಯಾಗಲಿದೆ. ಇದಲ್ಲದೇ ನವಜಾತ ಶಿಶುವನ್ನು ಅನೇಕ ಮಾರಕ ಕಾಯಿಲೆಗಳನ್ನು ರಕ್ಷಿಸುತ್ತದೆ. ರೋಗಗಳ ವಿರುದ್ಧ ಹೋರಾಡಲು ರೋಗನಿರೋಧಕ ಶಕ್ತಿಯನ್ನು ಸಹ ಬೆಳೆಸುತ್ತದೆ. ಆದ್ದರಿಂದ ಪ್ರತಿಯೊಬ್ಬರು ಎದೆ ಹಾಲಿನ ಮಹತ್ವದ ಬಗ್ಗೆ ಅರಿತುಕೊಳ್ಳಬೇಕು ಎಂದರು. ಕಾರ್ಯಕ್ರಮದಲ್ಲಿ ಜಿಲ್ಲಾ ಆಸ್ಪತ್ರೆಯ ಜಿಲ್ಲಾ ಅಧೀಕ್ಷಕರು ಹಾಗೂ ಶಸ್ತ್ರಜ್ಞರಾದ ಡಾ. ರೂಕೀಯ ಅಸನಾರಬ್ ಅವರು ಮಾತನಾಡಿ, ಮಗು ಜನಿಸಿದ ತಕ್ಷಣ ಅಥವಾ ಸಾಧ್ಯವಾದಷ್ಟು ಬೇಗ ಒಂದು ಗಂಟೆ ಒಳಗೆ ಎದೆ ಹಾಲುಣಿಸುವಿಕೆಯನ್ನು ಪ್ರಾರಂಭಿಸಬೇಕು. ಮಗುವಿಗೆ ಮೊದಲ ಆರು ತಿಂಗಳು ಎದೆ ಹಾಲು ಮಾತ್ರ ಕುಡಿಸಿ, ಮಗುವಿಗೆ ಆರು ತಿಂಗಳು ತುಂಬಿದಾಗ ಎದೆಯ ಹಾಲಿನ ಜೊತೆಗೆ ಪೂರಕ ಆಹಾರವನ್ನು ನೀಡಲು ಪ್ರಾರಂಭಿಸಬೇಕು. ಹಾಗೆ ಕನಿಷ್ಠ ಎರಡು ವರ್ಷದವರಿಗೆ ಹಾಲುಣಿಸುವಿಕೆಯನ್ನು ಮುಂದುವರಿಸಿದರೆ, ಮಗು ಶಕ್ತಿ ಮತ್ತು ಮಗುವಿನ ಮೆದಳು ಚುರುಕಾಗಿ ಬೆಳವಣಿಗೆಯಾಗಲು ಸಾಧ್ಯವಾಗುತ್ತದೆ ಎಂದು ಅವರು ಹೇಳಿದರು.


ವಿಶೇಷವಾಗಿ ವಿಶ್ವ ಸ್ತನ್ಯಪಾನ ಸಪ್ತಾಹ ಕಾರ್ಯಕ್ರಮ ಅಂಗವಾಗಿ ಮೆಡಿಕಲ್ ಕಾಲೇಜು ವಿದ್ಯಾರ್ಥಿಗಳಿಗೆ ಹಮ್ಮಿಕೊಂಡಿದ್ದ ಪೇಂಟಿಂಗ್‌ನ್ನು ವೀಕ್ಷಣೆ ಮಾಡಿ, ಪ್ರಥಮ ಬಹುಮಾನ ಪಡೆದ ಮೆಡಿಕಲ್ ವಿದ್ಯಾರ್ಥಿ ಅಕಿಲ್ ಕುಮಾರ್, ದ್ವಿತೀಯ ಬಹುಮಾನ ಪಡೆದ ಶೇಖ ಅಬ್ದುಲ್ ಅವರಿಗೆ ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ. ಸಿದ್ದು ಪಾಟೀಲ್, ಜಿಲ್ಲಾ ಆಸ್ಪತ್ರೆಯ ಅಧೀಕ್ಷಕರು ಮತ್ತು ಶಸ್ತ್ರಜ್ಞರಾದ ಡಾ. ರೂಕೀಯ ಅಸನಾರಬ್ ಹಾಗೂ ಡೆಪ್ಯೂಟಿ ಮೆಡಿಕಲ್ ಸುಪರಿಂಟೆಂಡೆಂಟ್ ರೇವಣ್ಣಸಿದ್ದಪ್ಪ ಬೋಸ್ಗ ಅವರು ಪ್ರಶಸ್ತಿ ಪ್ರದಾನ ಮಾಡಿದರು. ಕಾರ್ಯಕ್ರಮದ ಅಧ್ಯಕ್ಷತೆವಹಿಸಿ ಡೆಪ್ಯೂಟಿ ಮೆಡಿಕಲ್ ಸುಪ್ರಿಟೆಂಡೆಂಟ್ ಮತ್ತು ಎಸ್‌ಎನ್‌ಸಿಯು, ಹೆಚ್‌ಓಡಿ ರಾದ ಡಾ. ರೇವಣಸಿದ್ಧಪ್ಪ ಬೋಸ್ಗಿ ಅವರು ಪ್ರಸ್ತಾವಿಕ ನುಡಿಗಳನ್ನಾಡಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಕಾರ್ಯಕ್ರಮ ವ್ಯವಸ್ಥಾಪಕ ವೀರೇಶ್ ಜಾವಳಗೇರಿ, ಮಕ್ಕಳ ತಜ್ಞರು ಮತ್ತು ಸಹಾಯಕ ಪ್ರಾಧ್ಯಾಪಕ ಡಾ. ಜ್ಯೋತಿ ಸರ್ವಿ, ವಿಶೇಷ ಮಕ್ಕಳ ತಜ್ಞ ಡಾ. ಪ್ರಾಣೇಶ್ ಕುಲಕರ್ಣಿ, ಡಾ. ಪಹೀಮ್ ಪಟೇಲ್, ಜಿಲ್ಲಾ ಆರ್‌ಕೆಎಸ್‌ಕೆ ಸಂಯೋಜಕ ಶಿವಕುಮಾರ್ ಕಾಂಬ್ಳೆ, ಮಕ್ಕಳ ವೈದ್ಯಾಧಿಕಾರಿ ಡಾ. ಆಕಾಶ್ ಜವಳಗಿ, ಡಾ. ಸಂಕೇತ್ ನೈನೂರ್, ಡಾ. ರಾಮಕಾಂತ್ ಹೀರೊಳ್ಳಿ, ಡಾ. ಅಭಿಷೇಕ್, ಡಾ. ಪೂಜಾ ಚಿಲ್ಲರಗಿ, ಎನ್‌ಐಸಿಯು ಉಸ್ತುವಾರಿ ನರ್ಸಿಂಗ್ ಅಧಿಕಾರಿ ರೂಪಾ ಜಾನೆ, ಕೆಎಂಸಿ ನರ್ಸಿಂಗ್ ಆಫೀಸರ್ ರೇಖಾ ಶಿವಯೋಗಿ, ಕೈಲಾಸ, ಭಗವಾನ್, ಶರಣಮ್ಮ, ನಿರ್ಮಲಾ, ಶಿಶುವಿನ ತಾಯಿಂದಿಯರರು, ತಾಯಿಯ ಸೇವಕರು ಹಾಗೂ ಅರೋಗ್ಯ ಇಲಾಖೆಯ ಸಿಬ್ಬಂದಿಗಳು ಉಪಸ್ಥಿತರಿದ್ದರು.

ಪ್ರಾರಂಭದಲ್ಲಿ ಭವ್ಯಾ ರಾಣಿ ಚವ್ಹಾಣ್ ಅವರು ಸ್ವಾಗತಿಸಿದರು. ಜಿಲ್ಲಾ ಮಕ್ಕಳ ಅರೋಗ್ಯ ಸಮಾಲೋಚಕ ಮಂಜುನಾಥ್ ಕಂಬಳಿಮಠ್ ಕಾರ್ಯಕ್ರಮ ನಿರೂಪಿಸಿದರು.

# ಅಗ್ನಿವೀರ್ ಸೇನಾ ಭರ್ತಿಗೆ ಶಾಸಕರಾದ ಡಾ.ಶಿವರಾಜ ಎಸ್.ಪಾಟೀಲ್ ಅವರಿಂದ ಚಾಲನೆ

ರಾಯಚೂರು ಆ.08: ಆಗಸ್ಟ್ 08 ರಿಂದ ಆರಂಭವಾಗಿ ಆಗಸ್ಟ್ 26ರವರೆಗೆ ನಗರದ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದಲ್ಲಿ ನಡೆಯಲಿರುವ ಅಗ್ನಿವೀರ್ ಸೇನಾ ನೇಮಕಾತಿ ರಾಲಿಗೆ ರಾಯಚೂರ ನಗರ ಶಾಸಕರಾದ ಡಾ.ಎಸ್ ಶಿವರಾಜ ಪಾಟೀಲ್ ಅವರು ಆಗಸ್ಟ್ 8ರಂದು ಬೆಳಗ್ಗೆ ಚಾಲನೆ ನೀಡಿದರು.



ಈ ವೇಳೆ ಸೇನಾ ಅಧಿಕಾರಿಗಳು ಮತ್ತು ಅಧಿಕಾರಿಗಳನ್ನುದ್ದೇಶಿಸಿ ಮಾತನಾಡಿದ ಶಾಸಕರು, ಮಹತ್ವದ ಸೇನಾ ಭರ್ತಿಗೆ ನಮ್ಮ ರಾಯಚೂರು ನಗರವನ್ನು ಆಯ್ಕೆ ಮಾಡಿದ್ದು ಹೆಮ್ಮೆಯ ವಿಷಯ. ಸೇನಾ ಭರ್ತಿಯು ಉತ್ತಮವಾಗಿ ಆಯೋಜನೆಗೊಂಡಿತು ಎನ್ನುವ ಸಂದೇಶ ರವಾನೆಯಾಗುವ ಹಾಗೆ ಅಗ್ನಿವೀರ್ ಸೇನಾ ನೇಮಕಾತಿ ರ್ಯಾಲಿ ನಡೆಯಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಪುಟ್ಟಮಾದಯ್ಯ, ಸೇನಾ ಅಧಿಕಾರಿ ಎಆರ್‌ಓ ಮನೋಜ್, ಸಹಾಯಕ ಆಯುಕ್ತರಾದ ಗಜಾನನ ಬಾಳೆ, ತಹಸೀಲ್ದಾರ ಅಮರೇಶ ಬಿರಾದಾರ, ಕೃಷ್ಣ ಶಾವಂತಗೇರಿ ಸೇರಿದಂತೆ ಇತರರು ಇದ್ದರು.

# ಅಗ್ನಿವೀರ್ ಸೇನಾ ಭರ್ತಿ ಸ್ಥಳಕ್ಕೆ ಜಿಲ್ಲಾಧಿಕಾರಿ ನಿತೀಶ್ ಕೆ ಭೇಟಿ

ರಾಯಚೂರು ಆ 08 : ಅಗ್ನಿವೀರ್ ಸೇನಾ ನೇಮಕಾತಿ ರ್ಯಾಲಿ ಪ್ರಕ್ರಿಯೆಯು ಆಗಸ್ಟ್ 08ರಿಂದ ಆರಂಭವಾಗಿದ್ದು, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರು ಸೇನಾ ಭರ್ತಿ ಸ್ಥಳಕ್ಕೆ ಭೇಟಿ ನೀಡಿ ವೀಕ್ಷಣೆ ನಡೆಸಿದರು.ನಗರದ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯಕ್ಕೆ ಭೇಟಿ ನೀಡಿದ ಅವರು, ಅಗ್ನಿವೀರ ಸೇನಾ ನೇಮಕಾರಿ ರಾಲಿಯ ಪ್ರಕ್ರಿಯೆ ಬಗ್ಗೆ ಸೇನಾ ಅಧಿಕಾರಿ ಎಆರ್‌ಓ ಮನೋಜ್ ಸೇರಿದಂತೆ ಇನ್ನಿತರ ಸೇನಾ ಅಧಿಕಾರಿಗಳಿಂದ ಮಾಹಿತಿ ಪಡೆದುಕೊಂಡರು. ಆಗಸ್ಟ್ 08ರಿಂದ ಆರಂಭವಾಗಿ ಆಗಸ್ಟ್ 26ರವರೆಗೆ ನಡೆಯಲಿರುವ ಶಾರೀರಿಕ ದೇಹದಾರ್ಢ್ಯ ಮತ್ತು ವೈದ್ಯಕೀಯ ಪರೀಕ್ಷೆ ನಡೆಯಲಿದ್ದು ಎಲ್ಲ ಪ್ರಕ್ರಿಯೆಗಳು ಮುಕ್ತಾಯವಾಗುವವರೆಗೆ ಸೇನಾ ಅಧಿಕಾರಿಗಳಿಗೆ ರಾಯಚೂರ ಜಿಲ್ಲೆಯ ಅಧಿಕಾರಿಗಳು ಸಹಕಾರ ನೀಡಬೇಕು ಎಂದು ಸ್ಥಳದಲ್ಲಿದ್ದ ಆಯಾ ಸಮಿತಿಗಳ ಅಧ್ಯಕ್ಷರಿಗೆ ಮತ್ತು ಸದಸ್ಯ ಕಾರ್ಯದರ್ಶಿಗಳಿಗೆ ತಿಳಿಸಿದರು. ಸುಗಮ ಸಂಚಾರಕ್ಕೆ ಅನುಕೂಲ ಕಲ್ಪಿಸಿ: ಸೇನಾ ಭರ್ತಿಗಾಗಿ ಈಗಾಗಲೇ ಬೇರೆ ಬೇರೆ ಜಿಲ್ಲೆಗಳ ಅಭ್ಯರ್ಥಿಗಳು ರಾಯಚೂರಗೆ ಆಗಮಿಸುತ್ತಿದ್ದು, ಆಯಾ ಕಡೆಗೆ ಅವರಿಗೆ ಸರಿಯಾದ ವಸತಿ ಮತ್ತು ಊಟದ ವ್ಯವಸ್ಥೆ ಕಲ್ಪಿಸಬೇಕು.



ಬಸವಕಲ್ಯಾಣ :- ಇಲ್ಲಿನ ನೀಲಾಂಬಿಕ ಬಾಲಕಿಯರ ಸರಕಾರಿ ಪ್ರೌಢ ಶಾಲೆಯಲ್ಲಿ ಮುಖ್ಯ ಗುರುಗಳಾಗಿ ಸೇವೆ ಸಲ್ಲಿಸಿ ನಿವೃತ್ತಗೊಂಡ ಶಂಕರ ಮಾಲಿ ಬಿರಾದಾರ ರವರಿಗೆ ಮುಖ್ಯ ಗುರುಗಳಾದ ಭಾರತಿ ಗೌಡರ ಶಿಕ್ಷಕರಾದ ನಾಗಪ್ಪ ನಿಣ್ಣೆ ರಮೇಶ್ ಪೂಜಾರಿ ದಯಾನಂದ ನಾಯ್ಕೋಡ ಡಿ. ಗೋವಿಂದಪ್ಪ ಕೆ ಸರಳ ಸಂಗೀತ ಶಿಕ್ಷಕರಾದ ಅನಿಲ್ ಕಾಂಬಳೆ ಸೇರಿದಂತೆ ಅನೇಕರು ಸನ್ಮಾನಿಸಿ ಗೌರವಿಸಿದರು. (ಮಲ್ಲಮ್ಮ ನುಡಿ ಚಿತ್ರ)




ಬಸವ ಕಲ್ಯಾಣ : - ಇಲ್ಲಿನ ಶ್ರೀ ಬಸವೇಶ್ವರ ದೇವಸ್ಥಾನದಲ್ಲಿ ಶ್ರಾವಣ ಮಾಸದ ನಿಮಿತ್ತವಾಗಿ ನಡೆದ ಪ್ರವಚನ ಕಾರ್ಯಕ್ರಮದಲ್ಲಿ ನೆರೆದಿರುವ ಅಪಾರ ಭಕ್ತರಿಗೆ ವಿಜಯಪುರದ ಜ್ಞಾನ ಯೋಗಾಶ್ರಮದ ಪೂಜ್ಯ ಶ್ರೀ. ಅದ್ವೈತಾನಂದ ಸ್ವಾಮೀಜಿಗಳಿಂದ ವಚನಗಳಲ್ಲಿನ ಆತ್ಮ ಜ್ಞಾನ ಕುರಿತು ಅದ್ಭುತವಾದ, ಸುಂದರವಾದ ಪ್ರವಚನ ನಡೆಸುತ್ತಿರುವುದು ದೃಶ್ಯ ಚಿತ್ರದಲ್ಲಿ ಕಾಣಬಹುದು. (ಮಲ್ಲಮ್ಮ ನುಡಿ ಚಿತ್ರ)

## ಯದಲಾಪೂರ ಗ್ರಾಮದಲ್ಲಿ ಅದ್ದೂರಿಯಿಂದ ಜರುಗಿದ ಕವಡ್ ಯಾತ್ರೆ




ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :- ಆ 8 ತಾಲೂಕಿನ ಯದಲಾಪೂರ ಗ್ರಾಮದಲ್ಲಿ ಅದ್ದೂರಿಯಾಗಿ ಜರುಗಿದ ಕವಡ್ ಯಾತ್ರೆಯಲ್ಲಿ ನೂರಾರು ಸಂಖ್ಯೆಯಲ್ಲಿ ಭಕ್ತರು ಭಾಗವಹಿಸಿದ್ದರು.

ತಮ್ಮ ಹೆಗಲ ಮೇಲೆ ಅವರು ಕವಡ್ ಎಂದು ಕರೆಯಲ್ಪಡುವ ವಿಶೇಷ ಸಾಧನದಲ್ಲಿ ನೀರನ್ನು ಹೊತ್ತುಕೊಂಡು ಸಾಗಿದ ಯಾತ್ರೆ ತುಂಬಾ ವಿಜೃಂಭಣೆಯಿಂದ ಜರುಗಿತು.

ಅದರಲ್ಲೂ ತಾಯಂದಿರು, ಚಿಕ್ಕ ಚಿಕ್ಕ ಮಕ್ಕಳು ಕೂಡಾ ಕವಡ್ ಯಾತ್ರೆಯಲ್ಲಿ ಪಾಲ್ಗೊಂಡಿದ್ದು ವಿಶೇಷವಾಗಿತ್ತು.

ಕವಡ್ ಯಾತ್ರೆ ಒಂದು ಹಿಂದೂ ಯಾತ್ರೆ, ಇದರಲ್ಲಿ ಶಿವ ಭಕ್ತರು ಪವಿತ್ರನದಿಗಳಿಂದ ನೀರನ್ನು ತಂದು ಶಿವಲಿಂಗಕ್ಕೆ ಅಭಿಷೇಕ ಮಾಡುತ್ತಾರೆ. ಈ ಯಾತ್ರೆ ಶ್ರಾವಣ ಮಾಸದಲ್ಲಿ ನಡೆಯುತ್ತದೆ ಮತ್ತು ಇದರ ಇತಿಹಾಸವು ಪುರಾಣಗಳೊಂದಿಗೆ ಸಂಬಂಧ ಹೊಂದಿದೆ. ಕೆಲವರ ನಂಬಿಕೆಯ ಪ್ರಕಾರ ಪರಶುರಾಮನು ಮೊದಲು ಕವಡಿಯಾಗಿದ್ದನು ಎಂದು ಭಕ್ತರು ಹೇಳುತ್ತಾರೆ.

ಈ ಕಾವಡ್ ಯಾತ್ರೆಯಲ್ಲಿ ತ್ರಿಪುರಾಂತಿನ ಪರಮ ಪೂಜ್ಯ ಶ್ರೀ ಡಾ. ಅಭಿನವ ಘನಲಿಂಗ ರುದ್ರಮುನಿ ಶಿವಾಚಾರ್ಯರು, ಹಾಗೂ ಭಕ್ತರು, ಪ್ರಮುಖರು, ಗಣ್ಯರು ಭಾಗಿಯಾಗಿದ್ದರು.

## ಆಗಸ್ಟ್ 18 ರವರೆಗೆ ಅರ್ಜಿ ಸಲ್ಲಿಕೆ ಕೊನೆಯ ದಿನಾಂಕ ವಿಸ್ತರಣೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಆ.08-ಕಲಬುರಗಿ ರಂಗಾಯಣವು ಸಿದ್ಧಪಡಿಸುವ ನಾಟಕಗಳಿಗೆ ಹಾಗೂ ರಂಗ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಲು ಒಂದು ವರ್ಷದ ಅವಧಿಗೆ 03 ಜನ ತಂತ್ರಜ್ಞರು ಹಾಗೂ 12 ಜನ ಕಲಾವಿದರುಗಳನ್ನು ನೇಮಕ ಮಾಡಿಕೊಂಡು ರೆಪರ್ಟರಿ ಪ್ರಾರಂಭಿಸಲಾಗುತ್ತಿದ್ದು, ಇದಕ್ಕಾಗಿ ಆಸಕ್ತಿಯುಳ್ಳ ಕಲಾವಿದರಿಂದ ಅರ್ಜಿ ಸಲ್ಲಿಕೆ ಕೊನೆಯ ದಿನಾಂಕವನ್ನು 2025ರ ಆಗಸ್ಟ್ 18 ರವರೆಗೆ ವಿಸ್ತರಿಸಲಾಗಿದೆ ಎಂದು ಕಲಬುರಗಿ ರಂಗಾಯಣ ಆಡಳಿತಾಧಿಕಾರಿಗಳು ತಿಳಿಸಿದ್ದಾರೆ. ಆಸಕ್ತಿಯುಳ್ಳ ಕಲಾವಿದರು ನಿಗದಿತ ಅರ್ಜಿ ನಮೂನೆಯನ್ನು ರಂಗಾಯಣದ www.rangayanakala-buragi.karnataka.gov.in ವೆಬ್‌ಸೈಟ್‌ದಿಂದ ಡೌನ್‌ಲೋಡ್ ಮಾಡಿಕೊಳ್ಳಬೇಕು. ನಂತರ ಭರ್ತಿ ಮಾಡಿದ ಅರ್ಜಿಯನ್ನು 2025ರ ಆಗಸ್ಟ್ 18ರ ಸಂಜೆ 5.30 ಗಂಟೆಯೊಳಗಾಗಿ ತಲುಪುವಂತೆ ಆಡಳಿತಾಧಿಕಾರಿಗಳು, ರಂಗಾಯಣ, ಡಾ.ಸಿದ್ದಯ್ಯ ಪುರಾಣಿಕ ಸುವರ್ಣ ಸಾಂಸ್ಕೃತಿಕ ಸಮುಚ್ಛಯ ಸೇಡಂ-ಶಹಾಬಾದ ವರ್ತುಲ ರಸ್ತೆ, ಕಲಬುರಗಿ-585105 ಈ ವಿಳಾಸಕ್ಕೆ ಅಥವಾ ಇ-ಮೇಲ್ ವಿಳಾಸ rangayanakala-burgi@gmail.comUÉ ಅರ್ಜಿ ಸಲ್ಲಿಸಬೇಕು. ಈ ಹಿಂದೆ ಅರ್ಜಿ ಸಲ್ಲಿಕೆ ಕೊನೆಯ ದಿನಾಂಕವನ್ನು ಆಗಸ್ಟ್ 8ರವರೆಗೆ ನಿಗದಿಪಡಿಸಲಾಗಿತ್ತು. ಸಂದರ್ಶನದ ದಿನಾಂಕವನ್ನು ನಂತರದಲ್ಲಿ ತಿಳಿಸಲಾಗುತ್ತದೆ. ಆಯ್ಕೆಯಾದ ಅಭ್ಯರ್ಥಿಗಳು ರಂಗಾಯಣದ ನಿಯಮ ಹಾಗೂ ಷರತ್ತುಗಳಿಗೆ ಬದ್ಧರಾಗಿರಬೇಕು.

ಸಂದರ್ಶನದ ಸಂದರ್ಭದಲ್ಲಿ ತರಬೇಕಾದ ಮೂಲ ದಾಖಲೆ ಹಾಗೂ ಮತ್ತಿತರ ಹೆಚ್ಚಿನ ಮಾಹಿತಿಗಾಗಿ ಕಲಬುರಗಿ ರಂಗಾಯಣ ಕಚೇರಿಯನ್ನು ಸಂಪರ್ಕಿಸಲು ಕೋರಲಾಗಿದೆ.

## ಆಗಸ್ಟ್ 10 ರಂದು ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಆ.08-ಕಲಬುರಗಿ ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ವಿಭಾಗದಲ್ಲಿ ಬರುವ ಈ ಕೆಳಕಂಡ ಫೀಡರ್ ವ್ಯಾಪ್ತಿಯಲ್ಲಿನ ನಿರ್ವಹಣಾ ಕಾರ್ಯಕೈಗೊಳ್ಳುವ ಪ್ರಯುಕ್ತ ಆಗಸ್ಟ್ 10 ರಂದು ಭಾನುವಾರ ಬೆಳಿಗ್ಗೆ 10 ರಿಂದ ಸಂಜೆ 4 ಗಂಟೆಯವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಲಿದೆ. ಸಾರ್ವಜನಿಕರು ಜೆಸ್ಕಾಂನೊಂದಿಗೆ ಸಹಕರಿಸುವಂತೆ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರರು(ವಿ) ಪ್ರಕಟಣೆಯಲ್ಲಿ ಕೋರಿದ್ದಾರೆ.

ಪೋಲಿಸ್ ಕಾಲೋನಿ ಫೀಡರ್: ಎಮ್.ಎಸ್.ಐ. ಡಿಗ್ರಿ ಕಾಲೇಜ್, ರಾಜಾಪುರ, ನಾಯ್ಡು ಲೇಔಟ್, ಪಿ.ಡಬ್ಲ್ಯೂಡಿ. ಕ್ವಾರ್ಟರ್ಸ್, ಕುವೆಂಪು ನಗರ ಪೋಲೀಸ್ ಭವನ, ನೃಪತುಂಗಾ ಕಾಲೋನಿ, ಪ್ರಶಾಂತನಗರ-ಬಿ, ಶಾಹಾಬಾದ ಶಕ್ತಿನಗರ, ಗರ್ಲ್ ಹಾಸ್ಟೇಲ್, ಏಶಿಯನ್ ಮಾಲ್, ಜಗತ್, ಹನುಮಾನ ದೇವಸ್ಥಾನ, ಗೊಲ್ಲರ್‌ಗಲ್ಲಿ, ಜಗತ್ ಅಪ್ಪರ ಆಂಡ್ ಲೊವರ್ ಲೇನ್, ಮೈಲಾರಲಿಂಗ ದೇವಾಲಯ, ಪಿ.ಎಲ್.ಡಿ. ಬ್ಯಾಂಕ, ಬಂಜಾರಾ ಲೇಔಟ್, ರಾಜಾಪೂರ್ ಜಿಡಿಎ, ಅಂಬೇಡ್ಕರ ಹಾಸ್ಟೇಲ್ ಹಾಗೂ ಸುತ್ತಮುತ್ತಲ್ಲಿನ ಪ್ರದೇಶಗಳು

ವಿಠ್ಠಲನಗರ ಫೀಡರ್: ಪಿ.ಡಿ.ಎ. ಇಂಜಿನಿಯರಿಂಗ್ ಕಾಲೇಜು, ಡಿ.ಡಿ.ಪಿ.ಐ. ಕಚೇರಿ, ವಿಜಯ-ವಿದ್ಯಾಲಯ ಕಂಪೌಂಡ್, ಐವಾನ್ ಶಾಹಿ ಅಥಿತಿಗೃಹ, ಗುಲ್ಲಾಬೌಡಿ, ಲಾಹೋಟಿ ಪೆಟ್ರೋಲ್ ಪಂಪ್, ಹೆಚ್.ಸಿ.ಜಿ. ಕ್ಯಾನ್ಸರ್ ಆಸ್ಪತ್ರೆ, ಕೆ.ಬಿ.ಎನ್.ಆಸ್ಪತ್ರೆ, ಖೂಬಾ ಪ್ಲಾಟ್, ವಿಠ್ಠಲನಗರ, ಆನಂದನಗರ, ವಿವೇಕಾನಂದನಗರ, ಬಲಘಟ ಕಂಪೌಂಡ್, ಮೇಹತಾ ಕಂಪೌಂಡ್, ಮಿನಿ ವಿಧಾನಸೌಧ ಮತ್ತು ಜೆಸ್ಕಾಂ ಕಚೇರಿ ಕೋರ್ಟ್ ರಸ್ತೆ ಹಾಗೂ ಸುತ್ತಮುತ್ತಲಿನ ಪ್ರದೇಶಗಳು

ಇಂಡಸ್ಟ್ರೀಯಲ್ (ಸೌಥ್) ಫೀಡರ್: ಮಹಾವೀರ ನಗರ, ಶಾಸ್ತ್ರೀ ನಗರ, ಕೋಠಾರಿ ಭವನ, ಮಾಳು ಇಂಡಸ್ಟ್ರೀಯಲ್ ಏರಿಯಾ, ಐ.ಟಿ.ಐ. ಕಾಲೇಜು, ತಿಮ್ಮಾಪೂರಿ ಸರ್ಕಲ್, ವೆಂಕಟೇಶ ನಗರ, ಹೊಸ ಯುನೈಟೆಡ್ ಆಸ್ಪತ್ರೆ, ಪ್ರಜಾವಾಣಿ ಕಚೇರಿ, ಖಮರುಲ್ ಇಸ್ಲಾಮ್ ಮನೆ, ವಸಂತ ನಗರ, ಸರಕಾರಿ ಮುದ್ರಣಾಲಯ, ಸಂಗಮೇಶ್ವರ ಆಸ್ಪತ್ರೆ, ವಿದ್ಯಾನಗರ ಮಹಿಳಾ ವಸತಿಗೃಹ, ಕೆ.ಕೆ. ಮೆಡಿಕಲ್ ಬಸ್ ನಿಲ್ದಾಣ ಹಾಗೂ ಸುತ್ತಮುತ್ತಲಿನ ಪ್ರದೇಶಗಳು.

ಐ.ಟಿ. ಪಾರ್ಕ್ ಫೀಡರ್: ಸಂತೋಷ ಕಾಲೋನಿ, ವರ್ಗಿಸ್ ಅಪಾರ್ಟ್‌ಮೇಂಟ್, ಮಾಣಿಕಪ್ರಭು ಕಾಲೋನಿ, ಐ.ಟಿ.ಪಾರ್ಕ, ನಂದಗೋಕುಲ ಮತ್ತು ಜಯತೀರ್ಥ ಕಲ್ಯಾಣ ಮಂಟಪ ಹಾಗೂ ಸುತ್ತಮುತ್ತಲಿನ ಪ್ರದೇಶಗಳು.

ಜಿ.ಡಿ.ಎ.ಫೀಡರ್: ಧರಿಯಾಪೂರ ಜಿ.ಡಿ.ಎ, ಕೋಟನೂರ ಜಿ.ಡಿ.ಎ ನಿಯರಕಾಡಾ ಕಚೇರಿ, ಉಪ್ಪಿನತೋಟ, ಬನಶಂಕರಿ ಆಸ್ಪತ್ರೆ, ಕಾಯಕ ಕಾಲೇಜು, ಆರ್ಯನ್ ಶಾಲೆ, ಓಜಾ ಲೇಔಟ್, ವಿವೇಕಾನಂದ ಕಾಲೋನಿ, ಆರ್.ಟಿ. ನಗರ, ಸಜ್ಜನ ಲೇಔಟ್, ಆರ್ಯನ್ ಶಾಲೆ ಸುತ್ತ ಮುತ್ತಲಿನ ಪ್ರದೇಶಗಳು ಹಾಗೂ ಅಂಬೇಡ್ಕರ ಹಾಸ್ಟೇಲ್.

ರಾಘವೇಂದ್ರ ಕಾಲೋನಿ ಫೀಡರ್: ಆರ್ಕಿಡ್ ಮಾಲ್, ಸಾರಿಗೆ ಸದನ, ಗ್ರ್ಯಾಂಡ್ ಹೋಟೆಲ್, ರಂಗಮಂದಿರ, ವೀರಶೈವ ಕಲ್ಯಾಣ ಮಂಟಪ, ರೋಟರಿ ಕ್ಲಬ್, ಶರಣ ನಗರ, ಗೋವಾ ಹೋಟೆಲ್, ವೆಂಕೂನ್ ಮಾರ್ಕೇಟ್, ಶರಣಬಸವೇಶ್ವರ ದೇವಸ್ಥಾನ, ಅಪ್ಪಾ ಪಬ್ಲಿಕ್ ಶಾಲೆ, ಹೊಸ ಕಾರ್ಪೋರೇಷನ್ ಕಚೇರಿ, ಯತೀಮ್‌ಖಾನಾ ಏರಿಯಾ ಹಾಗೂ ಸುತ್ತಮುತ್ತಲಿನ ಪ್ರದೇಶಗಳು.

ಹೌಸಿಂಗ್ ಬೋರ್ಡ ಫೀಡರ್: ಜಿ.ಡಿ.ಎ, ಪಿ ಆಂಡ್ ಟಿ, ನವಜೀವನ ನಗರ, ಮೋಹನ ನಗರ ಗಾಬ್ರೇ ಲೇಔಟ್, ಹೌಸಿಂಗ್ ಬೋರ್ಡ ಕಾಲೋನಿ ಕಣ್ಮಕರ ಲೇಔಟ್ ಕಾಯಕ ಮತ್ತು ನಳಂದಾ ಶಾಲೆ, ತೋಶಣಿ ಬಾಲಾ ಲೇಔಟ್, ಸಿದ್ದೇಶ್ವರ ಕಲ್ಯಾಣ ಮಂಟಪ, ಗಣೇಶ ನಗರ ಭಾಗ್ಯವಂತಿ ನಗರ, ಮುಕ್ತಾ ಟಾಕೀಸ್ ಹಾಗೂ ಸುತ್ತ ಮುತ್ತಲಿನ ಪ್ರದೇಶಗಳು.

ಗಜಾನನ ಫೀಡರ್: ಸಿರಸಗಿ ಹಾಗೂ ಸುತ್ತಮುತ್ತಲಿನ ಪ್ರದೇಶಗಳು. ಅಪ್ಪಾ ಫೀಡರ್: ಬಿದ್ದಾಪೂರ, ಕ್ಯೂಪಿ ಲೇಔಟ್, ಬಬಲಾದ ರೈಲ್ವೆ ಸ್ಟೇಷನ್ ಹಾಗೂ ಸುತ್ತಮುತ್ತಲಿನ ಪ್ರದೇಶಗಳು. ನೃಪತುಂಗಾ ಫೀಡರ್: ಜಿ.ಡಿ.ಎ. ಕೋಟನೂರ ಪ್ರದೇಶ, ನ್ಯೂ ಓರ್ಘಾ ಲೇಔಟ್, ಧನಶೆಟ್ಟಿ ನಗರ, ಸ್ಲಮ್ ಬೋರ್ಡ್ ವಸತಿ ಗೃಹಗಳು ಹಾಗೂ ಸುತ್ತಮುತ್ತಲ್ಲಿನ ಪ್ರದೇಶಗಳು. ಉದನೂರ ಐಪಿ ಫೀಡರ್: ಉದನೂರ ಗ್ರಾಮ ಹಾಗೂ ಸುತ್ತಮುತ್ತಲಿನ ಪ್ರದೇಶಗಳು. ನಂದಿಕೂರ ಫೀಡರ್: ನಂದಿಕೂರ ಗ್ರಾಮ ಹಾಗೂ ಸುತ್ತಮುತ್ತಲಿನ ಪ್ರದೇಶಗಳು.

## ತಾಳಕೇರಿ ವಸತಿ ಶಾಲೆ ಥ್ರೋಬಾಲ್, ವಾಲಿಬಾಲ್ ತಾಲೂಕು ಮಟ್ಟಕ್ಕೆ ಆಯ್ಕೆ.



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: ಜಿಲ್ಲೆ ಯಲಬುರ್ಗಾ ತಾಲೂಕಿನ ಯಾಪಲದಿನ್ನಿ ಗ್ರಾಮದಲ್ಲಿ ದಿ.6 ರಂದು ನಡೆದ ಹೀರೆವಂಕಲಕುಂಟಾ ಹಾಗೂ ತಾಳಕೇರಿ ಕ್ಲಸ್ಟರ್ ಹಿರಿಯ ಪ್ರಾಥಮಿಕ ಶಾಲೆ ವಲಯ ಮಟ್ಟದ ಕ್ರೀಡಾಕೂಟದಲ್ಲಿ ತಾಳಕೇರಿಯ ಮೊರಾರ್ಜಿ ದೇಸಾಯಿ ವಸತಿ ಶಾಲೆ ವಿದ್ಯಾರ್ಥಿಗಳು ಗುಂಪು ಆಟಗಳು ಹಾಗೂ ವೈಯಕ್ತಿಕ ವಿಭಾಗ ಆಟದಲ್ಲಿ ವಿಜೇತರಾಗಿ ತಾಲೂಕು ಮಟ್ಟದ ಕ್ರೀಡಾ-ಕೂಟಕ್ಕೆ ಆಯ್ಕೆಯಾಗಿದ್ದಾರೆ.

ಬಾಲಕ -ಬಾಲಕಿಯರ ಥ್ರೋಬಾಲ್ ಪ್ರಥಮ ಸ್ಥಾನ. ಬಾಲಕರ ವಾಲಿಬಾಲ್ ಪ್ರಥಮ, ಬಾಲಕಿಯರ ವಾಲಿಬಾಲ್ ದ್ವಿತಿಯ ಸ್ಥಾನ ಪಡೆದುಕೊಂಡಿದ್ದಾರೆ.

**ವೈಯಕ್ತಿಕ ವಿಭಾಗದಲ್ಲಿ:**

ಭಾಗ್ಯಮ್ಮ,ಹುಲಿಗೆಮ್ಮ,ಮರಿಯವ್ವ,ಆರ್ಚನಾ,ಸಂಜನ,ರಾಜೇಶ್ವರಿ,ಮಂಜುಳಾ,ಪೃಥ್ವಿ,ಅರುಣ,ಆಕಾಶ, ಗಿರೀಶ್.ವಿದ್ಯಾರ್ಥಿಗಳು 100 ಮೀ,200 ಮೀ,600 ಮೀ,ಹಡಲ್ಸ್, ಉದ್ದ ಜಿಗಿತ,ಎತ್ತರ ಜಿಗಿತ,ಡಿಸ್ಕ್ ಸ್ ಥ್ರೋ, ವಿಭಾಗದಲ್ಲಿ ಪ್ರಥಮ, ಸ್ಥಾನಗಳನ್ನು ಪಡೆದುಕೊಂಡು, ಶಾಲೆಗೆ ಕೀತಿ9 ತಂದಿದ್ದಾರೆ.

ವಿದ್ಯಾರ್ಥಿಗಳು ಈ ಸಾಧನೆಗೆ ವಸತಿ ಪ್ರಾಂಶುಪಾಲರದ ಶಿವಾನಂದ ಹರವಾಳ, ದೈಹಿಕ ಶಿಕ್ಷಕರು, ಪ್ರಬಾರಿ ನಿಲಯ ಪಾಲಕರು ರಮೇಶ್ ಬೂದಿಹಾಳ, ಶಿಕ್ಷಕರು, ಭೋಧ-ಕೇತರ ಸಿಬ್ಬಂದಿಗಳು ಹರ್ಷ ವ್ಯಕ್ತಪಡಿಸಿದ್ದಾರೆ.

## ಕೊಪ್ಪಳದಲ್ಲಿ ಕೊಲೆಯಾದ ಗವಿಸಿದ್ದಪ್ಪನ ಮನೆಗೆ ಕಿಶೋರಿ ಬೂದನೂರು ಬೇಟಿ ಸಾಂತ್ವನ.



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಇತ್ತಿಚಿಗಷ್ಟೇ ಬೀಕರ ಕೊಲೆಯಾದ ಕೊಪ್ಪಳದ ಯುವಕ ಗವಿಸಿದ್ದಪ್ಪ ನಾಯಕ್ ಅವರ ಮನೆಗೆ ಕಾಂಗ್ರೆಸ್ ನಾಯಕಿ ಸಮಾಜಸೇವಕಿ ಕಿಶೋರಿ ಬೂದನೂರು ಬೇಟಿ ನೀಡಿ ತಾಯಿಗೆ ಮತ್ತು ಕುಟುಂಬದ ಸದಸ್ಯರಿಗೆ ಸಾಂತ್ವನ ಹೇಳಿ ಧೈರ್ಯ ತುಂಬಿದರು.

ಇದೇ ವೇಳೆ ಮಾತನಾಡಿ ಗವಿಸಿದ್ದಪ್ಪ ಒಬ್ಬನೇ ಮಗನಾಗಿರುವ ಕಾರಣ-ಕ್ಕಾಗಿ ಕುಟುಂಬದ ನಿರ್ವಹಣೆಯು ಆತನ ಜವಾಬ್ದಾರಿಯಾಗಿತ್ತು. ಬೀಕರ ಕೊಲೆಯಾಗಿದ್ದು ಖಂಡನೀಯ ತಪ್ಪಿತಸ್ಥರಿಗೆ ಗರಿಷ್ಠ ಶಿಕ್ಷೆಯನ್ನು ನೀಡಿ ನಗರದಲ್ಲಿ ಶಾಂತಿ ನೆಲೆಸುವಂತೆ ಮಾಡಲಿ ಎಂದು ಅಗ್ರಹಿಸಿದರು ಅವರ ಕುಟುಂಬಕ್ಕೆ ಈ ದುಃಖವನ್ನು ಬರಿಸುವ ಶಕ್ತಿಯನ್ನು ನೀಡಲಿ ಅಂತ ಭಗವಂತನಲ್ಲಿ ಪ್ರಾರ್ಥಿಸಿ, ಅವರ ತಂದೆ ತಾಯಿಗೆ ಸಾಂತ್ವನದ ಮಾತುಗಳನ್ನು ಹೇಳಿದರು.

## ಸಡಗರದಿಂದ ಜರುಗಿದ ಪರಿಸರ ಸಂರಕ್ಷಣೆ ಜನಜಾಗೃತಿ

## ಶುದ್ಧ ಪರಿಸರ ನಿರ್ಮಾಣಕ್ಕೆ ಮರ ಗಿಡ ಬೆಳೆಸಿ:ಆಶಿಶ್ ರೆಡ್ಡಿ





ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ:- ಭೂ ತಾಪಮಾನ ಹೆಚ್ಚಳದಿಂದಾಗಿ ಜೀವ ವೈವಿಧ್ಯತೆ ಮೇಲೆ ಭಾರಿ ಪರಿಣಾಮ ಬೀರುತ್ತಿದೆ ಎಂದು ಬೀದರ್ ಪ್ರಾದೇಶಿಕ ಅರಣ್ಯ ವಿಭಾಗದ ಉಪ ಅರಣ್ಯ ಸಂರಕ್ಷಧಿಕಾರಿ ಆಶಿಶ್ ರೆಡ್ಡಿ ಎಂ.ವಿ ಪಟ್ಟಣದ ವಿವೇಕಾನಂದ ಶಿಕ್ಷಣ ಸಂಸ್ಥೆಯಲ್ಲಿ ಪರಿಸರವಾಹಿನಿ ಬೀದರ್ ಕೋಟಿವೃಕ್ಷ ಆಂದೋಲನ ಅಂಗವಾಗಿ ಹಮ್ಮಿಕೊಂಡಿದ್ದ ಪರಿಸರ ಸಂರಕ್ಷಣೆ ಜನಜಾಗೃತಿ ಕಾರ್ಯಕ್ರಮ ಹಾಗೂ ಸಸಿ ನೆಡುವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡುತ್ತ ತಿಳಿಸಿದರು. ಭೂ ತಾಪಮಾನ ಕಡಿಮೆ ಮಾಡಲು ಅತ್ಯಧಿಕ ಪ್ರಮಾಣದಲ್ಲಿ ಮರ ಗಿಡ ಬೆಳೆಸಲು ತಿಳಿಸಿದರು. ಬೀದರ್ ಜಿಲ್ಲೆಯಲ್ಲಿ ಅತ್ಯುತ್ತಮ ಜೀವ ವೈವಿಧ್ಯತೆ ಹೊಂದಿದೆ 35 ಚಿಟ್ಟೆ ಪ್ರಭೇದಗಳು ಪತ್ತೆಯಾಗಿವೆ ಬೀದರ್ ಜಿಲ್ಲೆಯಲ್ಲಿ ಹಸಿರು ಹೊದಿಕೆ ಹೆಚ್ಚಿಸಲು ಸಾರ್ವಜನಿಕರು, ವಿದ್ಯಾರ್ಥಿಗಳು ಮನೆ ಹಾಗೂ ಶಾಲೆ ಆವರಣದಲ್ಲಿ ಸಸಿ ನೆಟ್ಟು ಸಂರಕ್ಷಿಸಲು ತಿಳಿಸಿದರು. ಪರಿಸರ ವಾಹಿನಿ ಜಿಲ್ಲಾಧ್ಯಕ್ಷ ಶೈಲೇಂದ್ರ ಕಾವಡಿ ಮಾತನಾಡಿ, ಅತ್ಯಾಧಿಕ ಆಮ್ಲಜನಕ ಬಿಡುಗಡೆ ಮಾಡುವ ಬೇವು, ಅರಳಿ ಮರ ಪ್ರತಿ ಗ್ರಾಮಗಲ್ಲಿ ಹೆಚ್ಚಿನ ಗಿಡ ಬೆಳೆಸಲು ಮನವಿ ಮಾಡಿದರು. ವಿವೇಕಾನಂದ ಶಿಕ್ಷಣ ಸಂಸ್ಥೆಯಲ್ಲಿ ಪರಿಸರ ಸಂರಕ್ಷಣೆ ಜಾಗೃತಿ ಅಂಗವಾಗಿ ನೆಟ್ಟ ಸಸಿಗಳು ಸಂರಕ್ಷಿ ಉಳಿಸಿ ಹಸಿರು ಸಂಸ್ಥೆಯನ್ನು ಮಾಡಿದ್ದಕ್ಕೆ 2025-26ನೇ ಸಾಲಿನ ಪರಿಸರೋತ್ಸವ ಪ್ರಶಸ್ತಿ ಆಯ್ಕೆ ಮಾಡಲಾಗಿದೆ ಎಂದು ಶೈಲೇಂದ್ರ ಕಾವಡಿ ಘೋಷಿಸಿದರು. ಸಂಸ್ಥೆ ಅಧ್ಯಕ್ಷ ರಮೇಶ್ ಗಾದಾ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ವಿದ್ಯಾರ್ಥಿಗಳಲ್ಲಿ ಪರಿಸರ ಜಾಗೃತಿ ಒಡಮೂಡಿಸಿದರೆ ಪರಿಸರ ಸಂರಕ್ಷಣೆಗೆ ಸಹಾಯವಾಗುತ್ತದೆ ಎಂದರು. ಇದೇ ಸಂದರ್ಭದಲ್ಲಿ ವಿದ್ಯಾರ್ಥಿಗಳಿಗೆ ಸಸಿ ವಿತರಿಸಲಾಯಿತು. ಹಾಗೂ ಭಾಷಣ ಸ್ಪರ್ಧೆಗಳಲ್ಲಿ ವಿಜೇತ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಯಿತು. ಶಾಲಾ ಆವರಣದಲ್ಲಿ ಸಸಿ ನೆಡಿಸಲಾಯಿತ್ತು. ಈ ಸಂದರ್ಭದಲ್ಲಿ ಡಿವೈಎಸ್ಪಿ ಜೆ. ಎಸ್ ನ್ಯಾಮೇಗೌಡ, ಪ್ರಾದೇಶಿಕ ವಲಯ ಅರಣ್ಯಧಿಕಾರಿ ಐಶ್ವರ್ಯ ಗೊಬ್ಬುರ, ವೆಂಕಟೇಶ್ ಎಸ್ ಕುಲಕರ್ಣಿ, ರಾಹುಲ ದೇವ ಪ್ರಸಾದ, ನಾಗರಾಜ ವಾಸಗಿ, ನಾರಾಯಣರಾವ್ ಜಾಜಿ, ವೆಂಕಟೇಶ್ ಜಾಜಿ, ಅನಿಲ್ ಪಲ್ಲೇರಿ, ನಾಗರಾಜ್ ಎಂ ವಾಸಗಿ ಸೇರಿದಂತೆ ಪ್ರಾಂಶುಪಾಲರು ಸಿಬ್ಬಂದಿ ವರ್ಗದವರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಆ.12ರಂದು ಮಂಡಲಗಿರಿಯಲ್ಲಿ ಅಪ್ರೆಂಟಿಸ್ ಮೇಳ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಕೊಪ್ಪಳ ಜಿಲ್ಲೆ ಮಂಡಲಗಿರಿಯ ಜಗದ್ಗುರು ತೋಂಟದಾರ್ಯ ಕೈಗಾರಿಕಾ ತರಬೇತಿ ಸಂಸ್ಥೆ (ಐ.ಟಿ.ಐ ಕಾಲೇಜು) ವತಿಯಿಂದ ಅಪ್ರೆಂಟಿಸ್ ಮೇಳವನ್ನು ಆಗಸ್ಟ್ 12 ರಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 1.30 ಗಂಟೆಯವರೆಗೆ ಆಯೋಜಿಸಲಾಗಿದೆ.

ಈ ಮೇಳದಲ್ಲಿ ಖಾಸಗಿ ಕಂಪನಿಗಳಾದ ಜಿ.ಎಸ್.ಡಬ್ಲ್ಯೂ. ಸ್ಟೀಲ, ತೋರಣಗಲ್ (ಬಳ್ಳಾರಿ) ಮತ್ತು ಇಂಡೋ ಎಮ್.ಆಯ್. ಎಮ್ ಪ್ರೈವೇಟ್ ಲಿಮಿಟೆಡ್, ದೊಡ್ಡಬಳ್ಳಾಪು' ಸಂಸ್ಥೆಗಳು ಭಾಗವಹಿಸಲಿದ್ದು, ತಮ್ಮಲ್ಲಿ ಖಾಲಿ ಇರುವ ಹುದ್ದೆಗಳಿಗೆ ಐಟಿಐ ಅಭ್ಯರ್ಥಿಗಳಿಗೆ ನೇರ ಸಂದರ್ಶನದ ಮೂಲಕ ನೇಮಕಾತಿ ಮಾಡಿಕೊಳ್ಳಲಿವೆ. ಈ ಅಪ್ರೆಂಟಿಸ್ ಮೇಳದಲ್ಲಿ ಭಾಗವಹಿಸುವವರಿಗೆ ಯಾವುದೇ ಶುಲ್ಕವಿಲ್ಲ ಹಾಗೂ ಉಚಿತ ಪ್ರವೇಶ ಕಲ್ಪಿಸಲಾಗಿದೆ.

18 ರಿಂದ 24 ವರ್ಷದ ನಿರುದ್ಯೋಗಿ ಯುವಕರು ಮತ್ತು ಯುವತಿಯರು ಈ ಅವಕಾಶವನ್ನು ಬಳಸಿಕೊಳಬೇಕು.

ಅರ್ಹ ಅಭ್ಯರ್ಥಿಗಳು ತಮ್ಮ ವಿದ್ಯಾರ್ಹತೆಯ ದೃಢೀಕರಿಸಲಾದ ಪ್ರಮಾಣ ಪತ್ರಗಳ 3 ಪ್ರತಿ, ಆಧಾರ್ ಕಾರ್ಡಿನ ಪ್ರತಿಯನ್ನು, ಬಯೋಡಾಟಾ ಮತ್ತು ಪಾಸ್ ಪೋರ್ಟ್ ಅಳತೆಯ 2 ಭಾವಚಿತ್ರಗಳೊಂದಿಗೆ ಭಾಗವಹಿಸಿ, ಉದ್ಯೋಗದ ನೆರವನ್ನು ಪಡೆಯಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ಮಿನಿಮಯ ಕೇಂದ್ರ, ಜಿಲ್ಲಾಡಳಿತ ಭವನ, ಕೊಪ್ಪಳ ಇಲ್ಲಿಗೆ ಸಂಪರ್ಕಿಸುವಂತೆ ಜಿಲ್ಲಾ ಉದ್ಯೋಗ ವಿನಿಮಯ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನಶಮುಕ್ತ ಸಮಾಜ ನಿರ್ಮಾಣಕ್ಕಾಗಿ ಸಂಕಲ್ಪ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಅ. 08 : ಅರ್ಥೈಸಿಕೊಂಡಿದ್ದೇವೆಂಬುದಕ್ಕಿಂತ ಜೀವನಕ್ಕೆಎಷ್ಟುಉಪಯೋಗವಾಗಿದೆ ಎಂಬುದು ಅರಿಯಬೇಕು.ಎಲ್ಲೆಡೆ ನೈತಿಕ ಮೌಲ್ಯ, ಅರಾಜಕತೆ, ಜೀವನದ ಗೊತ್ತುಗುರಿಯಿಲ್ಲದೆ ಸಂಕಷ್ಟಕ್ಕೆ ಸಿಲುಕಿ ಹಣ ಕೊಟ್ಟು ಹೆಣವಾಗುತ್ತಿರುವುದು ವಿಷಾದಕರ ಸಂಗತಿ ಎಂದು ಡಾ. ಅಬ್ದುಲ್ ಖದೀರ ನುಡಿದರು.ವಿದ್ಯಾನಗರದ ಬಸವಕೇಂದ್ರದಲ್ಲಿ ಆಯೋಜಿಸಿದ ಡಾ ಮಹಾಂತ ಅಪ್ಪ ಇಳಕಲ್ಲ ಅವರ ಜನ್ಮ ದಿನ ಅಂಗವಾಗಿ ವ್ಯಸನಮುಕ್ತ ದಿನಾಚರಣೆಯನ್ನು ಉದ್ಘಾಟಿಸಿ ಡಾ ಅಬ್ದುಲ್ ಖದೀರ ಮಾತನಾಡುತ್ತ ಒಳಿತಿನ ಸ್ಥಾಪನೆ ಕೆಡುಕಿನ ನಿರ್ಮೂಲನೆ ಘೋಷವಾಕ್ಯದೊಂದಿಗೆ ಬೀದರ ನಾಗರೀಕರ ಸನ್ಮಾರ್ಗ ಸಮಿತಿ ರಚಿಸಿ ಸಮಾಜದ ಓರೆ ಕೋರೆಗಳನ್ನು ತಿದ್ದಲು ದಾಪುಗಾಲು ಹಾಕುತ್ತಿದೆ. ಇಂದು ಗುಟ್ಕಾ,ತಂಬಾಕು, ಸೆರಿಯಿಂದ ಅನೇಕರ ಆರೋಗ್ಯ ಹದಗೆಟ್ಟು ಸಂಸಾರ ಹಾಳಾಗಿವೆ. ಕನಿಷ್ಠ ನಮ್ಮ ಮನೆ ಓಣಿಗಳಿಂದಲೇ ನಶ ಮುಕ್ತ ಮಾಡಿ ಸುಂದರ ಸಮಾಜ ನಿರ್ಮಿಸಲು ಸಂಕಲ್ಪ ಮಾಡಲು ಮನವಿ ಮಾಡಿದರು. ಇಂದು ಭರಾಟೆಯ ನೆಪದಲ್ಲಿ ಮಕ್ಕಳ ಮದುವೆಗಳು ಮಾಡಿ ಸಾಲದಲ್ಲಿ ಸಿಕ್ಕು ಒದ್ದಾಡುವ ಪರಿಸ್ಥಿತಿ ಎಲ್ಲ ಸಮಾಜದಲ್ಲಿ ಶಾಪವಾಗಿ ಪರಿಣಮಿಸಿದೆ. ಲಕ್ಷಾಂತರ ರೂಪಾಯಿ ಖರ್ಚು ಮಾಡಿ ಕುಟುಂಬದ ವ್ಯವಸ್ಥೆ ಹಾಳು ಮಾಡಿಕೊಳ್ಳುತ್ತಿರುವುದು ಯಾವ ಪುರುಷಾರ್ಥಕ್ಕಾಗಿದೆ. ಸರಳ ಮದುವೆ ಸಜ್ಜನರಾಗಿ ಸಂಸಾರ ಸಾಗಿಸಲು ಪ್ರತಿಯೊಬ್ಬರ ಕಡೆಗೆ ಹೋಗಿ ವಿಷಯ ಮನವರಿಕೆ ಮಾಡಲಾಗುತ್ತಿದೆ. ಬೀದರನಲ್ಲಿ ದಿನೇದಿನೇ ಭಿಕ್ಷಾಟನೆ ಹೆಚ್ಚಾಗುತ್ತಿದೆ, ಇದರಿಂದ ಆಲಸ್ಯ ಆವರಿಸಿ ಕುಳಿತು ಉಣ್ಣುವ ಪರಿಸ್ಥಿತಿ ನಿರ್ಮಾಣಗೊಂಡಿದೆ. ಇಂದು ನಾವೆಲ್ಲರೂ ಪಣ ತೊಟ್ಟು ಭಿಕ್ಷೆ ಹಾಕದೆ ಅವರಿಗೆ ಸರಿ ದಾರಿಗೆ ತರಬೇಕು ಅವರ ಕೈಲಾಗದಿದ್ದರೆ ಅನುಕೂಲಸ್ಥರಿಂದ ಸಹಾಯ ಪಡೆದು ಸಹಕರಿಸೋಣ ವಿನಃ ಭೀಕ್ಷೆ ಹಾಕಬೇಡಿ. ಹನ್ನೆರಡನೇ ಶತಮಾನದಲ್ಲಿ ಎಲ್ಲರೂ ಕಾಯಕ ಮಾಡಿ ಜೀವನ ಸಮೃದ್ಧಿ ಮಾಡಿಕೊಂಡು ಕಾಯಕವೇ ಕೈಲಾಸ ಎಂಬುದು ಇಂದು ಸಮಾಜದಲ್ಲಿ ಪ್ರತಿಷ್ಠಾಪಿಸುವುದು ತುಂಬಾ ಅನಿವಾರ್ಯ ಎಂದರು. ಮುಖ್ಯ ಅತಿಥಿಗಳಾಗಿ ಆಗಮಿಸಿದ ಡಾ ರಾಜಶೇಖರ ಸೇಡಂಕರ ಮಾತನಾಡಿ ಇಂದಿನ ನಮ್ಮ ಯುವಕರು ದಾರಿ ತಪ್ಪುತ್ತಿದ್ದಾರೆ, ನಾವು ಜಾಗೃತಿ ಮಾಡದಿದ್ದರೆ ಇಡೀ ಸಮಾಜ ಕೆಡುತ್ತದೆ.ಹಾಳಾದ ಮೇಲೆ ದುಃಖಪಡುವುದಕ್ಕಿಂತ ಮೊದಲೇ ಜಾಗೃತಿ ಮಾಡೋಣ.ನಾವೆಲ್ಲರೂ ಮನಸ್ಸು ಮಾಡಿದರೆ ಸುಂದರ ಸಮಾಜ ಕಟ್ಟಲು ಸಮಯ ಹಿಡಿಯೊದಿಲ್ಲ.ಅಂದು ಶರಣರು ತ್ಯಾಗ ಮಾಡಿರುವದರಿಂದಲೆ ಜಗತ್ತಿನ ಇತಿಹಾಸ ಪುಟಗಳಲ್ಲಿ ಅಚ್ಚಳಿಯದೆ ಉಳಿದಿದ್ದಾರೆ. ಶರಣರ ಆಶೀರ್ವಾದ ನಮಗೂ ಸಿಗಬೇಕಾದರೆ ಅರಿವು ಆಚಾರ ಅನುಭಾವದೊಂದಿಗೆ ಕತ್ತಲೆ ಕಳೆಯಲು ಬೆಳಕು ಹಿಡಿಯಲೇ ಬೇಕಾಗಿದೆ. ಇಂದು ನಾವು ಚೆನ್ನಾಗಿದ್ದರೆ ಸಾಲದು ನಮ್ಮ ಸುತ್ತಮುತ್ತಲಿನ ಪರಿಸರ ಸಹ ಸ್ವಚ್ಛಂದವಾಗಿರುವುದು ಅಷ್ಟೆ ಅವಶ್ಯಕತೆಯಾಗಿದೆ ಎಂದು ನುಡಿದರು.ಪೂಜ್ಯ ಡಾ ಮಹಾಂತ ಅಪ್ಪಗಳೊಬ್ಬರೆ ಜೋಳಿಗೆ ಹಾಕಿಕೊಂಡು ದುಶ್ಚಟಗಳಿಗೆ ಭಿಕ್ಷೆ ಬೇಡಿ ಸಮಾಜ ಸುದಾರಿಸಿರುವುದು ನಮಗೆಲ್ಲರಿಗೆ ಒಂದು ದಿಗ್ದರ್ಶನವಾಗಿದೆ. ಅವರ ದಾರಿಯಲ್ಲಿ ನಾವು ಹೆಜ್ಜೆ ಹಾಕೋಣ ತಾವೆಲ್ಲರೂ ಸಾಥ ನೀಡಿರೆಂದು ಮನವಿ ಮಾಡಿದರು. ಕಾರ್ಯಕ್ರಮದಲ್ಲಿ ಮನೋಹರ ದಂಡೆ, ಅಶೋಕಕುಮಾರ ವಡಗಾವೆ, ಹಾವಶೆಟ್ಟಿ ಪಾಟೀಲ, ಶಂಭುಲಿಂಗ ವಾಲ್ದೊಡ್ಡಿ ಉಪಸ್ಥಿತಿಯಾಗಿದ್ದರು. ಪೂಜ್ಯ ಶ್ರೀ ಬಸವಮಹಾಂತ ಸ್ವಾಮಿ ಸಿರಸಂಗಿ ಮಠ ಬೆಳಗಾವಿ ಸಾನಿಧ್ಯ ವಹಿಸಿದರೆ, ಬಸವಕೇಂದ್ರದ ಅಧ್ಯಕ್ಷರಾದ ಶರಣಪ್ಪ ಮಿತಾರೆ ಅಧ್ಯಕ್ಷತೆ ವಹಿಸಿದ್ದರು. ಕ.ಸಾ.ಪ.ಅಧ್ಯಕ್ಷರಾದ ಸುರೇಶ ಚನ್ನಶೆಟ್ಟಿ ಸ್ವಾಗತಿಸಿ ಪ್ರಾಸ್ತಾವಿಕ ಮಾತನಾಡಿದರೆ, ಶಿವಶಂಕರ ಟೋಕರೆ ನಿರೂಪಣೆ ಮಾಡಿದರೆ ಕರುಣಾ ಶಟಕಾರ ವಂದಿಸಿದರು ಅಶ್ವಿನಿ ರಾಜಕುಮಾರ ಸ್ವಾಮಿ ವಚನಗಾಯನ ನಡೆಸಿಕೊಟ್ಟರು.

# ನೆರವಿಗೆ ಪೊಲೀಸರಿಗೆ ಕರೆ ಮಾಡಿ



ಮಲ್ಲಮ್ಮ ನುಡಿ ವಾರ್ತೆ ಬೀದರ. ಅ. 08 : ಮಕ್ಕಳು ಯಾವುದೇ ಅಪಾಯ ಅಥವಾ ತುರ್ತು ಸಂದರ್ಭಗಳಲ್ಲಿ ನೆರವಿಗಾಗಿ ಮಕ್ಕಳ ಸಹಾಯವಾಣಿ ಸಂಖ್ಯೆ 1098, ಪೊಲೀಸ್ ಕಂಟ್ರೋಲ್ ರೂಂ ಸಂಖ್ಯೆ 100 ಇಲ್ಲವೇ ತುರ್ತು ಸೇವೆ ಸಂಖ್ಯೆ 112 ಗೆ ಕರೆ ಮಾಡಬೇಕು ಎಂದು ಬೀದರ್ ಡಿವೈಎಸ್‌ಪಿ ಶಿವನಗೌಡ ಪಾಟೀಲ ಹೇಳಿದರು.

ನಗರದ ನೌಬಾದ್–ಚೊಂಡಿ ರಸ್ತೆಯಲ್ಲಿ ಇರುವ ದಿ ಇನ್ಫಿನಿಟಿ ಶಾಲೆಯಲ್ಲಿ ಅಕ್ಕ ಪಡೆ ವತಿಯಿಂದ ಗುರುವಾರ ನಡೆದ ಮಕ್ಕಳ ಸುರಕ್ಷತೆ ಜಾಗೃತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಮಕ್ಕಳು ಮತ್ತು ಸಾರ್ವಜನಿಕರ ರಕ್ಷಣೆ ಹಾಗೂ ಸುರಕ್ಷತೆಯೇ ಪೊಲೀಸ್ ಇಲಾಖೆಯ ಆದ್ಯತೆಯಾಗಿದೆ ಎಂದು ತಿಳಿಸಿದರು.

ಮಕ್ಕಳು ಉತ್ತಮ ಸ್ಪರ್ಶ, ಕೆಟ್ಟ ಸ್ಪರ್ಶದ ಬಗ್ಗೆ ಅರಿವು ಹೊಂದಬೇಕು. ಅನಾವಶ್ಯಕ ಸ್ಪರ್ಶವಾದರೆ ಕೂಡಲೇ ಶಿಕ್ಷಕರು ಹಾಗೂ ಪಾಲಕರ ಗಮನಕ್ಕೆ ತರಬೇಕು. ರಸ್ತೆ ದಾಟುವಾಗ ಸುರಕ್ಷತಾ ನಿಯಮ ತಪ್ಪದೆ ಪಾಲಿಸಬೇಕು ಎಂದು ಹೇಳಿದರು.

ತಂತ್ರಜ್ಞಾನ ಯುಗದಲ್ಲಿ ಸಾಮಾಜಿಕ ಜಾಲತಾಣ, ಇಂಟರ್ನೆಟ್ ಬಳಕೆ ಸಂದರ್ಭದಲ್ಲಿ ಎದುರಾಗುವ ಅಪಾಯ, ಮೋಸದ ಕರೆ, ಹ್ಯಾಕಿಂಗ್ ಮುಂತಾದ ಸೈಬರ್ ಅಪರಾಧಗಳ ಬಗ್ಗೆ ಎಚ್ಚರ ವಹಿಸಬೇಕು ಎಂದು ತಿಳಿಸಿದರು.

ಶಾಲೆಯ ಒಳಗೆ ಹಾಗೂ ಹೊರಗೆ ಮಕ್ಕಳ ಸುರಕ್ಷತೆಗೆ ಕ್ರಮ ಕೈಗೊಳ್ಳುವುದು ಬಹಳ ಅವಶ್ಯಕ ಎಂದು ಅಕ್ಕ ಪಡೆಯ ಎಎಸ್‌ಐ ಸಂಗೀತಾ ಹೇಳಿದರು.

ಸಂಟಕದ ಸಂದರ್ಭದಲ್ಲಿ ಮಕ್ಕಳು ತಮ್ಮನ್ನು ತಾವು ಹೇಗೆ ರಕ್ಷಿಸಿಕೊಳ್ಳಬೇಕು ಎನ್ನುವುದನ್ನೂ ಅವರು ವಿವರಿಸಿದರು.

ಕಾರ್ಯಕ್ರಮವು ಮಕ್ಕಳಲ್ಲಿ ವಿವಿಧ ವಿಷಯಗಳ ಕುರಿತು ತಿಳಿವಳಿಕೆ ಮೂಡಿಸಲು ನೆರವಾಗಿದೆ ಎಂದು ದಿ ಇನ್ಫಿನಿಟಿ ಸ್ಕೂಲ್ ಟ್ರಸ್ಟಿ ಲಕ್ಷ್ಮಿ ಮುಗಳಿ ತಿಳಿಸಿದರು.

ಅಕ್ಕ ಪಡೆಯ ಸುಜಾತಾ ದೇವಿ, ಶೋಭಾ, ಭಾರತಿ, ಶಾಲೆಯ ಪ್ರಾಚಾರ್ಯೆ ಡಾ. ಮೆಲ್ವಿನ್ ಬಾಬಿ ಮರ್ಜೆ, ಉಪ ಪ್ರಾಚಾರ್ಯೆ ಪ್ರಾಪ್ತಿ ನಾಯಕ್, ಶಾಲೆಯ ಬೋಧಕ, ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಹಾಜರಿದ್ದರು.

# ಶಿಕ್ಷಣ ಸಚಿವ ಮಧು ಬಂಗಾರಪ್ಪನವರ ಭೇಟಿಯಾದ ಬೀದರ ಶಿಕ್ಷಣ ಸಂಸ್ಥೆಗಳ ನಿಯೋಗ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಅ.8:ಕರ್ನಾಟಕ ರಾಜ್ಯ ಶಿಕ್ಷಣ ಸಚಿವರಾದ ಮಧು ಬಂಗಾರಪ್ಪನವರಿಗೆ ಬೀದರಿನ ಅನುದಾನಿತ ಶಿಕ್ಷಣ ಸಂಸ್ಥೆಗಳ ಅಧ್ಯಕ್ಷರುಗಳ ನಿಯೋಗ ಭೇಟಿ ನೀಡಿ, ಅನುದಾನಿತ ಶಾಲಾ ಕಾಲೇಜುಗಳಲ್ಲಿ ತೆರವಾದ ಶಿಕ್ಷಕರ ಹುದ್ದೆಗಳ ಭರ್ತಿಗಾಗಿ ಮನವಿ ಮಾಡಿದರು.

ಬೀದರಿನ ಅನುದಾನಿತ ಶಿಕ್ಷಣ ಸಂಸ್ಥೆಗಳ ಅಧ್ಯಕ್ಷರುಗಳ ನಿಯೋಗ,ಬೆಂಗಳೂರಿನ ಶಿಕ್ಷಣ ಸಚಿವರ ಶ್ರೀಅಮ್ಮಾ ನಿವಾಸ ಕಚೇರಿಗೆ ಭೇಟಿ ನೀಡಿ,ಸುಮಾರು ವರ್ಷಗಳಿಂದ ನಿವೃತ್ತಿ, ನಿಧನಗಳಿಂದ ತೆರವಾದ ಶಿಕ್ಷಕರ ಹುದ್ದೆಗಳನ್ನು ತಕ್ಷಣವೇ ಭರ್ತಿಮಾಡಿ, ಬಡ ಮಕ್ಕಳ ಶೈಕ್ಷಣಿಕ ವ್ಯವಸ್ಥೆಗೆ ಅನುಕೂಲ ಮಾಡಿಕೊಡಬೇಕು. ಶಿಕ್ಷಕರ ಕೊರತೆಯಿಂದ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ಫಲಿತಾಂಶದಲ್ಲಿ ತುಂಬಾ ವ್ಯತ್ಯಾಸ ವಾಗುತ್ತಿದೆ. ಕಾರಣ ಆದಷ್ಟು ಬೇಗ ಕಲ್ಯಾಣ ಕರ್ನಾಟಕ ಭಾಗದ ಅನುದಾನಿತ ಶಿಕ್ಷಣ ಸಂಸ್ಥೆಗಳ ಶಾಲಾ ಕಾಲೇಜುಗಳಲ್ಲಿಯ ಶಿಕ್ಷಕರ ಕೊರತೆ ನೀಗಿಸಬೇಕು ಎಂದು ಒತ್ತಾಯಿಸಿದರು.ಮನವಿ ಪತ್ರ ಸ್ವೀಕರಿಸಿ ಮಾತನಾಡಿದ ಶಿಕ್ಷಣ ಸಚಿವರು, ಅಧಿವೇಶನದಲ್ಲಿ ಈ ವಿಷಯ ಮುಖ್ಯಮಂತ್ರಿಗಳ ಜೊತೆಗೆ ಚರ್ಚಿಸಿ ಸೂಕ್ತ ಪರಿಹಾರ ಒದಗಿಸಿಕೊಡಲಾಗುವುದು ಎಂದು ಭರವಸೆ ನೀಡಿದರು.

ನಿಯೋಗದಲ್ಲಿ ಕರ್ನಾಟಕ ಲೇಬರ್ ಶಿಕ್ಷಣ ಸಂಸ್ಥೆಯ ಮುಖ್ಯಸ್ಥೆ ಕ್ರಾಂತಿ ಕಲವಾಡಿಕರ, ಅನುದಾನಿತ ಶಿಕ್ಷಣ ಸಂಸ್ಥೆಯ ಮುಖಂಡರುಗಳಾದ ನಂದಾದೀಪ ಬೋರೊಳೆ, ದಶರಥ ದೊಡ್ಡಿ, ಡಾ. ಕಾಶಿನಾಥ ಚಲವಾ, ತಿಪ್ಪಣ್ಣಾ ಶಿವಪುರೆ, ಡಿ.ವಿ.ಗುರು, ಬಾಬು ಟೈಗರ, ಮಹಾತ್ಮಾಗಾಂಧಿ ಪ್ರೌಢಶಾಲೆ ಕಲವಾಡಿಯ ಮುಖ್ಯಶಿಕ್ಷಕ ಕಿರಣಕುಮಾರ ಭಾಟಸಾಂಗವಿ, ಸುಭಾಷ ಹುಲಸೂರೆ, ಮಲ್ಲಿಕಾರ್ಜುನ ಹಲಮಂಡೆ, ನಿವೃತ್ತ ಮುಖ್ಯಶಿಕ್ಷಕ ಜಯರಾಜ ದಾಬಶೆಟ್ಟಿ ಮತ್ತಿತರರು ಇದ್ದರು.

# ಸರಳ ಸಾಮೂಹಿಕ ವಿವಾಹ: ನೊಂದಣಿಗೆ ಅರ್ಜಿ ಅಹ್ವಾನ



ಬೀದರ. ಅ. 08 : ಖರ್ಗೆ ಶಾರದಾ ಎಜುಕೇಶನ್ ಚಾರಿಟೇಬಲ್ ಟ್ರಸ್ಟ್ ವತಿಯಿಂದ ಸರಳ ಸಾಮೂಹಿಕ ವಿವಾಹ ನಡೆಸಲಾಗುತ್ತಿದ್ದು, ಈ ಯೋಜನೆಯಿಂದ ವಧು–ವರರಿಗೆ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಧನ ಸಹಾಯ ನೀಡಲಾಗುತ್ತದೆ. ಗ್ರಾಮೀಣ ಹಾಗೂ ನಗರದ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಜನ ಸಾಮಾನ್ಯರು ಈ ಯೋಜನೆಯ ಸದುಪಯೋಗ ಪಡೆದುಕೊಳ್ಳಬಹುದಾಗಿದೆ. ಅರ್ಜಿ ಸಲ್ಲಿಸಲು ಈ ತಿಂಗಳ 31 ಕೊನೆಯ ದಿನಾಂಕ ನಿಗದಿಪಡಿಸಲಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಟ್ರಸ್ಟನ ಅಧ್ಯಕ್ಷರಾದ ರಾಚಪ್ಪ ಖರ್ಗೆ ಹಾಗೂ ನಿರ್ದೇಶಕರಾದ ಭೀಮರಾವ ಮಾಲಗತ್ತಿ ದೂರವಾಣಿ ಸಂಖ್ಯೆ:–9449513444, ಭೀಮರಾವ ಮಾಲಗತ್ತಿ ದೂರವಾಣಿ ಸಂಖ್ಯೆ:–8904312900 ಗಳನ್ನು ಸಂಪರ್ಕಿಸಬಹುದು.

# ಅಂತರಾತ್ಮ ಸ್ವಚ್ಛ ಮಾಡಿಕೊಳ್ಳಿ :ಮಹಾಲಿಂಗ ದೇವರು




ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಅ.8: ಶರೀರ ಸ್ವಚ್ಛತೆ ಎಷ್ಟು ಮುಖ್ಯವೋ ಹಾಗೆ ಅಂತರಾತ್ಮ ಸ್ವಚ್ಛ ಮಾಡಿಕೊಳ್ಳಿ ಅವಾಗ ಮಾತ್ರ ನಿಮಗೆ ನಿರ್ಮಲವಾದ ವಾತಾವರಣ ದೊರೆಯುತ್ತದೆ ಎಂದು ಹಿರೇಮಠ ಸಂಸ್ಥೆನ ಮಠದ ಪೂಜ್ಯಶ್ರೀ ಮಹಾಲಿಂಗ ದೇವರು ಹೇಳಿದರು.

ತಾಲೂಕಿನ ಡಿಗ್ಗಿ ಗ್ರಾಮದಲ್ಲಿ ಹಮ್ಮಿಕೊಂಡ ಪ್ರವಚನ ಕಾರ್ಯಕ್ರಮದಲ್ಲಿ ಗುರುವಾರ ಉದ್ಘಾಟನೆ ಮಾಡಿ ಅವರು ಮಾತನಾಡಿದರು.

ಮಾಡೋ ಒಳ್ಳೆ ಕಾರ್ಯ ಆಚರಣೆ, ಸಾಮಾಜಿಕ ಸೇವೆಯಿಂದ ನಮ್ಮ ಮನಸು ಮತ್ತು ಅಂತರಾತ್ಮ ಸ್ವಚ್ಛವಾಗಿ ಆನಂದಮಯಾ ಬದುಕು ನಮ್ಮ ದಾಗುತ್ತದೆ. ಅದರ ಜೊತೆಯಲ್ಲಿ ನಾವು ಒಳ್ಳೆಯವರ ಸಂಘ ಬೆರೆತು ಒಳ್ಳೆಯತನ ಬೆಳೆಸಿ ಕೊಳ್ಳುವದು ಬಹಳ ಮುಖ್ಯ ಎಂದು ಹೇಳಿದರು.ಈ ಸಂದರ್ಭದಲ್ಲಿ ಮಡಿವಾಳೇಶ್ವರ ದೇವಾಲಯ ಟ್ರಸ್ಟ್‌ನ ಅಧ್ಯಕ್ಷ ದೇವೇಂದ್ರ ಪಾಟೀಲ, ಕಾರ್ಯದರ್ಶಿ ಮಡಿವಾಳಪ್ಪ ಮುರ್ಕೆ, ಗುರುಬಸಪ್ಪ ಬಿರಾದಾರ, ಡಾ. ದಂಡವತೆ, ಸಂಗಮನಾಥ ಬಿರಾದಾರ, ನಾಗಯ್ಯ ಸ್ವಾಮಿ, ಬಾಲಾಜಿ ಬಿರಾದಾರ, ಮಹೇಶ ಸ್ವಾಮಿ, ಸಂಗಮೇಶ ಬನವಾಸೆ, ಪರಮೇಶ ರಾಂಪುರೆ, ನಾಗರಾಜ ಸ್ವಾಮಿ ಸೇರಿದಂತೆ ಅನೇಕರು ಇದ್ದರು.

# ನಾಳೆ ಸಿದ್ಧಾರೂಢರ ಪುಣ್ಯಾರಾಧನೆ



ಬೀದರ. ಅ. 08 : ಇಲ್ಲಿಯ ಸಿದ್ಧಾರೂಢ ಮಠದಲ್ಲಿ ಆಗಸ್ಟ್ 10 ರಂದು ಸಿದ್ಧಾರೂಢರ 96ನೇ ಪುಣ್ಯಾರಾಧನೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಮಠದ ಪೀಠಾಧಿಪತಿ ಡಾ. ಶಿವಕುಮಾರ ಸ್ವಾಮೀಜಿ ಅವರ ಸಾನಿಧ್ಯದಲ್ಲಿ ಬೆಳಿಗ್ಗೆ 11ಕ್ಕೆ ಭಜನೆ, ಮಧ್ಯಾಹ್ನ 12ಕ್ಕೆ ಪ್ರವಚನ, ನಂತರ ಮಹಾ ಪ್ರಸಾದ ವಿತರಣೆ ನಡೆಯಲಿದೆ.

ಕಾರ್ಯಕ್ರಮದಲ್ಲಿ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಸದ್ಗುರು ಕೃಪೆಗೆ ಪಾತ್ರರಾಗಬೇಕು ಎಂದು ಮಠದ ಆಡಳಿತಾಧಿಕಾರಿ

ಡಾ.ಹಾವಗಿರಾವ್ ಮೈಲಾರೆ ಮನವಿ ಮಾಡಿದ್ದಾರೆ.

# ರಾಷ್ಟ್ರೀಯ ಲೋಕ ಆದಾಲತ್‌ನ ಪೂರ್ವಭಾವಿ ಸಭೆ

ಬೀದರ,ಆ.08:ಗೌರವಾನ್ವಿತ ಕರ್ನಾಟ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಬೆಂಗಳೂರು ಅವರ ನಿರ್ದೇಶನದಂತೆ ದಿನಾಂಕ: 13–09–2025 ರಂದು ರಾಷ್ಟ್ರೀಯ ಲೋಕ ಆದಾಲತನ್ನು ರಾಷ್ಟ್ರಾದ್ಯಾಂತ ಹಮ್ಮಿಕೊಳ್ಳಲು ಸೂಚಿಸಿರುತ್ತಾರೆ. ಪ್ರಯುಕ್ತ ರಾಷ್ಟ್ರೀಯ ಲೋಕ ಆದಾಲತನಲ್ಲಿ ಹೆಚ್ಚಿನ ಪ್ರಕರಣಗಳನ್ನು ಇತ್ಯರ್ಥಗೊಳಿಸಲು ಸಹಕರಿಸುವಂತೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಬೀದರನ ಸಭಾಂಗಣದಲ್ಲಿ ವಿವಿಧ ಇಲಾಖೆಯ ಮುಖ್ಯಸ್ಥರೊಂದಿಗೆ ದಿನಾಂಕ: 07–08–2025, 11–08–2025, 12–08–2025, 13–08–2025, 14–08–2025, 18–08–2025, 19–08–2025 ಹಾಗೂ 20–08–2025 ರ ದಿನಾಂಕಗಳಂದು ಗೌರವಾನ್ವಿತ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಅಧ್ಯಕ್ಷರು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಬೀದರ ಇವರ ಘನ ಅಧ್ಯಕ್ಷತೆಯಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸಭಾಂಗಣದಲ್ಲಿ ರಾಷ್ಟ್ರೀಯ ಲೋಕ ಅದಾಲತನ ಪೂರ್ವಭಾವಿ ಸಭೆಯನ್ನು ಕರೆಯಲಾಗಿರುತ್ತದೆ.

ಸದರಿ ದಿನಾಂಕಗಳಂದು ನಿಗಧಿತ ಸಮಯಕ್ಕೆ ಸಂಬಂಧಿಸಿದ ಇಲಾಖೆಯ ಮುಖ್ಯಸ್ಥರು ಸಭೆಗೆ ತಪ್ಪದೇ ಭಾಗವಹಿಸಿ ಸಲಹೆ ಸೂಚನೆ ನೀಡಿ ಸಹಕರಿಸಲು ಗೌರವಾನ್ವಿತ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಅಧ್ಯಕ್ಷರು ಜಿಲ್ಲಾ ಕಾನುನು ಸೇವೆಗಳ ಪ್ರಾಧಿಕಾರ ಬೀದರ ಇವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# "ಮನೆ ಮನೆಗೂ ಪೊಲೀಸ್" ಕೆಂಭಾವಿ ಪೊಲೀಸ್ ಠಾಣೆಯ ಸಾರ್ವಜನಿಕ ಸಂಪರ್ಕ ಅಭಿಯಾನ




ಮಲ್ಲಮ್ಮ ನುಡಿ ವಾರ್ತೆ

ಸುರಪುರ : ತಾಲೂಕಿನ ಕೆಂಭಾವಿ ಪಟ್ಟಣದಲ್ಲಿ ಸಾರ್ವಜನಿಕರೊಂದಿಗೆ ನೇರ ಸಂಪರ್ಕ ಸಾಧಿಸಲು ಮತ್ತು ಶಾಂತಿಯುತ ಸಮಾಜ ನಿರ್ಮಾಣಕ್ಕೆ ಸಹಕಾರ ನೀಡುವ ಉದ್ದೇಶದಿಂದ, ಕೆಂಭಾವಿ ಪೊಲೀಸ್ ಠಾಣೆಯ ವತಿಯಿಂದ "ಮನೆ ಮನೆಗೂ ಪೊಲೀಸ್" ಎಂಬ ವಿಶೇಷ ಅಭಿಯಾನಕ್ಕೆ ಚಾಲನೆ ನೀಡಲಾಗಿದೆ.

ಈ ಅಭಿಯಾನದ ಅಂಗವಾಗಿ, ಪಿಎಸ್‌ಐ ಹನುಮಂತರಾಯ ಸಿದ್ದಾಪುರ ಅವರು ಮಾತನಾಡಿ, “ಸಾರ್ವಜನಿಕರಿಗೆ ಯಾವುದೇ ರೀತಿಯ ತೊಂದರೆಗಳು ಅಥವಾ ಸಮಸ್ಯೆಗಳಿದ್ದರೆ, ನೇರವಾಗಿ ಪೊಲೀಸ್ ಠಾಣೆಯನ್ನು ಸಂಪರ್ಕಿಸಬಹುದು,” ಎಂದು ತಿಳಿಸಿದ್ದಾರೆ.

ಸಿಬ್ಬಂದಿಗಳಾದ ಮಲ್ಲಿಕಾರ್ಜುನ್ ಬರಣಿ, ಅಮರೇಶ್ ಸಿದ್ದರಾಮಪ್ಪ ಮತ್ತು ಇತರ ಪೊಲೀಸ್ ಸಿಬ್ಬಂದಿಗಳೊಂದಿಗೆ ಸೇರಿ, ಅವರು ಕೆಂಭಾವಿ ಪಟ್ಟಣದಲ್ಲಿ ಮನೆ ಮನೆಗೆ ಭೇಟಿ ನೀಡಿ, ಜನರೊಂದಿಗೆ ನೇರ ಸಂವಾದ ನಡೆಸಿದರು.

ಅವರು ಸಾರ್ವಜನಿಕರಿಗೆ ಪೊಲೀಸ್ ಇಲಾಖೆಯ ಸೇವೆಗಳ ಕುರಿತು ಮಾಹಿತಿಯನ್ನು ನೀಡಿದ್ದು, ದೂರುಗಳು, ಸಮಸ್ಯೆಗಳ ಬಗ್ಗೆ ನೇರವಾಗಿ ಠಾಣೆಯೊಂದಿಗೇ ಸಂಪರ್ಕಿಸಬೇಕು ಎಂದು ತಿಳಿಸಿದ್ದಾರೆ.

ಅದೇ ರೀತಿ, ತುರ್ತು ಸಂದರ್ಭಗಳಲ್ಲಿ "112" ಎಂಬ ತುರ್ತು ಸಹಾಯ ಸಂಖ್ಯೆಗೆ ಕರೆ ಮಾಡಬಹುದೆಂಬುದನ್ನೂ ಅವರು ಜಾಗೃತಪಡಿಸಿದರು.

# ಆಧುನಿಕ ಕುರಿ ಮೇಕೆ ಸಾಕಾಣಿಕೆ ತರಬೇತಿ: ಹೆಸರು ನೋಂದಣಿಗೆ ಸೂಚನೆ

ಬೀದರ,ಆ.08:ಪಶುಪಾಲನಾ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರ ಬೀದರ ಕೇಂದ್ರ ಗ್ರಂಥಾಲಯ ಹಿಂಭಾಗ ಜನವಾಡಾ ರಸ್ತೆ, ಬೀದರಿನಲ್ಲಿ ಆಗಸ್ಟ್.12 ರಿಂದ 13 ರವರೆಗೆ ಆಧುನಿಕ ಕುರಿ ಮತ್ತು ಮೇಕೆ ಸಾಗಾಣಿಕೆ ತರಬೇತಿ ಹಮ್ಮಿಕೊಳ್ಳಲಾಗಿದೆ ಎಂದು ಬೀದರ ಪಶುಪಾಲನಾ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರದ ಮುಖ್ಯ ಪಶುವೈದ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.ತರಬೇತಿಗೆ ಹಾಜರಾಗುವ ಸುಯದಲ್ಲಿ ಆಧಾರಕಾರ್ಡ್ ಪ್ರತಿ ಹಾಗೂ ಇತ್ತೀಚಿನ ಎರಡು ಭಾವ ಚಿತ್ರ ಮತ್ತು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಾಗಿದ್ದಲ್ಲಿ ಜಾತಿ ಪ್ರಮಾಣ ಪತ್ರ ಕಡ್ಡಾಯವಾಗಿರುತ್ತದೆ. ಆಸಕ್ತರು ಮುಂಚಿತವಾಗಿ ವಾಟ್ಸ್‌ ಮೂಲಕ ತಮ್ಮ ಹೆಸರು ಮತ್ತು ಮೊಬೈಲ ಸಂಖ್ಯೆಯೊಂದಿಗೆ ನೋಂದಾಯಿಸಿಕೊಳ್ಳಬೇಕು. 70 ರೈತರಿಗೆ ತರಬೇತಿಗೆ ಅವಕಾಶವಿದ್ದು, ಮೊದಲು ಬಂದವರಿಗೆ ಆದ್ಯತೆ ನೀಡಲಾಗುತ್ತದೆ. ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ: 9902561957 ಗೆ ಸಂಪರ್ಕಿಸಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

# ಮಾಜಿ ಮುಖ್ಯಮಂತ್ರಿ ಡಿ.ದೇವರಾಜ್ ಅರಸು ಜನ್ಮ ದಿನಾಚರಣೆ ಅರ್ಥಪೂರ್ಣವಾಗಿ ಆಚರಣೆಗೆ ನಿರ್ಧಾರ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಆ:8:ಜಿಲ್ಲಾಡಳಿತದವತಿಯಿಂದ ಜಿಲ್ಲೆಯಲ್ಲಿ ಇದೇ ಆ.20ರಂದು ಮಾಜಿ ಮುಖ್ಯಮಂತ್ರಿ ದಿ. ಡಿ.ದೇವರಾಜ್ ಅರಸು ಅವರ 110ನೇ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಲು ನಿರ್ಧರಿಸಲಾಗಿದೆ.

ಅಪರ ಜಿಲ್ಲಾಧಿಕಾರಿ ರಮೇಶ ಕೋಲಾರ್ ಅವರ ಅಧ್ಯಕ್ಷತೆಯಲ್ಲಿ ಮಾಜಿ ಮುಖ್ಯಮಂತ್ರಿ ದಿ.ಡಿ ದೇವರಾಜ್ ಅರಸು ಅವರ

ಜಯಂತಿ ಆಚರಣೆ ಕುರಿತು ನಡೆದ ಪೂರ್ವಭಾವಿ ಸಿದ್ಧತಾ ಸಭೆಯಲ್ಲಿ ಈ ನಿರ್ಣಯ ಕೈಗೊಳ್ಳಲಾಯಿತು.

ಇದೇ ಆಗಸ್ಟ್ 20 ರ ಬೆಳಿಗ್ಗೆ 11-00ಗಂಟೆಗೆ ದಿ.ಡಿ.ದೇವರಾಜ್ ಅರಸು ಅವರ ಈ ಜಯಂತಿಯನ್ನು ನಗರದ ಪದವಿ ಕಾಲೇಜು ಸಭಾಂಗಣದಲ್ಲಿ ಆಚರಿಸಲು ನಿರ್ಧರಿಸಲಾಗಿದ್ದು,ಅವಶ್ಯಕ ಸಿದ್ಧತೆ ಮಾಡಿಕೊಳ್ಳಲು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಅಂದು ವೇದಿಕೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು,ಶಿಷ್ಟಾಚಾರದಂತೆ ಅತಿಥಿ ಗಣ್ಯರನ್ನು ಆಹ್ವಾನಿಸಲು, ವೇದಿಕೆ, ಆಹ್ವಾನ ಪತ್ರಿಕೆ, ವೇದಿಕೆ ಸಿದ್ದತೆ ಮಾಡಿಕೊಳ್ಳುವಂತೆ ಹಾಗೂ ನುರಿತ ಉಪನ್ಯಾಸಕರನ್ನು ಆಹ್ವಾನಿಸಲು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾ, ಗ್ರಾಮ ಪಂಚಾಯತ್, ತಾಲೂಕ ಮಟ್ಟ ಹಾಗೂ ಶಾಲಾ,ಕಾಲೇಜು, ಕಚೇರಿಯಲ್ಲಿ ಜಯಂತಿ ಆಚರಣೆಗೆ ಕ್ರಮ ಕೈಗೊಳ್ಳಲು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಕಾರ್ಯಕ್ರಮವು ಶಿಸ್ತುಬದ್ಧವಾಗಿ ನಡೆಯಬೇಕೆಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ವಿವಿಧ ಇಲಾಖೆಯ ಅಧಿಕಾರಿ, ಸಿಬ್ಬಂದಿಗಳು ಕಡ್ಡಾಯವಾಗಿ ಕಾರ್ಯಕ್ರಮದಲ್ಲಿ ಹಾಜರಿರಬೇಕು. ಜಯಂತಿಯಂದು ಸೂಕ್ತ ಪೋಲಿಸ್ ಬಂದೋಬಸ್ತ್,ಮಾಡಲು ಅವರು ಸೂಚಿಸಿದರು.

ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಸದಾಶಿವ ನಾರಾಯಣಕರ ಸ್ವಾಗತಿಸಿದರು. ವ್ಯವಸ್ಥಾಪಕರಾದ ಸಾಬಯ್ಯ ವಂದಿಸಿದರು.

ಸಮಾಜದ ಮುಖಂಡರಾದ ಅಪ್ಪಣ್ಣ ಚಿನ್ನಾಕಾರ್,ಮೌಲಾಲಿ ಅನಪುರ್, ವಿಶ್ವನಾಥ್ ನೀಲಹಳ್ಳಿ, ಮರೆಪ್ಪ ಚಟ್ಟರ್ಕರ್, ನಾಗರತ್ನ ಅನಪುರ,ತಾಯಪ್ಪಯಾದವ್,ಸೈದಪ್ಪ ಕೂಲೂರು,ಬಾಲರಾಜ್ ಖಾನಪುರ, ಚನ್ನಬಸಪ್ಪಗುರಸಣಗಿ,ಬಸವರಾಜ ಹೊಸಮನಿ,ಹೊನ್ನಪ್ಪನಾಟೇಕರ್, ಹೊನ್ನಪ್ಪಮುಸ್ತುರು,ಭೀಮರಾಯ ಹಳಿಮನಿ,ಮಡಿವಾಳಪ್ಪಬಿಜಾಸ್ಪುರ್, ಮಲ್ಲಣ್ಣ ವಡಗೇರ್,

ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

# ಪವರ್ ಸ್ಟಾರ್ ರಾಯಚೂರಿನಲ್ಲಿ ಸೇನಾ ನೇಮಕಾತಿಯ ಅಗ್ನಿಪರೀಕ್ಷೆ: ಇಂದಿನಿಂದ ಆರಂಭ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಆಗಸ್ಟ್ 08: ಅಗ್ನಿವೀರ್ ಸೇನಾ ನೇಮಕಾತಿ ರ್‍ಯಾಲಿಯು ಥರ್ಮಲ್ ಪಾವರ್ ಸ್ಟೇಷನ್, ಶಕ್ತಿಸ್ಥಾವರ ಖ್ಯಾತಿಯ ರಾಯಚೂರಿನ ಕೃಷಿ ವಿಜ್ಞಾನಿಗಳ ವಿಶ್ವವಿದ್ಯಾಲಯದ ಆವರಣದಲ್ಲಿ ಆಗಸ್ಟ್08ರಿಂದ ಆರಂಭವಾಗಲಿದೆ.

ಆಗಸ್ಟ್ 8 ರಿಂದ ಆಗಸ್ಟ್ 22ರವರೆಗೆ ಹಾಗೂ ಆಗಸ್ಟ್ 25ರಂದು ಶಾರಿರೀಕ ದೇಹದಾರ್ಢ್ಯ ಪರೀಕ್ಷೆ ಮತ್ತು ಆಗಸ್ಟ್ 26ರಂದು ವೈದ್ಯಕೀಯ ಪರೀಕ್ಷೆ ನಡೆಯಲಿದ್ದು, ಪ್ರವೇಶ ಪತ್ರದಲ್ಲಿ ನೀಡಲಾದ ದಿನಾಂಕಗಳಂತೆ ರಾಜ್ಯದ ಬೇರೆ ಬೇರೆ ಜಿಲ್ಲೆಗಳ ಅಭ್ಯರ್ಥಿಗಳು ರಾಯಚೂರಿನಲ್ಲಿ ನಡೆಯುವ ಈ ಸೇನಾ ನೇಮಕಾತಿ ರ್‍ಯಾಲಿಗೆ ವರದಿ ಮಾಡಿಕೊಳ್ಳಲಿದ್ದಾರೆ.

ಸೇನೆಯಲ್ಲಿ ಎಲ್ಲ ವಿಭಾಗಗಳ ಆಯ್ಕೆಯಾಗಿ ನಡೆಯುವ ಸೇನಾ ನೇಮಕಾತಿ ರ್‍ಯಾಲಿಗೆ ರಾಯಚೂರು ನಗರದಲ್ಲಿನ ಕೃಷಿ ವಿಜ್ಞಾನಗಳ ವಿಶ್ವ ವಿದ್ಯಾಲಯದ ವಿಶಾಲ ಆವರಣವು ಸಿದ್ಧಗೊಂಡಿದ್ದು, ಅಭ್ಯರ್ಥಿಗಳ ಆಯ್ಕೆ ಪ್ರಕ್ರಿಯೆ ಹಿನ್ನೆಲೆಯ ಎಲ್ಲ ಕಾರ್ಯಚಟುವಟಿಕೆಗಳು ಆಗಸ್ಟ್ 8 ರಿಂದ ಆರಂಭವಾಗಿ ಆಗಸ್ಟ್ 26ರವರೆಗೆ ನಡೆಯಲಿವೆ.

ಆಯ್ಕೆಪ್ರಕ್ರಿಯೆಯಲ್ಲಿಭಾಗಿಯಾಗುವ ಅಭ್ಯರ್ಥಿಗಳಿಗೆ ಅನುಕೂಲವಾಗಲು ವಿಶ್ವವಿದ್ಯಾಲಯದ ಆವರಣದಲ್ಲಿ ಪೆಂಡಾಲ್ ಹಾಕಿ ನೆರಳಿನ ವ್ಯವಸ್ಥೆ ಮಾಡಲಾಗಿದೆ. ಕುಡಿಯುವ ನೀರಿನ ಪೂರೈಕೆ, ಮೊಬೈಲ್ ಟಾಯ್ಲೆಟ್ ಸೇರಿದಂತೆ ನಾನಾ ಸೌಕರ್ಯಗಳನ್ನು ಕಲ್ಪಿಸಲಾಗಿದೆ. ಬೇರೆ ಬೇರೆ ಜಿಲ್ಲೆಗಳಿಂದ ಭಾಗಿಯಾಗಲು ವಿವಿಧೆಡೆ ವಸತಿ ಸೌಕರ್ಯ ಮತ್ತು ಸಾರಿಗೆ ವ್ಯವಸ್ಥೆ ಸೇರಿದಂತೆ ನಾನಾ ಸೌಕರ್ಯ ಕಲ್ಪಿಸಲಾಗಿದೆ.

ಈ ಸೇನಾ ನೇಮಕಾತಿ ರ್‍ಯಾಲಿ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರು ವಿವಿಧ ಇಲಾಖೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿಯನ್ನೊಳಗೊಂಡು ಸಮಿತಿಗಳನ್ನು ರಚಿಸಿ ಸುವ್ಯವಸ್ಥೆಗೆ ಕ್ರಮ ವಹಿಸಿದ್ದಾರೆ. ಸಹಾಯಕ ಆಯುಕ್ತರಾದ ಗಜಾನನ ಬಾಳೆ ಅವರು ಮೇಲುಸ್ತುವಾರಿ ವಹಿಸಿದ್ದು, ತಹಸೀಲ್ದಾರರಾದ ಸುರೇಶ ವರ್ಮಾ, ಅಧಿಕಾರಿಗಳಾದ ಕೃಷ್ಣ ಶಾವಂತಗೇರಿ ಸೇರಿದಂತೆ ಇನ್ನಿತರ ಇಲಾಖೆಗಳ ಅಧಿಕಾರಿಗಳು ವಿವಿಧ ಸಮಿತಿಗಳ ನೇತೃತ್ವ ವಹಿಸಿದ್ದಾರೆ.

ಅಗ್ನಿವೀರ್ ಸೇನಾ ನೇಮಕಾತಿ ರ್‍ಯಾಲಿಯ ಯಶಸ್ಸಿಗೆ ಸಂಬಂಧಿಸಿದಂತೆ, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಹಾಗೂ ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಅವರು ಹತ್ತಾರು ಸಭೆಗಳನ್ನು ನಡೆಸಿ ಆಯಾ ಸಮಿತಿಗಳಿಗೆ ನಾನಾ ಕೆಲಸ ಕಾರ್ಯಗಳನ್ನು ಹಂಚಿಕೆ ಮಾಡಿದಂತೆ ಆಯಾ ಸಮಿತಿಗಳ ಅಧ್ಯಕ್ಷರು ಹಾಗೂ ಸದಸ್ಯ ಕಾರ್ಯದರ್ಶಿಗಳು ಮತ್ತು ಸದಸ್ಯರಾದ ವಿವಿಧ ಇಲಾಖೆಯ ಅಧಿಕಾರಿಗಳು ಆಯಾ ಇಲಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿಗೆ ಕಚೇರಿ ಅದೇಶದ ಮೂಲಕ ನಾನಾ ಕೆಲಸ ಕಾರ್ಯಗಳ ಹಂಚಿಕೆ ಮಾಡಿ ಕಾರ್ಯಪ್ರವೃತ್ತರಾಗಿದ್ದಾರೆ.

ಸೇನಾ ನೇಮಕಾತಿ ರ್‍ಯಾಲಿ ಹಿನ್ನೆಲೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಪುಟ್ಟಮಾದಯ್ಯ ಅವರು ಜಿಲ್ಲಾ ಪೊಲೀಸ್ ಇಲಾಖೆಯಿಂದ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಆವರಣದಲ್ಲಿ ಬ್ಯಾರಿಕೇಡ್ ಅಳವಡಿಸಿ, ಅಗತ್ಯ ಪ್ರಮಾಣದಲ್ಲಿ ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿಯನ್ನು ನಿಯೋಜಿಸಿ ಸೂಕ್ತ ಪೊಲೀಸ್ ಭದ್ರತೆಗೆ ಕ್ರಮವಹಿಸಿದ್ದಾರೆ.

ಸೇನಾ ಅಧಿಕಾರಿಗಳು ಭಾಗಿ: ಬೆಳಗಾವಿಯ ಸೇನಾ ನೇಮಕಾತಿ ಕಚೇರಿಯಿಂದ ಈ ಸೇನ ನೇಮಕಾತಿ ರ್‍ಯಾಲಿ ಪ್ರಕ್ರಿಯೆ ನಡೆಯಲಿದ್ದು, ಸೇನಾ ಅಧಿಕಾರಿ ಎಆರ್‌ಓ ಮನೋಜ್ ಸೇರಿದಂತೆ ಅನೇಕ ಅಧಿಕಾರಿಗಳು ಹಲವಾರು ದಿನಗಳಿಂದ ರಾಯಚೂರ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಆವರಣದಲ್ಲಿದ್ದು ಸೇನಾ ನೇಮಕಾತಿ ರ್‍ಯಾಲಿಯ ನಾನಾ ಪ್ರಕ್ರಿಯೆಗಳನ್ನು ನಡೆಸಿ ಸಿದ್ಧತೆ ಮಾಡಿದ್ದಾರೆ.

2017ರಲ್ಲಿ ನಡೆದಿತ್ತು: ಮಹತ್ವದ ಸೇನಾ ಭರ್ತಿ ರ್‍ಯಾಲಿಯು ಈ ಹಿಂದೆ ರಾಯಚೂರ ಜಿಲ್ಲೆಯಲ್ಲಿ 2017ರಲ್ಲಿ 11 ದಿನಗಳ ಕಾಲ ನಡೆದಿತ್ತು. ಆ ವೇಳೆ ರಾಯಚೂರ ಜಿಲ್ಲೆಯ ಸಾರ್ವಜನಿಕರು ದವಸ ಧಾನ್ಯ ನೀಡಿ ಸಹಕರಿಸಿದ್ದು ನಮಗೆ ಈಗಲೂ ನೆನಪಿದೆ. ಅದಾದ ಬಳಿಕ ಇದೀಗ ಮತ್ತೆ ನಮ್ಮ ಜಿಲ್ಲೆಯಲ್ಲಿ ಸೇನಾ ನೇಮಕಾತಿ ರ್‍ಯಾಲಿ ನಡೆಯುತ್ತಿರುವುದು ಹೆಮ್ಮೆಯ ಸಂಗತಿ. ಈ ರ್‍ಯಾಲಿಗೆ ಬರುವ ಅಭ್ಯರ್ಥಿಗಳಿಗೆ ಊಟ, ವಸತಿಗೆ ಸಹಾಯ ಮಾಡೋಣ. ಎಲ್ಲ ಕಾರ್ಯಗಳಿಗೆ ಸಹಕಾರ ನೀಡಿ ರ್‍ಯಾಲಿಯನ್ನು ಯಶಗೊಳಿಸೋಣ ಎನ್ನುತ್ತಾರೆ ಮಾಜಿ ಸೈನಿಕರಾದ ಚೆನ್ನಾ ರೆಡ್ಡಿ.

ರಾಯಚೂರಿನತ್ತ ಬರುತ್ತಿರುವ ಅಭ್ಯರ್ಥಿಗಳು: ರಾಯಚೂರ ಸೇರಿದಂತೆ ಬೆಳಗಾವಿ, ಬೀದರ, ಕಲಬುರಗಿ, ಕೊಪ್ಪಳ ಮತ್ತು ಯಾದಗಿರಿ ಜಿಲ್ಲೆಗಳಿಂದ ಪ್ರಥಮ ಹಂತದಲ್ಲಿ ಆಯ್ಕೆಯಾದ ಅಂ-ದಾಜು 15,000 ಅಭ್ಯರ್ಥಿಗಳು ಈ ಸೇನಾ ನೇಮಕಾತಿ ರ್‍ಯಾಲಿಯಲ್ಲಿ ಭಾಗವಹಿಸುತ್ತಿದ್ದು, ಸೇನೆ ಸೇರಬೇಕು, ನಾಡಸೇವೆ ಮಾಡಬೇಕು ಎನ್ನುವ ಕನಸು ಹೊತ್ತ ಯುವ ಪಡೆ-ಯು ರಾಯಚೂರ ಸಿಟಿಯತ್ತ ತಂಡೋಪತಂಡವಾಗಿ ಆಗಮಿಸುವ ದೃಶ್ಯಗಳು ಕಾಣಿಸುತ್ತಿವೆ.

ಟಿಕೆಟ್ ಪ್ರಯಾಣ ದರ ನಿಗದಿ: ಆಗಸ್ಟ್ 8ರಿಂದ ಆಗಸ್ಟ್ 26ರವರೆಗೆ ವಿವಿಧ ಜಿಲ್ಲೆಗಳಿಂದ ಆಗಮಿಸುವ ಸೇನಾ ರ್‍ಯಾಲಿಯ ಅಭ್ಯರ್ಥಿಗಳಿಗೆ ಅನುಕೂಲವಾಗಲು ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯು ಹೆಚ್ಚುವರಿ ಸಾರಿಗೆ ಕಾರ್ಯಚರಣೆಗೆ ಕ್ರಮ ವಹಿಸಿದೆ. ಜೊತೆಗೆ ಟಿಕೆಟ್ ಪ್ರಯಾಣ ದರವನ್ನು ಸಹ ಸಾರಿಗೆ ಇಲಾಖೆಯು ನಿಗದಿಪಡಿಸಿದೆ. ವಾಲ್ಮೀಕಿ ಭವನ ರಾಜಮಾತಾ ದೇವಸ್ಥಾನ, ಬಂಜಾರ ಭವನ ಯರಗೇರಾ ರಸ್ತೆ, ಸಿದ್ರಾಂಪುರದ ಡಿಗ್ರಿ ಕಾಲೇಜ್ ನಿಂದ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಆವರಣಕ್ಕೆ ತೆರಳಲು ತಲಾ 20 ರೂ. ಟಿಕೆಟ್ ದರ ಹಾಗೂ ಗಾಂಧಿ ವೃತ್ತದ ಸಂತೋಷ ಹಬ್, ರೈಲ್ವೆ ನಿಲ್ದಾಣ ಮತ್ತು ರಾಯಚೂರ ಕೇಂದ್ರ ಬಸ್ ನಿಲ್ದಾಣದಿಂದ ಲಿಂಗಸೂರ ರಸ್ತೆಯಲ್ಲಿನ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯಕ್ಕೆ ತೆರಳಲು ತಲಾ 15 ರೂ. ಟಿಕೆಟ್ ದರ ನಿಗದಿಪಡಿಸಲಾಗಿದೆ ಎಂದು ಕಲ್ಯಾಣ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಅಧಿಕಾರಿಗಳು ತಿಳಿಸಿದ್ದಾರೆ.

ಜಿಲ್ಲಾಧಿಕಾರಿಗಳ ಪ್ರತಿಕ್ರಿಯೆ: ಸೇನೆಯಲ್ಲಿ ಎಲ್ಲ ವಿಭಾಗಗಳ ಆಯ್ಕೆಯಾಗಿ ಸೇನಾ ನೇಮಕಾತಿ ರ್‍ಯಾಲಿಯನ್ನು ನಡೆಸಲಾಗುತ್ತದೆ. ಈ ಸೇನಾ ಭರ್ತಿಯು ರಾಯಚೂರು ಜಿಲ್ಲೆಯಲ್ಲಿ ನಡೆಯುತ್ತಿರುವುದು ವಿಶೇಷ. ಈ ರ್‍ಯಾಲಿಯಲ್ಲಿ ಬೇರೆ ಬೇರೆ ಜಿಲ್ಲೆಗಳ ಅಭ್ಯರ್ಥಿಗಳು ಭಾಗಿಯಾಗಲಿದ್ದು, ರ್‍ಯಾಲಿಯು ಶಿಸ್ತಿನಿಂದ ನಡೆದಲ್ಲಿ ನಮ್ಮ ಜಿಲ್ಲೆಗೆ ಹೆಸರು ಬರಲಿದೆ. ರಾಯಚೂರ ಜಿಲ್ಲೆಯ ಸಾರ್ವಜನಿಕರು ಈ ಸೇನಾ ನೇಮಕಾತಿ ರ್‍ಯಾಲಿಗೆ ಸಹಕರಿಸಬೇಕು. ಈ ಭಾಗದ ವಿದ್ಯಾರ್ಥಿ-ಯುವಜನರು ಈ ರ್‍ಯಾಲಿಯಿಂದಾಗಿ ಸೇನೆ ಸೇರುವ ಸ್ಫೂರ್ತಿ ಹೊಂದಬೇಕು.

**- ಕೆ ನಿತೀಶ್,**
**ಜಿಲ್ಲಾಧಿಕಾರಿಗಳು,**
**ರಾಯಚೂರು ಜಿಲ್ಲೆ,**
**ರಾಯಚೂರು**

# ಆ.12 ರಂದು ಗ್ರಾಹಕರ ಸಂವಾದ ಸಭೆಗೆ ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಆಗಸ್ಟ್ 08- ಕಲಬುರಗಿ ವೃತ್ತದ ವ್ಯಾಪ್ತಿಯಲ್ಲಿ ಬರುವ ಯಾದಗಿರಿ ಮತ್ತು ಸುರಪುರ ವಿಭಾಗದ ಎಲ್ಲಾ ಇಹೆಚ್‌ಟಿ, ಹೆಚ್‌ಟಿ ಗ್ರಾಹಕರ ಸಂವಾದ ಸಭೆಯನ್ನು ಆಯೋಜಿಸಲಾಗಿದೆ ಎಂದು ಯಾದಗಿರಿ ಕಾರ್ಯ ಮತ್ತು ಪಾಲನಾ ವಿಭಾಗ ಗುಲಬರ್ಗಾ ವಿದ್ಯುತ್ ಸರಬರಾಜು ಕಂಪನಿ ನಿಯಮಿತ ಕಾರ್ಯನಿರ್ವಾಹಕ ಅಭಿಯಂತರರು(ವಿ)ರಾಘವೇಂದ್ರ ಅವರು ತಿಳಿಸಿದ್ದಾರೆ.

ಗ್ರಾಹಕ ಸಂವಾದ ಸಭೆ 2025ರ ಆಗಸ್ಟ್ 12 ರಂದು ಬೆಳಿಗ್ಗೆ 11 ಗಂಟೆಗೆ ಯಾದಗಿರಿ ಜೆಸ್ಕಾಂ ಕಾರ್ಯ ಮತ್ತು ಪಾಲನಾ ವಿಭಾಗ ಸಭಾಂಗಣದಲ್ಲಿ ಕಲಬುರಗಿ ಜೆಸ್ಕಾಂ ಕಾರ್ಯ ಮತ್ತು ಪಾಲನಾ ವೃತ್ತ ಅಧೀಕ್ಷಕ ಅಭಿಯಂತರರು (ವಿ) ಅಧ್ಯಕ್ಷತೆಯಲ್ಲಿ ನಡೆಯಲಿದೆ. ಅಂದು ಯಾದಗಿರಿ ಜಿಲ್ಲೆಯ ಎಲ್ಲಾ ಇಹೆಚ್‌ಟಿ, ಹೆಚ್.ಟಿ ಗ್ರಾಹಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು, ತಮ್ಮ ವಿದ್ಯುತ್ ಸಂಬಂಧಿಸಿದ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಬೇಕು, ಗುಲಬರ್ಗಾ ವಿದ್ಯುಚ್ಛಕ್ತಿ ಸರಬರಾಜು ಕಂಪನಿಯ ಮೂಲಕ ವಿನಂತಿಸಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರೈತ ದ್ರೋಹಿ ಕಾಂಗ್ರೆಸ್ ಸರ್ಕಾರದ ವಿರುದ್ಧ ಬಸವರಾಜು ವಾಗ್ದಾಳಿ.

ಮಲ್ಲಮ್ಮ ನುಡಿ ವಾರ್ತೆ

ಶಹಾಪುರ ನಗರದಲ್ಲಿ ಬಿ ಜೆ ಪಿ ಜಿಲ್ಲಾಧ್ಯಕ್ಷರಾದ ಬಸವರಾಜ ವಿಭೂತಿಹಳ್ಳಿ ಹಾಗೂ ಯುವ ನಾಯಕರಾದ ಶ್ರೀ ಅಮೀನರಡ್ಡಿ ಯಾಳಗಿ ಅವರ ನೇತೃತ್ವದಲ್ಲಿ ಬೃಹತ್ ಪ್ರತಿಭಟನಾ ಪಾದಯಾತ್ರೆಯನ್ನು ನಗರದ ಸಿ ಬಿ ಕಮಾನ್ ನಿಂದ ಬಸವೇಶ್ವರ ವೃತ್ತದವರೆಗೆ ಮಾಡಲಾಯಿತು.

ಈ ಸಂದರ್ಭದಲ್ಲಿ ನಗರ ಮಂಡಲ ಅಧ್ಯಕ್ಷರಾದ ಚಂದ್ರಶೇಖರ ಯಾಳಗಿ, ಗ್ರಾಮೀಣ ಮಂಡಲ ಅಧ್ಯಕ್ಷರಾದ ತಿರುಪತಿ ಹತ್ತಿಕಟಿಗಿ, ಜಿಲ್ಲಾ ರೈತ ಮೋರ್ಚಾ ಅಧ್ಯಕ್ಷರಾದ ದುರ್ಗಪ್ಪ ಯಳಿಮೇಳಿ, ಜಿಲ್ಲಾ ಉಪಾಧ್ಯಕ್ಷರಾದ ದೇವಿಂದ್ರಪ್ಪ ಕೋನೆರ, ಜಿಲ್ಲಾ ಕಾರ್ಯದರ್ಶಿಯಾದ ದಾಮು ಪವಾರ, ಹಿರಿಯ ಮುಖಡರಾದ ಶಿವರಾಜ ದೇಶಮುಖ, ಡಾ॥ ಚಂದ್ರಶೇಖರ ಸುಬೇದಾರ, ಮಲ್ಲಿಕಾರ್ಜುನ ಕಂದಕೂರ, ಬಸವರಾಜ ಆರುಣಿ, ಅಶೋಕ ಮಲ್ಲಾಬಾದಿ, ಮಂಡಲ ಪ್ರ,ಕಾರ್ಯ ದರ್ಶಿಗಳಾದ ಕರಬಸಪ್ಪ ಸಾಹು ಬಿರಾಳ, ವೆಂಕಟೇಶ ಗೌನಳ್ಳಿ ಹಾಗೂ ನಗರ ಮತ್ತು ಗ್ರಾಮೀಣ ಮಂಡಲದ ಎಲ್ಲ ಸ್ಥರದ ಪದಾಧಿಕಾರಿಗಳು, ಮೋರ್ಚಾ ಪದಾಧಿಕಾರಿಗಳು, ರೈತ ಬಾಂಧವರು, ರೈತ ಪರ ಚಿಂತಕರು ಸಾರ್ವಜನಿಕರು ಉಪಸ್ಥಿತರಿದ್ದರು.

# ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನ ಡಾ, ಶರಣಪ್ಪ ಗುಂಡಗುರ್ತಿ

ಮಲ್ಲಮ್ಮ ನುಡಿ ವಾರ್ತೆ

ಕಲಬುರ್ಗಿ, ಆ, 08. ಜಿಲ್ಲೆಯ ಶ್ರೀ ಸಿದ್ಧರಾಮೇಶ್ವರ ಸರಕಾರಿ,ಅರೆ ಸರಕಾರಿ ಮತ್ತು ನಿವೃತ್ತ ನೌಕರರ ಸಂಘ (ರಿ) ಕಲಬರಗಿ ಹಾಗೂ ಜಿಲ್ಲಾ ಭೋವಿ ಸಮಾಜ ಸಂಘ ಕಲಬುರಗಿ ಇವರ ಸಂಯುಕ್ತಾಶ್ರಯದಲ್ಲಿ ಪ್ರತಿ ವರ್ಷದಂತೆ, ಈ ವರ್ಷವೂ 2024-25 ನೇ ಶೈಕ್ಷಣಿಕ ಸಾಲಿನಲ್ಲಿ ಎಸ್.ಎಸ್.ಎಲ್.ಸಿ., ಪಿ.ಯು.ಸಿ.ದ್ವಿತೀಯ , ವಿವಿಧ ತಾಂತ್ರಿಕ ಹಾಗೂ ವೃತ್ತಿಪರ ಕೋರ್ಸ್, ಗಲು ಮತ್ತು ಕಲು ವಾರ್ಷಿಕ ಪರೀಕ್ಷೆಗಳಲ್ಲಿ ಪ್ರಥಮ ಬಾರಿಗೆ , ಪ್ರಥಮ ದರ್ಜೆಯಲ್ಲಿ ಉತ್ತೀರ್ಣರಾದ ಕಲಬುರಗಿ ಜಿಲ್ಲೆಯ ಭೋವಿ ಸಮಾಜದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ "ಪ್ರತಿಭಾ ಪುರಸ್ಕಾರ" ನೀಡಲು ಕಾರ್ಯಕ್ರಮವನ್ನು ಮುಂದೆ ಬರುವ 07 ಸೆಪ್ಟೆಂಬರ್ 2025 ರಂದು ನಡೆಸಲು ತೀರ್ಮಾನಿಸಲಾಗಿದೆ. ವಿದ್ಯಾರ್ಥಿಗಳಿಂದ ಈಗಾಗಲೇ ಅರ್ಜಿಗಳನ್ನ ಆಹ್ವಾನಿಸಲಾಗಿದೆ. ಅರ್ಜಿಗಳನ್ನು ಸ್ವಿಕರಿಸಲು ಕೊನೆಯ ದಿನಾಂಕ:03-09-2025 ರಂದು ಸಾಯಂಕಾಲ 05:00 ಗಂಟೆಯ ವರೆಗೆ ಎಂದು ನಿಗದಿಗೊಳಿಸಿದೆ. ಸದರಿ ಕಾರ್ಯಕ್ರಮದ ಕುರಿತು ತಮ್ಮ ಮುಕ್ತ ಅಭಿಪ್ರಾಯಗಳನ್ನು ಸಂಗ್ರಹಿಸಲು ಅಥವಾ ಹಂಚಿಕೊಳ್ಳಲು ದಿನಾಂಕ:10-08-2025 ರಂದು, ಬೆಳಿಗ್ಗೆ 10:30ಗಂಟೆಗೆ ನಗರದ ರಾಜಾಪುರ ವಡ್ಡರ ಸಮುದಾಯ ಭವನದಲ್ಲಿ ಸಭೆಯನ್ನು ಏರ್ಪಡಿಸಲಾಗಿದೆ. ಸದರಿ ಸಭೆಗೆ ಸಮಾಜದ ಎಲ್ಲಾ ಹಿರಿಯರು, ಮುಖಂಡರು, ಗಣ್ಯವ್ಯಕ್ತಿಗಳು , ಜಿಲ್ಲಾ ಭೋವಿ ಸಮಾಜದ ಅಧ್ಯಕ್ಷರು ಮತ್ತು ಪದಾಧಿಕಾರಿಗಳು ಹಾಗೂ ಜಿಲ್ಲೆಯ ಎಲ್ಲಾ ತಾಲ್ಲೂಕು ಅಧ್ಯಕ್ಷರು ಮತ್ತು ಪದಾಧಿಕಾರಿಗಳು ಭಾಗವಹಿಸಿ ತಮ್ಮ ಮುಕ್ತ ಅಭಿಪ್ರಾಯಗಳು ವ್ಯಕ್ತಪಡಿಸಲು ಕೋರಲಾಗಿದೆ.

# ಜಿಲ್ಲಾ ಆಸ್ಪತ್ರೆಗೆ ಶಾಸಕ ಪಾಟೀಲ್ ಭೇಟಿ ವಿವಿಧ ಕಾಮಗಾರಿಗಳ ಪರಿಶೀಲನೆ.



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ಇಲ್ಲಿನ ಜಿಲ್ಲಾ ಆಸ್ಪತ್ರೆಗೆ ಶಾಸಕ ಚನ್ನಾರಡ್ಡಿ ಪಾಟೀಲ್ ತುನ್ನೂರು ಗುರುವಾರ ಭೇಟಿ ನೀಡಿ ಅಲ್ಲಿ ನಡೆದಿರುವ ವಿವಿಧ ಕಾಮಗಾರಿಗಳನ್ನು ಮತ್ತು ಆಸ್ಪತ್ರೆ ಕೋಣೆಗಳನ್ನು ಪರಿಶೀಲಿಸಿದರು.

ಈ ವೇಳೆ ಹಾಜರಿದ್ದ ಮೆಡಿಕಲ್ ಕಾಲೇಜಿನ ಡಿನ್ ಡಾ.ಸಂದೀಪ್ ಅವರು, ಆಸ್ಪತ್ರೆಯಲ್ಲಿ ನಡೆಯುತ್ತಿರುವ ಒಳಚರಂಡಿ ಕೆಲಸ, ಕೋಣೆಗಳ ದುರಸ್ತಿ ಸೇರಿದಂತೆಯೇ ವಿವಿಧ ಕೆಲಸಗಳ ಬಗ್ಗೆ ಶಾಸಕರಿಗೆ ಮಾಹಿತಿ ನೀಡಿದರು.

ಗುಣಮಟ್ಟದ ಕಾಮಗಾರಿಗೆ ಆದ್ಯತೆ ನೀಡುವ ಮೂಲಕ, ಅವಶ್ಯವಾಗಿ ಬೇಕಾದ ಕೆಲಸಗಳನ್ನು ಮಾಡಿಸಲಾಗುತ್ತಿದೆ ಎಂದು ಡಿನ್ ಸಂದೀಪ್ ಶಾಸಕರಿಗೆ ಹೇಳಿದರು.

ರೋಗಿಗಳಿಗೆ ತೊಂದರೆಯಾಗದಂತೆ-ಯೇ ಚಿಕಿತ್ಸೆ ನೀಡಬೇಕು. ಇನ್ನೂ ಏನಾದರೂ ಅವಶ್ಯ ಕೆಲಸಗಳು ಆಗಬೇಕಾದರೆ ತಿಳಿಸಿದರೇ ಸೂಕ್ತಕ್ರಮ ತೆಗೆದುಕೊಳ್ಳಲಾಗುವುದೆಂದು ಶಾಸಕರು ಹೇಳಿದರು.

ಕ್ಯಾಂಟಿನ್ ಉದ್ಘಾಟನೆ: ಇದೆ ವೇಳೆ ಶಾಸಕ ಚನ್ನಾರಡ್ಡಿ ಪಾಟೀಲ್ ತುನ್ನೂರು ಕ್ಯಾಂಟಿನ್ ಉದ್ಘಾಟಿಸಿದರು.

ರುಚಿಯಾದ ಮತ್ತು ಗುಣಮಟ್ಟದ ಉಪಹಾರ ನೀಡಬೇಕೆಂದರು.

ಡಿಎಸ್ ಡಾ. ರೀಜ್ವಾನ್ ಆಫ್ರಿನ್, ವಿವಿಧ ವಿಭಾಗಳ ವೈದ್ಯರು ಮತ್ತು ಸಿಬ್ಬಂದಿ ಇದ್ದರು.

# "ಹರ್ ಘರ್ ತಿರಂಗಾ, ಹರ್ ಘರ್, ಸ್ವಚ್ಚತಾ, ಸ್ವಚ್ಚತೆಯೊಂದಿಗೆ ಸ್ವಾತಂತ್ರ್ಯ ದ ಉತ್ಸವ" ಅಭಿಯಾನ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಆಗಸ್ಟ್ 08-ಸ್ವಾತಂತ್ರ್ಯ ದಿನಾಚರಣೆ-ಯ ಪ್ರಯುಕ್ತ "ಹರ್ ಘರ್ ತಿರಂಗಾ, ಹರ್ ಘರ್, ಸ್ವಚ್ಚತಾ, ಸ್ವಚ್ಛತೆಯೊಂದಿಗೆ ಸ್ವಾತಂತ್ರ್ಯದ ಉತ್ಸವ" ಅಭಿಯಾನವನ್ನು ಹಮ್ಮಿಕೊಳ್ಳಲಾಗಿದೆ ಎಂದು ಯಾದಗಿರಿ ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಹಣಾಧಿಕಾರಿ ಶ್ರೀ ಲವೀಶ್ ಒರಡಿಯಾ ಅವರು ತಿಳಿಸಿದ್ದಾರೆ.

79ನೇ ಸ್ವಾತಂತ್ರ್ಯ ದಿನಾಚರಣೆ-ಯ ಪ್ರಯುಕ್ತ ದೇಶಾದ್ಯಂತ ಗ್ರಾಮೀಣ ಜನರಲ್ಲಿ ನೀರು ಮತ್ತು ನೈರ್ಮಲ್ಯ ಕುರಿತು ಹೆಚ್ಚಿನ ಅರಿವು ಮೂಡಿಸುವ ಉದ್ದೇಶದೊಂದಿಗೆ ಕೇಂದ್ರ ಸಂಸ್ಕೃತಿ ಸಚಿವಾಲಯ ಹಾಗೂ ಕೇಂದ್ರ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಜಲಶಕ್ತಿ ಮಂತ್ರಾಲಯಗಳ ಜಂಟಿ ಸಹಯೋಗದಲ್ಲಿ ಇದೇ ಅಗಷ್ಟ್ 08 ರಿಂದ 15 ರವರೆಗೆ "ಹರ್ ಘರ್ ತಿರಂಗಾ, ಹರ್ ಘರ್ ಸ್ವಚ್ಚತಾ, ಸ್ವಚ್ಚತೆಯೊಂದಿಗೆ ಸ್ವಾತಂತ್ರ್ಯ ದ ಉತ್ಸವ" ಆಚರಣೆ ಎಂಬ ಘೋಷವಾಕ್ಯದಡಿ ಒಂದುವಾರದ ಅಭಿಯಾನವನ್ನು ಏರ್ಪಡಿಸಿದೆ.

ಈ ಅಭಿಯಾನ ಅವಧಿಯಲ್ಲಿ ಗ್ರಾಮ ಮತ್ತು ಗ್ರಾಮ ಪಂಚಾಯತಗಳಲ್ಲಿ ಸ್ವಚ್ಚ ಸುಜಲ್ ಗ್ರಾಮ ಪ್ರತಿಜ್ಞೆಗಳು, ಸಮುದಾಯ ಶುಚಿತ್ವ ಅಭಿಯಾನಗಳು, ವಾಶ್ ಅಸ್ತಿಗಳ ಶುಚಿಗೊಳಿಸುವಿಕೆ, ಜಲ ಸಂರಕ್ಷಣೆಯ ಅರಿವು ಮೂಡಿಸುವ ಚಟುವಟಿಕೆಗಳು ಮತ್ತು 2025 ರ ಅಗಷ್ಟ್ 15 ರಂದು ಸ್ವಚ್ಚ ಸಂಕೀರ್ಣ ಘಟಕಗಳಲ್ಲಿ, ಎಂಆರ್ ಎಫ್ ಘಟಕಗಳಲ್ಲಿ, ಹಾಗೂ ಔಉಖ ಆವರಣದಲ್ಲಿ ಹಾಗೂ ಪ್ರಮುಖ (ಘಂಖಉ) ಮೂಲಸೌಕರ್ಯ ಸ್ಥಳಗಳಲ್ಲಿ ಧ್ವಜಾರೋಹಣ ಸಮಾರಂಭಗಳನ್ನು ಆಯೋಜನೆ ಮಾಡಲು ಈ ಮೇಲಿನ ಉಲ್ಲೇಖಿ ಪತ್ರದ ಮೂಲಕ ಮಾನ್ಯ ನಿರ್ದೇಶಕರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಬೆಂಗಳೂರ ರವರು ನಿರ್ದೇಶನ ನೀಡಿರುತ್ತಾರೆ.

ಈ ಹಿನ್ನಲೆಯಲ್ಲಿ "ಹರ್ ಘರ್ ತಿರಂಗಾ, ಹರ್ ಘರ್ ಸ್ವಚ್ಚತಾ, ಸ್ವಚ್ಚತೆಯೊಂದಿಗೆ ಸ್ವಾತಂತ್ರ್ಯ ದ ಉತ್ಸವ" ಅಭಿಯಾನದಲ್ಲಿ ಗ್ರಾಮ ಪಂಚಾಯತಿಯ ಅಧ್ಯಕ್ಷರು, ಸದಸ್ಯರು, ಗ್ರಾಮ ನೀರು ಮತ್ತು ನೈರ್ಮಲ್ಯ ಸಮಿತಿಯ ಸದಸ್ಯರು, ಸಂಜೀವಿನಿ ಯೋಜನೆಯ ಎಂಬಿಕೆ, ಎಲ್.ಸಿ.ಆರ್.ಪಿ.,ಸ್ವ-ಸಹಾಯ ಸಂಘದ ಗುಂಪುಗಳು, ಪಂಚಾಯತರಾಜ್ ಸಂಸ್ಥೆಗಳು, ಶಾಲಾ ಮಕ್ಕಳು, ಸ್ವಯಂ-ಸೇವಕರು, ಮುಂಚೂಣಿ ಕಾರ್ಯಕರ್ತೆಯರು ಈ ಅಭಿಯಾನದಲ್ಲಿ ಸಕ್ರಿಯವಾಗಿ ಪಾಲ್ಗೊಂಡು ಅಭಿಯಾನ ಯಶಸ್ವಿಗೊಳಿಸಬೇಕು.

ಪ್ರತಿ ಮನೆ-ಮನೆಗೂ ಸ್ವಚ್ಛತೆ-ಯ ಸಂದೇಶ ಆಗಸ್ಟ್ 8 ರಿಂದ 15ರ ವರೆಗೆ ಸ್ವಚ್ಛತೆಯೊಂದಿಗೆ ಸ್ವಾತಂತ್ರ್ಯದ ಉತ್ಸವ : ಸಿಇಒ ಲವೀಶ್ ಒರಡಿಯಾ

79ನೇ ಸ್ವಾತಂತ್ರ್ಯ ದಿನಾಚರಣೆ-ಯ ಪ್ರಯುಕ್ತ ದೇಶಾದ್ಯಂತ ಗ್ರಾಮೀಣ ಜನರಲ್ಲಿ ನೀರು ಮತ್ತು ನೈರ್ಮಲ್ಯ ಕುರಿತು ಹೆಚ್ಚಿನ ಅರಿವು ಮೂಡಿಸುವ ಉದ್ದೇಶದೊಂದಿಗೆ ಕೇಂದ್ರ ಸಂಸ್ಕೃತಿ ಸಚಿವಾಲಯ ಹಾಗೂ ಕೇಂದ್ರ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಜಲಶಕ್ತಿ ಮಂತ್ರಾಲಯಗಳ ಜಂಟಿ ಸಹಯೋಗದಲ್ಲಿ ಇದೇ ಅಗಷ್ಟ್ 08 ರಿಂದ 15 ರವರೆಗೆ "ಹರ್ ಘರ್ ತಿರಂಗಾ, ಹರ್ ಘರ್ ಸ್ವಚ್ಚತಾ, ಸ್ವಚ್ಚತೆಯೊಂದಿಗೆ ಸ್ವಾತಂತ್ರ್ಯ ದ ಉತ್ಸವ" ಆಚರಣೆ ಎಂಬ ಘೋಷವಾಕ್ಯದಡಿ ಒಂದುವಾರದ ಅಭಿಯಾನವನ್ನು ಹಮ್ಮಿಕೊಂಡಿರುವ ಪ್ರಯುಕ್ತ ಎಲ್ಲಾ ಗ್ರಾಮ ಪಂಚಾಯತಗಳಲ್ಲಿ ನೀರು ಮತ್ತು ನೈರ್ಮಲ್ಯ ವಿಷಯಕ್ಕೆ ಸಂಬಂಧಿಸಿದಂತೆ ಸಾರ್ವಜನಿಕರಲ್ಲಿ ಜಾಗೃತಿ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುವುದು ಎಂದು ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಲವೀಶ್ ಒರಡಿಯಾ ರವರು ತಿಳಿಸಿದರು.

ಆಗಸ್ಟ್ 8 ರಿಂದ 15ರ ವರೆಗೆ ಹಮ್ಮಿಕೊಳ್ಳಲಿರುವ ವಿವಿಧ ಚಟುವಟಿಕೆ, ಕಾರ್ಯಕ್ರಮಗಳು

ಅಭಿಯಾನದ ಉದ್ದೇಶ: ಸ್ವಾತಂತ್ರ್ಯ ದಿನಾಚರಣೆಯನ್ನು ಸ್ಮರಿಸುವ ಸಲುವಾಗಿ ಒಂದು ವಾರದ ಅಭಿಯಾನವನ್ನು (ಆಗಸ್ 8-15) ಆಯೋಜಿಸುವುದು, ಇದು ಸ್ವಚ್ಚ ಭಾರತ್ ಮಿಷನ್ ಮತ್ತು ಜಲ ಜೀವನ್ ಮಿಷನ್ ಅಡಿಯಲ್ಲಿ ಸುಚಿತ್ರ, ನೈರ್ಮಲ್ಯ, ಜಲ ಸಂರಕ್ಷಣೆ, ಜಲ ಮೂಲ ಸಂರಕ್ಷಣೆ ಮತ್ತು ಅರಿವನ್ನು ಉತ್ತೇಜಿಸುತ್ತದೆ, ಪ್ರಮುಖ ಮೂಲಸೌಕರ್ಯ ತಾಣಗಳಲ್ಲಿ ಧ್ವಜಾರೋಹಣ ಸಮಾರಂಭಗಳೊಂದಿಗೆ ಅಭಿಯಾನವು ಮುಕ್ತಾಯಗೊಳ್ಳಲಿದೆ.

ಆಗಸ್ಟ್ 8 ಅಭಿಯಾನ ಚಾಲನೆ ಅಭಿಯಾನದ ಉದ್ಘಾಟನೆ: ಜಿಲ್ಲಾ ಮಟ್ಟದಲ್ಲಿ ಸ್ಥಳೀಯ ನಾಯಕರು ಅಥವಾ ಅಧಿಕಾರಿಗಳು ಅಭಿಯಾನದ ಬ್ಯಾನರ್‌ಗಳು/ಪೋಸ್ಟರ್‌ಗಳನ್ನು ಬಿಡುಗಡೆ ಮಾಡುವ ಮೂಲಕ ಅಭಿಯಾನಕ್ಕೆ ಚಾಲನೆ ನೀಡುವುದು. (ಆಆಘಖ ಈ ಕಾರ್ಯಕ್ರಮದ ಉದ್ದೇಶಕ್ಕಾಗಿ ಮೂರು ಬಣ್ಣಗಳೊಂದಿಗೆ ಅನುಮೋದಿತ ವಿನ್ಯಾಸಗಳನ್ನು ಒದಗಿಸುತ್ತದೆ.) ಸ್ವಚ್ಚ ಸುಜಲ್ ಗ್ರಾಮ ಪ್ರತಿಜ್ಞೆ: ಅಭಿಯಾನದ ಮೊದಲ ದಿನವಾಗಿ, ಅಧಿಕಾರಿಗಳು, ಸ್ಥಳೀಯ ಚುನಾಯಿತ ಪ್ರತಿನಿಧಿಗಳು, ಸಮುದಾಯ ಸದಸ್ಯರು ಮತ್ತು ಶಾಲಾ ಮಕ್ಕಳು ಸೇರಿ ಪ್ರತಿಜ್ಞೆ ವಿಧಿ ಸ್ವೀಕಾರ ಮಾಡುವುದು.

ಸಾಮಗ್ರಿಗಳ ವಿತರಣೆ : ಹರ್ ಘರ್ ತಿರಂಗಾ, ಹರ್ ಘರ್ ಸ್ವಚ್ಚತಾ, ಸ್ವಚ್ಚತೆಯೊಂದಿಗೆ ಸ್ವಾತಂತ್ರದ ಯದ ಉತ್ಸವ ಕುರಿತು ಐ.ಇ.ಸಿ ಸಾಮಗ್ರಿಗಳಾದ ಬ್ಯಾನರ್‌ಗಳು, ಪೋಸ್ಟರ್‌ಗಳು ಮತ್ತು ಕಿಟ್‌ಗಳನ್ನು ವಿತರಿಸುವುದು. ಆಗಷ್ಟೇ 9-11, ಸಮುದಾಯ ಶುಚಿತ್ವ ಅಭಿಯಾನ ಗ್ರಾಮ ಮಟ್ಟದ ಶುಚಿತ್ವ ಅಭಿಯಾನಗಳು : ಗಿಘಖಅ ಗಳು, ಖಊಉ ಗಳು, ವಿವಿಧ ಕ್ಲಬ್‌ಗಳು, ಇಕೋ ಕ್ಲಬ್‌ಗಳ ಯುವಕರು ಮತ್ತು ಪಂಚಾಯತ್ ಸದಸ್ಯರನ್ನು ಮತ್ತು ಸಾರ್ವಜನಿಕರನ್ನು ತೊಡಗಿಸಿಕೊಂಡು ಶುಚಿತ್ವ ಅಭಿಯಾನಗಳನ್ನು ಆಯೋಜಿಸುವುದು.

ಸಾರ್ವಜನಿಕ ಸ್ಥಳಗಳ ಸ್ವಚ್ಚತೆ : ಗ್ರಾಮ, ಗ್ರಾಮ ಪಂಚಾಯಿತಿಗಳಲ್ಲಿ ತ್ಯಾಜ್ಯ ಶೇಖರಣೆ ಸ್ಥಳಗಳು ಪ್ರಮುಖವಾಗಿ ಸಾರ್ವಜನಿಕ ಪ್ರದೇಶಗಳು, ಜಲಮೂಲಗಳು, ನೀರಿನ ಟ್ಯಾಂಕ್ ಸಮೀಪ, ನೀರಿನ ಸ್ವತ್ತುಗಳ ಸುತ್ತ-ಮುತ್ತ ಹಾಗೂ ನೈರ್ಮಲ್ಯ ಸೌಲಭ್ಯಗಳು ಹೊಂದಿರುವ ಪ್ರದೇಶಗಳನ್ನು ಶ್ರಮಧಾನ ಚಟುವಟಿಕೆಗಳನ್ನು ಹಮ್ಮಿಕೊಳ್ಳುವ ಮೂಲಕ ಶುಚಿಗೊಳಿಸುವುದು.

ಅರಿವು ಮೂಡಿಸುವ ಚಟುವಟಿಕೆಗಳು: ವಿದ್ಯಾರ್ಥಿಗಳು, ಗ್ರಾಮಗಳ ಯುವಕರಿಂದ ಸ್ವಚ್ಚತಾ ರಂ'ಯಾಲಿಗಳು. ರಂಗೋಲಿ ರಚನೆ ಮತ್ತು ಆಸ್ತಿಗಳು, ಮೂಲಸೌಕರ್ಯ ಮತ್ತು ವೈಯಕಿಕ ಮನೆಗಳ ಮಟ್ಟದಲ್ಲಿ ಚಿತ್ರಕಲೆ ಬಿಡಿಸುವುದು ಸೇರಿದಂತೆ ಇತರೆ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದು. ಚರಂಡಿಗಳ ಸ್ವಚ್ಚತೆ : ಹಳ್ಳಿಗಳಲ್ಲಿ ನೀರು ನಿಲ್ಲುವ ಚರಂಡಿಗಳನ್ನು ಗುರುತಿಸಿ ಅವುಗಳನ್ನು ಸ್ವಚ್ಛಗೊಳಿಸುವುದು, ಮತ್ತು ತಾಯಂದಿರು, ಕಾರ್ಮಿಕರು, ಚೆನ್ನಾಗಿ ನೀರು ಬರಿದಾಗಿರುವ ಜನರು, ಕುಡುಕರು, ಇಕಾರಿಗಳು, ಅಂಗವಿಕಲರು, ನಿರಾಶ್ರಿತರು ಇತ್ಯಾದಿಗಳಿಗೆ ನೀರು ಸರಬರಾಜು ಮಾಡುವುದು. ನೈರ್ಮಲ್ಯ ಅಭಿಯಾನ: ಸಮುದಾಯ ನೈರ್ಮಲ್ಯ ಸಂಕೀರ್ಣಗಳು, MRF, FSM ಗಳು ಮತ್ತು ಇತರ ಆಸ್ತಿಗಳ ಸುತ್ತಮುತ್ತಲಿನ ಪ್ರದೇಶದಲ್ಲಿ ನೈರ್ಮಲ್ಯ ಅಭಿಯಾನಗಳನ್ನು ಆಯೋಜಿಸುವುದು.

ಪ್ಲಾಸ್ಟಿಕ್ ತ್ಯಾಜ್ಯ ಸಂಗ್ರಹಣೆ : ಪ್ಲಾಸ್ಟಿಕ್ ತ್ಯಾಜ್ಯ ಸಂಗ್ರಹಣೆ ಅಭಿಯಾನ ಮತ್ತು ಅದರ ನಿರ್ವಹಣೆಗೆ ಸಂಬಂಧಿಸಿದ ಪರಿಶೀಲನೆಗಳನ್ನು ಕೈಗೊಳ್ಳುವುದು. "ಆಗಸ್ಟ್ 12, ವಾಶ್ ಮೂಲಸೌಕರ್ಯ ಶುಚಿತ್ವ ದಿನ" ಎಎಬ ಮೂಲಸೌಕರ್ಯದ ಮೇಲೆ ವಿಶೇಷ ಗಮನ: ಎಎಬ ಮೂಲಸೌಕರ್ಯ (ನೀರಿನ ಟ್ಯಾಂಕ್‌ಗಳು, ಕುಡಿಯುವ ನೀರಿನ ಮೂಲಗಳು, ನಳ ಸಂಪರ್ಕಗಳು ಪಂಪ್ ಹೌಸ್‌ಗಳು ಇತ್ಯಾದಿ) ಶುಚಿಗೊಳಿಸುವಿಕೆ ಮತ್ತು ಸುಂದರಗೊಳಿಸುವುದರ ಮೇಲೆ ವಿಶೇಷ ಗಮನ ಹರಿಸುವುದು ಈ ಉದ್ದೇಶಕ್ಕಾಗಿ ಶ್ರಮದಾನ ಚಟುವಟಿಕೆಗಳನ್ನು ಆಯೋಜಿಸುವುದು. ದೇಶಭಕ್ತಿ ವಿಷಯಗಳೊಂದಿಗೆ ಚಿತ್ರಕಲೆ, ನೀರು ಮತ್ತು ನೈರ್ಮಲ್ಯ ತಾಣಗಳನ್ನು ದೇಶಭಕ್ತಿಯ ವಿಷಯಗಳೊಂದಿಗೆ ಚಿತ್ರಿಸುವುದು ಮತ್ತು ಅಲಂಕರಿಸುವುದು.

ತ್ರಿವರ್ಣ ದಾರಗಳ ಅಳವಡಿಕೆ: ವಾಶ್ ಆಸ್ತಿಗಳ ಮೇಲೆ ತ್ರಿವರ್ಣ ದಾರಗಳನ್ನು ಕಟ್ಟುವುದು. ಆಗಸ್ಟ್ 13, ಸ್ವಚ್ಛತಾ ಸಂವಾದ ಮತ್ತು ಅರಿವು ದಿನ ತ್ಯಾಜ್ಯ ನಿರ್ವಹಣೆ ತಂತ್ರಗಳ ಪ್ರದರ್ಶನ: ತ್ಯಾಜ್ಯ ನಿರ್ವಹಣೆ ತಂತ್ರಗಳು (ತ್ಯಾಜ್ಯ ವಿಂಗಡಣೆ, ಕಾಂಪೋಸ್ಟಿಂಗ್) ಮತ್ತು ಶೌಚಾಲಯ ನಿರ್ವಹಣೆಯ ಬಗ್ಗೆ ಪ್ರದರ್ಶನಗಳನ್ನು ಆಯೋಜಿಸುವುದು. ಅರಿವು ಮೂಡಿಸುವಿಕೆ, ಜಲ ಸಂರಕ್ಷಣೆ, ಅಂತರ್ಜಲ ಮರುಪೂರಣ, ಜಲಮೂಲ ಸಂರಕ್ಷಣೆ, ಏಕ-ಬಳಕೆಯ ಪ್ಲಾಸ್ಟಿಕ್‌ಗಳನ್ನು ತ್ಯಜಿಸುವುದು ಇತ್ಯಾದಿಗಳ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸುವುದು.

ಸಮುದಾಯ ಸಭೆಗಳು : ನೈರ್ಮಲ್ಯ ಸವಾಲುಗಳು ಮತ್ತು ಪರಿಹಾರಗಳನ್ನು ಚರ್ಚಿಸಲು ಗಿಘಖಅ ಅಥವಾ ಸಮುದಾಯ ಸಭೆಗಳನ್ನು ಆಯೋಜಿಸುವುದು. ವೈಯಕ್ತಿಕ ಶೌಚಾಲಯ ಶುಚಿತ್ವ: ಗ್ರಾಮಸ್ಥರು, ವ್ಯಕ್ತಿಗಳಿಂದ ತಮ್ಮ ಮನೆಗಳಲ್ಲಿನ ವೈಯಕ್ತಿಕ ಗೃಹ ಶೌಚಾಲಯಗಳು ಮತ್ತು ಸಮುದಾಯ ಶೌಚಾಲಯಗಳನ್ನು ಶುಚಿಗೊಳಿಸಲು ಅಭಿಯಾನಗಳನ್ನು ಆಗಸ್ಟ್ 14, ಸ್ವಾತಂತ್ರ್ಯ ದಿನಾಚರಣೆಗೆ ತಯಾರಿ ಅಂತಿಮ ಶುಚಿತ್ವ ಮತ್ತು ಅಲಂಕಾರ, ಸಾರ್ವಜನಿಕ ಸ್ಥಳಗಳು, ಗ್ರಾಮದ ಬೀದಿಗಳು, ಗ್ರಾಮ ಮಾರುಕಟ್ಟೆಗಳು, ಸಂತೆ 'ನಡೆಯುವ ಸ್ಥಳಗಳು, ವಾಶ್ ತಾಣಗಳ ಅಂತಿಮ ಶುಚಿತ್ವ ಮತ್ತು ಅಲಂಕಾರ ಮಾಡುವುದು ಹಾಗೂ ಧ್ವಜಾರೋಹಣಕ್ಕಾಗಿ ಸ್ಥಳ ಗುರುತಿಸುವುದು. ಧ್ವಜಾರೋಹಣ ಸ್ಥಳ ಗುರುತಿಸುವಿಕೆ, "ಹರ್ ಘರ್ ತಿರಂಗಾ" ಅಭಿಯಾನದ ಅಡಿಯಲ್ಲಿ ಧ್ವಜಾರೋಹಣಕ್ಕಾಗಿ ಸ್ಥಳಗಳನ್ನು ಗುರುತಿಸುವುದು ಮತ್ತು ಸ್ವಚ್ಛಗೊಳಿಸುವುದು.

ಧ್ವಜಾರೋಹಣದ ತಾಲೀಮು : ಧ್ವಜಾರೋಹಣ ಸಮಾರಂಭಗಳ ತಾಲೀಮು ಆಗಸ್ 15, ಸ್ವಾತಂತ್ರ್ಯ ದಿನಾಚರಣೆ ಘಂಖಉ ಮೂಲಸೌಕರ್ಯದಲ್ಲಿ ಧ್ವಜಾರೋಹಣ ಘಂಖಉ ಮೂಲಸೌಕರ್ಯ ಎಎಬ ಮತ್ತು ನೈರ್ಮಲ್ಯ ತಾಣಗಳು, ಸ್ವಚ್ಚ ನೀರು, ನೈರ್ಮಲ್ಯ ಮತ್ತು ಸ್ವಾತಂತ್ರ್ಯವನ್ನು ಸಂಕೇತಿಸುತ್ತದೆ), ಸಾರ್ವಜನಿಕ ಸ್ಥಳಗಳು (ಗ್ರಾಮ ಪಂಚಾಯತ್ ಕಟ್ಟಡ, ಮತ್ತು ಇತರೆ ಸರ್ಕಾರಿ ಕಟ್ಟಡಗಳು ಇತ್ಯಾದಿ), ಅಮೃತ್ ಸರೋವರಗಳು ಇತ್ಯಾದಿಗಳಲ್ಲಿ ಧ್ವಜಾರೋಹಣ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದು. ಮನೆಯಲ್ಲಿ ಧ್ವಜಾರೋಹಣ, "ಹರ್ ಘರ್ ತಿರಂಗಾ" ಅಭಿಯಾನದ ಅಡಿಯಲ್ಲಿ ಗುರುತಿಸಲಾದ ಸ್ಥಳಗಳಲ್ಲಿ (ವೈಯಕ್ತಿಕ ಮನೆಗಳು) ಧ್ವಜಾರೋಹಣ ನೆರವೇರಿಸುವುದು. ಬಾಕ್ಸ್ ಸ್ವಚ್ಛತಾ ಚಾಂಪಿಯನ್ ಮತ್ತು ಸ್ವಯಂಸೇವಕರ ಸನ್ಮಾನ, ಸ್ವಚ್ಛತಾ ಚಾಂಪಿಯನ್ ಮತ್ತು ಸ್ವಯಂ-ಸೇವಕರ ಕೊಡುಗೆಗಳನ್ನು ಗುರುತಿಸಿ ಸನ್ಮಾನಿಸುವುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಡಿ.ದೇವರಾಜು ಅರಸುರವರ ಜನ್ಮ ದಿನಾಚರಣೆ ಅರ್ಥಪೂರ್ಣವಾಗಿ ಆಚರಿಸಲು ಪೂರ್ವಭಾವಿ ಸಭೆಯಲ್ಲಿ ನಿರ್ಧಾರ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.08–ಜಿಲ್ಲಾಕೇಂದ್ರದಲ್ಲಿ ಆ.20ರಂದು ಮಾಜಿ ಮುಖ್ಯಮಂತ್ರಿ ಡಿ.ದೇವರಾಜ ಅರಸು ಅವರ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಲಾಗುವುದು ಎಂದು ಅಪರ ಜಿಲ್ಲಾಧಿಕಾರಿ ಮಹಮ್ಮದ್ ಎನ್. ಝುಬೇರ್ ಅವರು ಹೇಳಿದರು.

ಶುಕ್ರವಾರ ನಗರದ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಡಿ.ದೇವರಾಜ ಅರಸು ಅವರ 110ನೇ ಜನ್ಮ ದಿನಾಚರಣೆಯ ಪೂರ್ವಭಾವಿ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ನಗರದ ಜೋಳದರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ ವೇದಿಕೆ ಕಾರ್ಯಕ್ರಮವು ಸುವ್ಯಸ್ಥಿತವಾಗಿ ನಡೆಯುವಂತಾಗಬೇಕು. ಜಯಂತಿ ಹಿನ್ನೆಲೆಯಲ್ಲಿ ರಂಗಮಂದಿರದ ಹೊರಾಂಗಣ ಮತ್ತು ಒಳಾಂಗಣದಲ್ಲಿ ಶುಚಿತ್ವ ಕಾಯ್ದುಕೊಳ್ಳಬೇಕು. ಆಹ್ವಾನ ಪತ್ರಿಕೆಗಳ ಮುದ್ರಣ ಮಾಡುವ ಕುರಿತು ಹಾಗೂ ಶಿಷ್ಠಾಚಾರ ಪಾಲನೆ ಮಾಡುವಂತೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.



ದೇವರಾಜು ಅರಸು ಅವರ ಜಯಂತಿ ಪ್ರಯುಕ್ತ ಆ.20 ರಂದು ಎಲ್ಲಾ ಸರ್ಕಾರಿ ಶಾಲಾ ಕಾಲೇಜು ಮತ್ತು ಕಚೇರಿಗಳಲ್ಲಿ ಅರಸು ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಪೂಜೆ ಸಲ್ಲಿಸಿ ಜಯಂತಿ ಕಾರ್ಯಕ್ರಮವನ್ನು ಎಲ್ಲೆಡೆಯೂ ಆಚರಿಸಬೇಕು ಎಂದು ತಿಳಿಸಿದರು.

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಆಯುಕ್ತರ ಕಚೇರಿಯಿಂದ ಬಂದ ಸುತ್ತೋಲೆಯಲ್ಲಿ ತಿಳಿಸಿದಂತೆ ಡಿ.ದೇವರಾಜು ಅವರ ಜನ್ಮ ದಿನಾಚರಣೆಯನ್ನು ಜಿಲ್ಲೆಯಲ್ಲಿರುವ ಹಿಂದುಳಿದ ವರ್ಗಗಳ ಮೆಟ್ರಿಕ್ ಪೂರ್ವ, ಮೆಟ್ರಿಕ್ ನಂತರ ವಿದ್ಯಾರ್ಥಿ ನಿಲಯಗಳಲ್ಲಿ ಆ.20 ರಂದು ಕಡ್ಡಾಯವಾಗಿ ಆಚರಿಸಲು ಕ್ರಮ ವಹಿಸಬೇಕು ಎಂದು ಅಪರ ಜಿಲ್ಲಾಧಿಕಾರಿಗಳು, ಬಿಸಿಎಂ ಇಲಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿಗೆ ಸೂಚನೆ ನೀಡಿದರು.

ಡಿ.ದೇವರಾಜ ಅರಸು ಅವರ ವ್ಯಕ್ತಿತ್ವದ ಬಗ್ಗೆ ಇಂದಿನ ಯುವ ಸಮುದಾಯಕ್ಕೆ ಸಂದೇಶ ಸಾರುವ ನಿಟ್ಟಿನಲ್ಲಿ ಜಿಲ್ಲೆಯಲ್ಲಿನ ವಿವಿಧ ವಸತಿ ನಿಲಯಗಳಲ್ಲಿನ ವಿದ್ಯಾರ್ಥಿಗಳಿಗೆ ಪ್ರಬಂಧ ಸ್ಪರ್ಧೆ, ಭಾಷಣ ಸ್ಪರ್ಧೆ ಹಾಗೂ ಇನ್ನಿತರ ಸ್ಪರ್ಧೆಗಳನ್ನು ಆಯೋಜನೆ ಮಾಡಿ ಬಹುಮಾನ ವಿತರಣೆಗೆ ಕ್ರಮ ವಹಿಸಬೇಕು ಎಂದರು.

ಪ್ರಸಕ್ತ ಸಾಲಿನಲ್ಲಿ ಎಸೆಸೆಲ್ಸಿ, ಪಿಯುಸಿ ಹಾಗೂ ಸ್ನಾತಕೋತ್ತರ ಪದವಿಯಲ್ಲಿ ಅತಿ ಹೆಚ್ಚು ಅಂಕಗಳಿಸಿದ ಬಿಸಿಎಂ ಸಮುದಾಯಕ್ಕೆ ಸೇರಿದ ವಿದ್ಯಾರ್ಥಿಗಳನ್ನು ಗುರುತಿಸಿ ವೇದಿಕೆಯಲ್ಲಿ ಸನ್ಮಾನಿಸಿ ಗೌರವಿಸಬೇಕು. ಹಿಂದುಳಿದ ಸಮುದಾಯಗಳ ಒಕ್ಕೂಟದ ಗಣ್ಯರಿಗೆ ವೇದಿಕೆಗೆ ಅವಕಾಶ ಕಲ್ಪಿಸಿಕೊಡಬೇಕು. ಉತ್ತಮ ಸಂಪನ್ಮೂಲ ವ್ಯಕ್ತಿಗಳಿಂದ ಡಿ.ದೇವರಾಜು ಅರಸು ಅವರ ಕುರಿತು ವಿಶೇಷ ಉಪನ್ಯಾಸ ಏರ್ಪಡಿಸಬೇಕು ಸಂಬಂಧಪಟ್ಟ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಹಿಂದುಳಿದ ವರ್ಗದ ಸಮುದಾಯದಲ್ಲಿ ವಿವಿಧ ಕ್ಷೇತ್ರಗಳಲ್ಲಿ ವಿಶೇಷ ಸಾಧನೆ ಮಾಡಿದ ವ್ಯಕ್ತಿಗಳಿಗೆ ಜಿಲ್ಲಾಮಟ್ಟದ ದೇವರಾಜು ಅರಸು ಪ್ರಶಸಿ ನೀಡಬೇಕು ಎಂದು ಸಭೆಯಲ್ಲಿದ್ದ ವಿವಿಧ ಸಮುದಾಯದ ಮುಖಂಡರು ಸಭೆಗೆ ಮನವಿ ಮಾಡಿದರು. ಇದಕ್ಕೆ ಅಪರ ಜಿಲ್ಲಾಧಿಕಾರಿ ಅವರು ಪ್ರತಿಕ್ರಿಯಿಸಿ ಇದಕ್ಕಾಗಿ ಸಮಿತಿಯನ್ನು ರಚಿಸಿ ಮುಂದಿನ ಕ್ರಮ ವಹಿಸಲಾಗುವುದು ಎಂದರು.

ಸಭೆಯಲ್ಲಿ ಹಾಜರಿದ್ದ ಸಂಘಟನೆಯ ಮುಖಂಡರುಗಳು ಜಿಲ್ಲೆಯಲ್ಲಿ ದೇವರಾಜು ಅರಸು ಸಮುದಾಯ ಭವನ ನಿರ್ಮಾಣಕ್ಕೆ ಜಾಗ ನೀಡುವಂತೆ ಮನವಿ ಮಾಡಿದರು. ಇದಕ್ಕೆ ಅಪರ ಜಿಲ್ಲಾಧಿಕಾರಿ, ಸ್ಥಳ ಗುರುತಿಸುವಂತೆ ತಿಳಿಸಿದರು.

ಈ ಸಂದರ್ಭದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಜಲಾಲಪ್ಪ, ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಸೇರಿದಂತೆ ಜಿಲ್ಲೆಯ ವಿವಿಧ ಸಂಘ–ಸಂಸ್ಥೆಗಳ ಮುಖಂಡರು, ಪದಾಧಿಕಾರಿಗಳು ಹಾಗೂ ಇತರರು ಉಪಸ್ಥಿತರಿದ್ದರು.

## ನಷ್ಟ ಪರಿಹಾರ ಕೋರಿ ಜಿಲ್ಲಾ ಗ್ರಾಹಕರ ಆಯೋಗಕ್ಕೆ ದೂರು ಜವಾಬ್ದಾರಿ ಅರಿಯಲು ತ್ರೀಕೋನ ಚಾಟಿ ಬೀಸಿದ ಆಯೋಗ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.08–ಕಾರು ಅಪಘಾತ ಪ್ರಕರಣಕ್ಕೆ ಸಂಬಂಧಿಸಿದಂತೆ ಮಾಲೀಕನಿಗೆ, ಕಾರು ಮಾರಾಟ ಕಂಪನಿ, ಇನ್ಸೂರೆನ್ಸ್ ಕಂಪನಿ ಸೇರಿ ಮೂವರನ್ನು ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗವು ತರಾಟೆಗೆ ತೆಗೆದುಕೊಂಡು ಕಾರು ಮಾಲೀಕನಿಗೆ 15 ಸಾವಿರ ರೂ. ಪರಿಹಾರ ಒದಗಿಸುವಂತೆ ಗುರುವಾರ ಆದೇಶ ಹೊರಡಿಸಿದೆ. ನಗರದ ಪಿಡಬ್ಲ್ಯುಡಿ ಗುತ್ತಿಗೆದಾರ ಕೆ.ಖಲೀಲ ಉರ್ಫ ರೆಹಮನ್ ಎಂಬುವರು ಬಳ್ಳಾರಿಯ ಕೆಪಿಎಫ್ ಪ್ರವೇಟ್ ಲಿಮಿಟೆಡ್ ನಿಂದ ಕಾರ್ ಖರೀದಿ ಮಾಡಿದ್ದು, ನ್ಯಾಷನಲ್ ಇನ್ಸೂರೆನ್ಸ್ ಕಂಪನಿ ಲಿಮಿಟೆಡ್ ನಿಂದ ವಾಹನದ ಪಾಲಿಸಿ ಮಾಡಿಸಿದ್ದರು. 2023ರ ಆಗಸ್ಟ್ 19ರಂದು ವಾಹನವು ರಾಂಪುರ ಪೋಲಿಸ್ ಠಾಣೆ ವ್ಯಾಪ್ತಿಯಲ್ಲಿ ಅಪಘಾತಕ್ಕೀಡಾಗಿ ಅದರ ನಷ್ಟ ಪರಿಹಾರ ರೂ.1,40,000 ಮತ್ತು ಮಾನಸಿಕ ವೇದನೆಗೆ ರೂ.25,000 ಪರಿಹಾರವನ್ನು ಕೊಡಿಸಲು ಕೋರಿ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗಕ್ಕೆ ಕಾರು ಮಾಲೀಕ ದೂರು ಸಲ್ಲಿಸಿದ್ದರು.

ಪ್ರಕರಣದ ವಿಚಾರಣೆ ಕೈಗೆತ್ತಿಕೊಂಡ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷ ಎನ್.ತಿಪ್ಪೇಸ್ವಾಮಿ ಹಾಗೂ ಮಾರ್ಲಾ ಶಶಿಕಲಾ ಅವರು ಉಭಯ ಪಕ್ಷಕಾರರ ದಾಖಲಾತಿ ಹಾಗೂ ಸಾಕ್ಷಿ ಹೇಳಿಕೆಗಳನ್ನು ಪರಿಶೀಲಿಸಿ ವಾದ–ವಿವಾದಗಳನ್ನು ಆಲಿಸಿದರು. ನಂತರ ಪ್ರಕರಣದಲ್ಲಿ ವಾಹನ ವಿತರಕರು ಕಾರ್ ಖರೀದಿಸಿದ ಮಾಲೀಕರಿಗೆ ಖರೀದಿ ಸಮಯದಲ್ಲಿ ವಾಹನವು ಹಳದಿ ಬೋರ್ಡ್ ಹೊಂದಿರುವ ಕಾರಣ ಪರ್ಮಿಟ್ ಪಡೆಯುವುದು ಅವಶ್ಯವೆಂದು ತಿಳಿಸದೇ ಇರುವುದು ಸೇವಾ ನಿರ್ಲಕ್ಷವಾಗಿದೆ. ಇದರೊಂದಿಗೆ ಕಾರು ಖರೀದಿ ಮಾಡಿದ ಮಾಲೀಕ 8 ತಿಂಗಳವರೆಗೆ ಹಳದಿ ಬೋರ್ಡ್ ಪರ್ಮಿಟ್‌ನ್ನು ಪಡೆಯದೇ ವಾಹನವನ್ನು ಬಳಕೆ ಮಾಡಿಕೊಂಡಿದ್ದು ಸಹ ಕಾನೂನನ್ನು ಉಲ್ಲಂಘಿಸಿ ನಿರ್ಲಕ್ಷ ತೋರಿದ್ದಾರೆ.

ಇನ್ಸೂರೆನ್ಸ್ ಕಂಪನಿಯು ಸಹ ಅಪಘಾತಗೊಳಗಾದ ವಾಹನಕ್ಕೆ ಹಳದಿ ಬೋರ್ಡ್ ಪರ್ಮಿಟ್ ಇಲ್ಲದೇ ಇರುವ ಬಗ್ಗೆ ದಾಖಲೆಗಳನ್ನು ಪರಿಶೀಲಿಸದೇ ಪಾಲಿಸಿ ವಿತರಿಸಿದ್ದು ಸಹ ಸೇವಾ ನಿರ್ಲಕ್ಷ ಆಗಿದೆ. ಹಾಗಾಗಿ ವಾಹನ ಅಪಘಾತದ ನಷ್ಟಪರಿಹಾರ ಮೊತ್ತ 1,40,000 ರೂ.ಗಳಲ್ಲಿ, 70,000 ರೂ.ಗಳನ್ನು ದೂರುದಾರರು ಕಾರು ಮಾರಾಟ ಕಂಪನಿಗೆ ಪಾವತಿಸಬೇಕು. ಉಳಿದ 70,000 ರೂ.ಗಳನ್ನು ವಾಹನ ವಿತರಕರು ಸ್ವತಃ ಭರಿಸಿಕೊಂಡು ವಾಹನ ರಿಪೇರಿ ನಂತರ ವಾಹನವನ್ನು ಮಾಲೀಕರಿಗೆ ನೀಡಬೇಕು.

ಇನ್ಸೂರೆನ್ಸ್ ಕಂಪನಿಯು ರೂ.10,000 ಪರಿಹಾರ, ಸೇವಾ ನಿರ್ಲಕ್ಷತೆಗಾಗಿ ರೂ.5,000 ಗಳನ್ನು ದೂರಿನ ವೆಚ್ಚವಾಗಿ ಅಪಘಾತಕ್ಕೀಡಾದ ಕಾರು ಮಾಲೀಕನಿಗೆ ಆದೇಶವಾದ 45 ದಿನಗಳೊಳಗೆ ಪಾವತಿಸಬೇಕು ಎಂದು ಆದೇಶಿಸಿದ್ದಾರೆ.

## ಡಾ.ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ; ವಿವಿಧ ಸಾಲ–ಸೌಲಭ್ಯಕ್ಕಾಗಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.08–ಜಿಲ್ಲಾ ಡಾ.ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ ಹಾಗೂ ಇದರ ಅಧೀನದಲ್ಲಿ ಬರುವ ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮ, ಕರ್ನಾಟಕ ಭೋವಿ ಅಭಿವೃದ್ಧಿ ನಿಗಮ, ಕರ್ನಾಟಕ ತಾಂಡಾ ಅಭಿವೃದ್ಧಿ ನಿಗಮ ಹಾಗೂ ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿ ಅಭಿವೃದ್ಧಿ ನಿಗಮ ವತಿಯಿಂದ ಪ್ರಸಕ್ತ ಸಾಲಿನಲ್ಲಿ ವಿವಿಧ ಯೋಜನೆಗಳಡಿ ಸಾಲ–ಸೌಲಭ್ಯಕ್ಕಾಗಿ ಅರ್ಹ ಫಲಾನುಭವಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

*ಯೋಜನೆಗಳು:*

ಸ್ವಯಂ ಉದ್ಯೋಗ ನೇರಸಾಲ ಯೋಜನೆ ಕಿರು ಆರ್ಥಿಕ ಚಟುವಟಿಕೆ, ಸ್ವಯಂ ಉದ್ಯೋಗ ನೇರಸಾಲ ಕುರಿಸಾಕಾಣಿಕೆ ಯೋಜನೆ, ಉದ್ಯಮಶೀಲತಾ ಅಭಿವೃದ್ಧಿ ಯೋಜನೆ, ಸ್ವಾವಲಂಭಿ ಸಾರಥಿ ಯೋಜನೆ, ಫಾಸ್ಟ್ ಫುಡ್ ಟ್ರಕ್ ಟ್ರೈಲರ್/ಮೊಬೈಲ್ ಕಿಚನ್ ಫುಡ್ ಕಿಯೋಸ್ಕ್, ಹೈನುಗಾರಿಕೆ, ಮೈಕ್ರೋ ಕ್ರೆಡಿಟ್ ಪ್ರೇರಣಾ ಯೋಜನೆ( ಮಹಿಳಾ ಸ್ವ–ಸಹಾಯ ಗುಂಪುಗಳಿಗೆ), ಗಂಗಾಕಲ್ಯಾಣ ಯೋಜನೆ, ಭೂ ಒಡೆತನ ಯೋಜನೆ.

ಆಸಕ್ತ ಅಭ್ಯರ್ಥಿಗಳು ಸೆಪ್ಟೆಂಬರ್ 10 ರೊಳಗಾಗಿ ಸೇವಾ–ಸಿಂಧು ಪೋರ್ಟಲ್‌ನ https://sevasindhu.karnataka.gov.in ಲಿಂಕ್ ಮೂಲಕ ಹತ್ತಿರದ ಗ್ರಾಮ ಒನ್, ಕರ್ನಾಟಕ ಒನ್ ಗೆ ಭೇಟಿ ನೀಡಿ ಅರ್ಜಿ ಸಲ್ಲಿಸಬಹುದು.

ಹೆಚ್ಚಿನ ಮಾಹಿತಿಗಾಗಿ ನಗರದ ಕಂಟೋನ್‌ಮೆಂಟ್ ಪ್ರದೇಶದ ಆದರ್ಶ ಕಾಲೋನಿಯ ಸೆಂಟ್ ಜೋಸೆಫ್ ಬಾಲಕರ ಶಾಲೆಯ ಎದುರುಗಡೆಯ ಡಾ.ಬಿ.ಆರ್ ಅಂಬೇಡ್ಕರ್ ಅಭಿವೃದ್ಧಿ ನಿಗಮದ ಜಿಲ್ಲಾ ಕಚೇರಿಗೆ ಸಂಪರ್ಕಿಸಬಹುದು ಎಂದು ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ತೋಟಗಾರಿಕೆ ಇಲಾಖೆ: ಮರುವಿನ್ಯಾಸಗೊಳಿಸಿದ ಹವಾಮಾನಾಧಾರಿತ ಬೆಳೆ ವಿಮೆ ನೋಂದಣಿಗೆ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.08–ತೋಟಗಾರಿಕೆ ಇಲಾಖೆವತಿಯಿಂದ 2025–26ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಮರು ವಿನ್ಯಾಸಗೊಳಿಸಿದ ಹವಾಮಾನಾಧಾರಿತ ಬೆಳೆ ವಿಮೆ ಯೋಜನೆಯಡಿ ನೋಂದಣಿ ಪ್ರಕ್ರಿಯೆ ಆರಂಭವಾಗಿದ್ದು, ರೈತರು ನೋಂದಾಯಿಸಿಕೊಳ್ಳಬೇಕು ಎಂದು ತೋಟಗಾರಿಕೆ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

ಪ್ರಕೃತಿ ವಿಕೋಪಗಳು/ಹವಾಮಾನ ವೈಪರೀತ್ಯಗಳಾದ ಅತಿವೃಷ್ಟಿ, ಅನಾವೃಷ್ಟಿ, ಬಿರುಗಾಳಿ, ಆಲಿಕಲ್ಲು ಮಳೆ, ಪ್ರವಾಹ, ಸಿಡಿಲಿನಿಂದ ಉಂಟಾಗುವ ಬೆಂಕಿ ಅವಘಡ ಇತ್ಯಾದಿ ಕಾರಣಗಳಿಂದ ಸಂಭವಿಸಬಹುದಾದ ಬೆಳೆಹಾನಿಯ ನಷ್ಟದ ಪರಿಹಾರವನ್ನು ಬೆಳೆ ವಿಮೆ ಘಟಕವಾರು ನಿರ್ಧರಿಸಿ ಬೆಳೆ ನಷ್ಟದ ಪರಿಹಾರ ನೀಡುವುದರ ಮೂಲಕ ರೈತರಿಗೆ ನೆರವಾಗುತ್ತದೆ.

ಪ್ರಸಕ್ತ ಮುಂಗಾರು ಹಂಗಾಮಿನಲ್ಲಿ ಅನುಷ್ಠಾನಗೊಳಿಸಲು ಬಳ್ಳಾರಿ, ಕುರುಗೋಡು ಮತ್ತು ಕಂಪ್ಲಿ ತಾಲ್ಲೂಕುಗಳ ಬಳ್ಳಾರಿ, ಮೋಕಾ, ರೂಪನಗುಡಿ, ಕೋಳೂರು, ಕುರುಗೋಡು ಮತ್ತು ಕಂಪ್ಲಿ ಹೋಬಳಿಯ ಎಲ್ಲಾ ಗ್ರಾಮ ಪಂಚಾಯತಿಗಳಲ್ಲಿ ಹಸಿಮೆಣಸಿನಕಾಯಿ ಮತ್ತು ದಾಳಿಂಬೆ ಬೆಳೆಯನ್ನು ಅಧಿಸೂಚಿಸಲಾಗಿದೆ.

ಬೆಳೆವಿಮೆಗೆ ನೋಂದಾಯಿಸಿಕೊಳ್ಳಲು ಆಗಸ್ಟ್ 11 ಕೊನೆಯ ದಿನ. ವಿಮಾ ಕಂಪನಿ–ಎಸ್‌ಬಿಐ ಇನ್ಸುರೆನ್ಸ್.

*ಹಸಿಮೆಣಸಿನಕಾಯಿ:* ವಿಮಾ ಮೊತ್ತ–ರೂ.71,000 (ಪ್ರತಿ ಹೆಕ್ಟೇರ್‌ಗೆ), ರೈತರು ಪಾವತಿಸಬೇಕಾದ ಪ್ರೀಮಿಯಂ ಮೊತ್ತ(ಪ್ರತಿಹೆಕ್ಟೇರ್‌ಗೆ)–ರೂ.3,550.

*ದಾಳಿಂಬೆ:* ವಿಮಾ ಮೊತ್ತ–ರೂ.1,27,000(ಪ್ರತಿ ಹೆಕ್ಟೇರ್‌ಗೆ), ರೈತರು ಪಾವತಿಸಬೇಕಾದ ಪ್ರೀಮಿಯಂ ಮೊತ್ತ(ಪ್ರತಿ ಹೆಕ್ಟೇರ್‌ಗೆ)– ರೂ.6,350 ಪಾವತಿಸಬೇಕು.

ಬೆಳೆ ಸಾಲ ಪಡೆಯುವ ಮತ್ತು ಬೆಳೆ ಸಾಲ ಪಡೆಯದ ರೈತರಿಗೆ ವಿಮಾ ಮೊತ್ತವು ಹಾಗೂ ಪಾವತಿಸಬೇಕಾದ ವಿಮಾ ಕಂತಿನ ಮೊತ್ತವು ಒಂದೇ ಆಗಿರುತ್ತದೆ. ನೋಂದಣಿ ಮಾಡಲು ಉದ್ದೇಶಿಸಿರುವ ಬೆಳೆಯು ಹಿಂದಿನ ವರ್ಷಗಳ, ಋತುಗಳ (ಮುಂಗಾರಿನ) ಬೆಳೆ ಸಮೀಕ್ಷೆಯಲ್ಲಿ ಕಂಡುಬರದಿದ್ದರೆ ನೋಂದಣಿಗೆ ಅನುಮತಿ ಇರುವುದಿಲ್ಲ.

ರೈತರು ಪ್ರಸಕ್ತ ಸಾಲಿನ ಪಹಣಿ, ಎಫ್‌ಐಡಿ ಸಂಖ್ಯೆ, ಆಧಾರ್ ಕಾರ್ಡ್ ಹಾಗೂ ಬ್ಯಾಂಕ್ ಪಾಸ್ ಪುಸ್ತಕದ ಪ್ರತಿಯೊಂದಿಗೆ ಹತ್ತಿರದ ಗ್ರಾಮ ಒನ್ ಕೇಂದ್ರ ಅಥವಾ ಬ್ಯಾಂಕ್‌ಗಳಲ್ಲಿ ಅಥವಾ ಸಿ.ಎಸ್.ಸಿ ಕೇಂದ್ರಗಳಲ್ಲಿ ವಿಮಾ ಯೋಜನೆಗೆ ನೋಂದಾಯಿಸಿಕೊಳ್ಳಬೇಕು.

ಮರು ವಿನ್ಯಾಸಗೊಳಿಸಿದ ಹವಾಮಾನ ಆಧಾರಿತ ಬೆಳೆ ವಿಮಾ ಯೋಜನೆಯನ್ನು ಅನುಷ್ಠಾನಗೊಳಿಸಲು ಬಳ್ಳಾರಿ ಜಿಲ್ಲೆಗೆ ಎಸ್.ಬಿ.ಐ ಇನ್ಸುರೆನ್ಸ್ ಕಂಪನಿಯು ವಿಮಾ ಸಂಸ್ಥೆಯಾಗಿರುತ್ತದೆ.

ಹವಾಮಾನ ಅಂಶಗಳಾದ ಮಳೆ ಪ್ರಮಾಣ, ಗಾಳಿಯ ವೇಗ, ಆರ್ದ್ರತೆ ಇತ್ಯಾದಿ ಮಾಹಿತಿಗಳನ್ನು ಸ್ಥಳೀಯವಾಗಿ ಲಭ್ಯವಿರುವ ಟೆಲಿ ಮೆಟ್ರಿಕ್ ಮಳೆಮಾಪನ ಕೇಂದ್ರಗಳಲ್ಲಿ ದಾಖಲಿಸುವ ಅಂಶಗಳ ಆಧಾರದ ಮೇಲೆ ಬೆಳೆ ವಿಮೆ ನಷ್ಟ ತೀರ್ಮಾನಿಸಲಾಗುತ್ತದೆ.

ಹೆಚ್ಚಿನ ಮಾಹಿತಿಗಾಗಿ ತೋಟಗಾರಿಕೆ ಇಲಾಖೆ ಕಚೇರಿ, ರೈತ ಸಂಪರ್ಕ ಕೇಂದ್ರದ ಅಧಿಕಾರಿ, ಸಿಬ್ಬಂದಿ ಹಾಗೂ ಹತ್ತಿರದ ಬ್ಯಾಂಕ್ ಶಾಖೆಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸರ್ಕಾರಿ ಆದರ್ಶ ವಿದ್ಯಾಲಯ; ಖಾಲಿ ಇರುವ ಸೀಟುಗಳಿಗೆ ಕೌನ್ಸೆಲಿಂಗ್

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.08–ನಗರದ ಈದ್ಗಾ ರಸ್ತೆಯ ಹಿರಾಳ್ ಕುಡಂನ ಸರ್ಕಾರಿ ಆದರ್ಶ ವಿದ್ಯಾಲಯದಲ್ಲಿ ಪ್ರಸ್ತಕ ಸಾಲಿಗೆ 6ನೇ ತರಗತಿಯಲ್ಲಿ ಖಾಲಿಯಿರುವ ಸೀಟ್ ಗಳಿಗಾಗಿ ದಾಖಲಾತಿಸಿಕೊಳ್ಳಲು ಅರ್ಹ ಮೆರಿಟ್ ಮೂಲಕ ವಿದ್ಯಾರ್ಥಿಗಳನ್ನು ಕೌನ್ಸೆಲಿಂಗ್ ಮಾಡಿ ದಾಖಲಾತಿ ಮಾಡಿಕೊಳ್ಳಲಾಗುವುದು ಎಂದು ಶಾಲೆಯ ಕುರುಗೋಡು ಪಶ್ಚಿಮ ವಲಯ ಕ್ಷೇತ್ರ ಶಿಕ್ಷಣಾಧಿಕಾರಿಗಳು ತಿಳಿಸಿದ್ದಾರೆ.

ಆ.11 ಮತ್ತು 12 ರಂದು ಸಾಮಾನ್ಯ ವರ್ಗದ ವಿದ್ಯಾರ್ಥಿಗಳ ದಾಖಲಾತಿ ಹಾಗೂ ಆ.13 ಮತ್ತು 14 ರಂದು ಮೀಸಲಾತಿ ವರ್ಗದ ದಾಖಲಾತಿ ಪ್ರಕ್ರಿಯೆ ನಡೆಯಲಿದೆ.

ಈಗಾಗಲೇ 1:30 ರ ಅನುಪಾತದ ಅರ್ಹ ಮಕ್ಕಳ ಆಯ್ಕೆ ಪಟ್ಟಿ ಪ್ರಕಟಿಸಲಾಗಿದೆ.

*ಬೇಕಾದ ದಾಖಲೆ:*

ಪ್ರವೇಶಾತಿ ಅರ್ಜಿ, ವರ್ಗಾವಣೆ ಪ್ರಮಾಣ ಪತ್ರ, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ವಿದ್ಯಾರ್ಥಿಯ ಆಧಾರ್ ಕಾರ್ಡ್, ವಿದ್ಯಾರ್ಥಿಯ ಬ್ಯಾಂಕ್‌ಪಾಸ್ ಪುಸ್ತಕ, ತಂದೆ–ತಾಯಿಯ ಆಧಾರ್ ಕಾರ್ಡ್ ಪ್ರತಿ, ಅಂಗವಿಕಲ ವಿದ್ಯಾರ್ಥಿಯಾಗಿದ್ದಲ್ಲಿ ವೈದ್ಯಕೀಯ ಪ್ರಮಾಣ ಪತ್ರ, ವಿದ್ಯಾರ್ಥಿಯ 4 ಭಾವಚಿತ್ರ, ಬೇರೆ ತಾಲ್ಲೂಕಿನ ವಿದ್ಯಾರ್ಥಿಗಳಾಗಿದ್ದಲ್ಲಿ ತಹಶೀಲ್ದಾರರಿಂದ ಪಡೆದ ವಾಸಸ್ಥಳ ಪ್ರಮಾಣ ಪತ್ರ, 5ನೇ ತರಗತಿಯ ಮೂಲ ಅಂಕಪಟ್ಟಿಯ 2 ಜೆರಾಕ್ಸ್, ಪ್ರವೇಶ ಪರೀಕ್ಷೆಯ ಹಾಲ್ ಟಿಕೆಟ್, ವಿದ್ಯಾರ್ಥಿಯ ಆರೋಗ್ಯ ಕಾರ್ಡ್, ಪಾಲಕರ ಮೊಬೈಲ್ ಸಂಖ್ಯೆ, ಪಡಿತರ ಪುಸ್ತಕದ ಜೆರಾಕ್ಸ್ ಪ್ರತಿ ಸಲ್ಲಿಸಬೇಕು.

ನಿಗದಿಪಡಿಸಿದ ದಿನದಂದು ಹಾಜರಾಗದಿದ್ದಲ್ಲಿ ಮತ್ತೊಮ್ಮೆ ಅವಕಾಶ ಇರುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ಮೊ.9449463870 ಗೆ ಸಂಪರ್ಕಿಸಬಹುದು ಎಂದು ಸರ್ಕಾರಿ ಆದರ್ಶ ವಿದ್ಯಾಲಯದ ಮುಖ್ಯಗುರುಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಚೋರನೂರು ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಡಿಹೆಚ್‌ಓ ಭೇಟಿ–ಪರಿಶೀಲನೆ

## ಗರ್ಭಾವಸ್ಥೆಯಲ್ಲಿ ಸ್ವಆರೈಕೆಯ ಬಗ್ಗೆ ಮಹಿಳೆಯರಿಗೆ ಸೂಕ್ತ ಸಂವಹನ ನೀಡಿ: ಡಾ.ಯಲ್ಲಾ ರಮೇಶ್ ಬಾಬು



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.08–ಗರ್ಭಾವಸ್ಥೆಯ ಅವಧಿಯಲ್ಲಿ ಮನೆಯಲ್ಲಿನ ಗರ್ಭಿಣಿ ಮಹಿಳೆಯರಿಗೆ ಸ್ವ–ಆರೈಕೆಯ ಕುರಿತು ಸಲಹೆ ಮತ್ತು ಸೂಕ್ತ ಸಂವಹನ ನೀಡಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿಗಳಿಗೆ ಸೂಚಿಸಿದರು.

ಗುರುವಾರ ಸಂಡೂರು ತಾಲ್ಲೂಕಿನ ಚೋರನೂರು ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ, ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮಗಳ ಕುರಿತು ಪ್ರಗತಿ ಪರಿಶೀಲನೆ ನಡೆಸಿ ಅವರು ಮಾತನಾಡಿದರು.

ತೊಡಕಿನ ಗರ್ಭಿಣಿಯರಿಗೆ ಪ್ರತಿ ತಿಂಗಳು 9ನೇ ತಾರೀಖಿನಂದು ನಡೆಯುವ ಪ್ರಧಾನ ಮಂತ್ರಿ ಸುರಕ್ಷ ಮಾತೃತ್ವ ಅಭಿಯಾನ ದಿನದಂದು ವೈದ್ಯಾಧಿಕಾರಿಗಳ ಹತ್ತಿರ ಆರೋಗ್ಯ ತಪಾಸಣೆ ಮಾಡಿಸಲು ಕಾಳಜಿ ವಹಿಸಬೇಕು ಎಂದು ತಿಳಿಸಿದರು.

ಪ್ರಸವಪೂರ್ವ ಆರೈಕೆಯಲ್ಲಿ ವೈದ್ಯಕೀಯ ಪರೀಕ್ಷೆ, ವೈದ್ಯರ ಸಲಹೆ ಮತ್ತು ಆರೋಗ್ಯ ಶಿಕ್ಷಣ ನೀಡುವ ಅವಶ್ಯಕತೆ ಇದ್ದು, ಹೆರಿಗೆಯ ಸಮಯದಲ್ಲಿ ಮತ್ತು ನಂತರ ಆರೈಕೆಯ ಬೆಂಬಲ ನೀಡಬೇಕು ಎಂದರು.

ಗರ್ಭಿಣಿಯರಿಗೆ ಯಾವುದೇ ಸಮಸ್ಯೆಗಳು ಇಲ್ಲದಿದ್ದರೂ ಸಹ ಗರ್ಭಾವಸ್ಥೆಯಲ್ಲಿ ಕನಿಷ್ಠ 4 ಬಾರಿ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ ಆರೋಗ್ಯ ತಪಾಸಣೆಯ ಜೊತೆಗೆ ವೈದ್ಯರ ಸಲಹೆಯಂತೆ ರಕ್ತಪರೀಕ್ಷೆ ಮಾಡಿಸಲು ತಿಳಿಸಬೇಕು. ಗರ್ಭಾವಸ್ಥೆಯಲ್ಲಿನ ಅಪಾಯದ ಚಿಹ್ನೆಗಳ ಬಗ್ಗೆ ತಾಯಂದಿರಿಗೆ ಅರಿವು ಮೂಡಿಸಬೇಕು. ವೈದ್ಯರ ಸಲಹೆ ಇಲ್ಲದೇ ಯಾವುದೇ ಔಷಧಿಗಳನ್ನು ತೆಗೆದುಕೊಳ್ಳಬಾರದು ಎಂದು ಸಲಹೆ ನೀಡಬೇಕು ಎಂದು ಡಿಹೆಚ್‌ಓ ಅವರು ತಿಳಿಸಿದರು.

ಮಳೆಗಾಲ ಆರಂಭದ ಹಿನ್ನಲೆಯಲ್ಲಿ ಮನೆಯ ಸುತ್ತಮುತ್ತ ನೀರು ನಿಲ್ಲದಂತೆ ಸ್ವಚ್ಛತೆ ಕಾಪಾಡಿಕೊಳ್ಳಲು ಸೂಚಿಸಬೇಕು. ನಿಂತ ನೀರಿನಲ್ಲಿ ಸೊಳ್ಳೆಗಳ ಉತ್ಪತ್ತಿಯಿಂದ ಡೆಂಗ್ಯೂ, ಚಿಕುನ್‌ಗುನ್ಯಾ ಕಾಯಿಲೆಗಳು ಹರಡುವ ಸಾಧ್ಯತೆ ಇದ್ದು, ಈ ಕುರಿತು ಸಾರ್ವಜನಿಕ ಸಮುದಾಯದಲ್ಲಿ ಜಾಗೃತಿ ಕಾರ್ಯಕ್ರಮ ನಡೆಸಬೇಕು ಎಂದು ತಿಳಿಸಿದರು.

ತಾಯಿಯ ಎದೆ ಹಾಲು ಮಗುವಿಗೆ ಅಮೃತ. ಮಗುವಿಗೆ 6 ತಿಂಗಳವರೆಗೆ ತಾಯಿಯ ಹಾಲನ್ನೇ ಕೊಡಲು ಸೂಚಿಸಬೇಕು. ಆರು ತಿಂಗಳ ನಂತರ ತಾಯಿ ಹಾಲಿನ ಜೊತೆಗೆ ಪೂರಕ ಆಹಾರ ನೀಡಲು ತಿಳಿಸಬೇಕು. ಎಲ್ಲಾ ಸರ್ಕಾರಿ ಆರೋಗ್ಯ ಕೇಂದ್ರಗಳಲ್ಲಿ ಉಚಿತವಾಗಿ ಮಾರಕ ರೋಗಗಳ ವಿರುದ್ಧದ ಲಸಿಕೆಗಳನ್ನು ನೀಡಲಾಗುತ್ತಿದ್ದು, ಮಕ್ಕಳಿಗೆ ನಿಗದಿತ ಸಮಯದಲ್ಲಿ ಎಲ್ಲಾ ಲಸಿಕೆಗಳನ್ನು ತಪ್ಪದೇ ಹಾಕಿಸುವಂತೆ ಪೋಷಕರಲ್ಲಿ ಮನವರಿಕೆ ಮಾಡಿಕೊಡಬೇಕು ಎಂದು ಹೇಳಿದರು.

ಬಳಿಕ ಡಿಹೆಚ್‌ಓ ಡಾ.ಯಲ್ಲಾ ರಮೇಶ್ ಬಾಬು ಅವರು ನಂತರ ಪ್ರಯೋಗಾಲಯ, ಐಎಲ್‌ಆರ್ ಕೊಠಡಿ ನಂತರ ವಾರ್ಡ್ಗಳಿಗೆ ಭೇಟಿ ನೀಡಿ ಸ್ವಚ್ಛತೆ ಕುರಿತು ಪರಿಶೀಲಿಸಿದರು. ನಂತರ ಸಾರ್ವಜನಿಕರ ಜೊತೆಗೆ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಸಿಗುವ ಸೌಲಭ್ಯಗಳ ಕುರಿತು ಮಾಹಿತಿ ನೀಡಿ ಸೌಲಭ್ಯ ಪಡೆದುಕೊಳ್ಳಲು ತಿಳಿಸಿದರು.

ಈ ಸಂದರ್ಭದಲ್ಲಿ ವೈದ್ಯಾಧಿಕಾರಿ ಡಾ.ಅಕ್ಷಯ್, ಡಿಎನ್‌ಓ ಗಿರೀಶ್, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಡೊಣೇಶ್ವರ, ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿ, ಆರೋಗ್ಯ ನಿರೀಕ್ಷಣಾಧಿಕಾರಿ, ಆಶಾ ಕಾರ್ಯಕರ್ತೆಯರು ಸೇರಿದಂತೆ ತಾಯಂದಿರು, ಸಾರ್ವಜನಿಕರು ಉಪಸ್ಥಿತರಿದ್ದರು.

## ಬಳ್ಳಾರಿಯಲ್ಲಿಯೇ ಮೆಗಾಡೇರಿ ನಿರ್ಮಾಣ: ರಾಘವೇಂದ್ರ ಹಿಟ್ನಾಳ್




ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.08–ಬಳ್ಳಾರಿ ಜಿಲ್ಲೆಯಲ್ಲಿಯೇ ಮೆಗಾಡೇರಿ ನಿರ್ಮಿಸಲಾಗುವುದು ಎಂದು ರಾಯಚೂರು, ಬಳ್ಳಾರಿ, ಕೊಪ್ಪಳ ಮತ್ತು ವಿಜಯನಗರ ಜಿಲ್ಲೆಗಳ ಹಾಲು ಉತ್ಪಾದಕರ ಸಹಕಾರ ಸಂಘಗಳ ಒಕ್ಕೂಟದ ನೂತನ ಅಧ್ಯಕ್ಷ ಹಾಗೂ ಶಾಸಕರಾದ ರಾಘವೇಂದ್ರ ಹಿಟ್ನಾಳ್ ಹೇಳಿದರು.

ಶುಕ್ರವಾರದಂದು ನಗರದ ಕೆಎಂಎಫ್‌ನ ಡೈರಿ ಆಡಳಿತ ಮಂಡಳಿಯ ಸಭಾಂಗಣದಲ್ಲಿ ಏರ್ಪಡಿಸಿದ್ದ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಮೆಗಾಡೇರಿ ನಿರ್ಮಾಣಕ್ಕೆ ಬಳ್ಳಾರಿ ತಾಲ್ಲೂಕಿನ ಕೊಳಗಲ್ಲು ಗ್ರಾಮದ ಬಳಿಯ 15 ಎಕರೆ ಪ್ರದೇಶವನ್ನು ಈಗಾಗಲೇ ಗುರುತಿಸಲಾಗಿದ್ದು, ಈಗಾಗಲೇ ಜಿಲ್ಲಾಡಳಿತಕ್ಕೆ ನೀಡಬೇಕಿರುವ 2.92 ಕೋಟಿ ರೂ. ಹಣ ನೀಡುವ ಬಗ್ಗೆ ನಿರ್ದೇಶಕ ಆಡಳಿತ ಮಂಡಳಿ ಸಭೆಯಲ್ಲಿ ಅನುಮೋದಿಸಲಾಗಿದೆ. ದೇಶದಲ್ಲಿಯೇ ಮಾದರಿ ಮೆಗಾಡೇರಿಯನ್ನಾಗಿ ಬಳ್ಳಾರಿಯಲ್ಲಿ ಸ್ಥಾಪಿಸಲಾಗುವುದು ಎಂದರು.

ರಾಬಕೊವಿ ವ್ಯಾಪ್ತಿಯಲ್ಲಿ ಹಾಲು ಉತ್ಪಾದನೆಗೆ ಹೆಚ್ಚಿನ ಸಹಕಾರ ನೀಡಲಾಗುವುದು. ಈಗಾಗಲೇ ಕೆಎಂಎಫ್ ಮೂಲಕ ಹೊರಗುತ್ತಿಗೆ ಆಧಾರದ ಮೇಲೆ ಪಶು ವೈದ್ಯಾಧಿಕಾರಿಗಳನ್ನು ನೇಮಿಸಿ ಜಿಲ್ಲಾವಾರು ಹಂಚಿಕೆ ಮಾಡಲಾಗಿದೆ ಎಂದರು.

ಪ್ರಸ್ತುತ ರಾಬಕೊವಿ ಜಿಲ್ಲಾ ಹಾಲು ಒಕ್ಕೂಟವು 2.43 ಲಕ್ಷ ಲೀ. ಹಾಲು ಉತ್ಪಾದನೆ ಇದೆ. ಅದರಲ್ಲಿ ಬಳ್ಳಾರಿ ಜಿಲ್ಲೆಯು 10 ಸಾವಿರ ಲೀ., ವಿಜಯನಗರ ಜಿಲ್ಲೆಯು 1.12 ಲಕ್ಷ ಲೀ., ಕೊಪ್ಪಳ ಜಿಲ್ಲೆಯು 70 ಸಾವಿರ ಲೀ ಮತ್ತು ರಾಯಚೂರು ಜಿಲ್ಲೆಯು 26 ಸಾವಿರ ಲೀ. ಉತ್ಪಾದನೆ ಇದೆ ಎಂದು ತಿಳಿಸಿದ ಅವರು, ನಾಲ್ಕು ಜಿಲ್ಲೆಗಳಲ್ಲಿ ಹಾಲಿನ ಉತ್ಪಾದನೆ ಹೆಚ್ಚಿಸಲು ಹಲವಾರು ತೀರ್ಮಾನಗಳನ್ನು ತೆಗೆದುಕೊಳ್ಳಲಾಗಿದೆ ಎಂದರು.

ರಾಬಕೋವಿ ಜಿಲ್ಲಾ ಹಾಲು ಒಕ್ಕೂಟಗಳ ಡೇರಿಗಳ ನಿರ್ವಹಣೆಗೆ ಅನುದಾನ ಮೀಸಲಿರಿಸಲಾಗಿದೆ. ಬಳ್ಳಾರಿ ಡೇರಿಗೆ 1 ಕೋಟಿ ರೂ., ಕೊಪ್ಪಳದ ಬೂದುಗುಂಪಾ ಡೇರಿಗೆ ಸುಮಾರು 4 ರಿಂದ 5 ಕೋಟಿ ರೂ. ಹಾಗೂ ರಾಯಚೂರಿಗೆ ಡೇರಿಗೆ ಕೆಕೆಆರ್‌ಡಿಬಿಯ ಮ್ಯಾಕ್ರೋ ಯೋಜನೆಯಡಿ ರೂ.10 ಕೋಟಿ ಮನವಿ ಸಲ್ಲಿಸಲಾಗಿದೆ ಎಂದರು.

ಈಗಾಗಲೇ ನಾಲ್ಕು ಜಿಲ್ಲೆಗಳಲ್ಲಿ 860 ಸೊಸೈಟಿಗಳಿವೆ. ಇದರಲ್ಲಿ ಹಲವು ಸೊಸೈಟಿಗಳು ಕಾರ್ಯನಿರ್ವಹಿಸುತ್ತಿಲ್ಲ. ಮುಂಬರುವ ದಿನಗಳಲ್ಲಿ ಪ್ರತಿ ತಾಲ್ಲೂಕಿನಲ್ಲಿ ಮೂರು ಸೊಸೈಟಿಗಳನ್ನು ಸ್ಥಾಪಿಸಲಾಗುವುದು. ಒಟ್ಟಾರೆಯಾಗಿ ಹಾಲಿನ ಉತ್ಪಾದನೆಯನ್ನು 2.43 ಲಕ್ಷ ಲೀಟರ್ ನಿಂದ 5 ಲಕ್ಷ ಲೀಟರ್ ಗೆ ಹೆಚ್ಚಿಸುವ ಗುರಿಯನ್ನು ಒಂದಲಾಗಿದೆ ಎಂದರು.

ಮೆಗಾಡೇರಿ ನಿರ್ಮಾಣದ ಕಾಮಗಾರಿಯ ಭೂಮಿಪೂಜೆ ಕಾರ್ಯ ನೆರವೇರಿಸಲು ಕ್ರಿಯಾಯೋಜನೆ ಹಂತ–ಹಂತವಾಗಿ ಕಾರ್ಯರೂಪಕ್ಕೆ ತಂದು ಬಳಿಕ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಆಹ್ವಾನಿಸಲಾಗುವುದು ಎಂದು ಇದೇ ಸಂದರ್ಭದಲ್ಲಿ ಹೇಳಿದರು.

ರಾಬಕೊವಿ ಒಕ್ಕೂಟದ ಕಚೇರಿಯಲ್ಲಿ ಮೊದಲ ಬಾರಿಗೆ ಆಡಳಿತ ಮಂಡಳಿಯ ನಿರ್ದೇಶಕರ ಸಭೆ ನಡೆಸಲಾಗಿದೆ. ರೈತರಿಗೆ ಅನುಕೂಲವಾಗುವಂತಹ ಹಲವಾರು ಅಭಿವೃದ್ಧಿದಾಯಕ ವಿಷಯಗಳನ್ನು ಚರ್ಚಿಸಲಾಗಿದೆ ಎಂದು ತಿಳಿಸಿದರು.

ಇದಕ್ಕೂ ಮುನ್ನ ಬಳ್ಳಾರಿ ಗ್ರಾಮೀಣ ಶಾಸಕ ಬಿ.ನಾಗೇಂದ್ರ, ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ, ಬಳ್ಳಾರಿ ಮಹಾನಗರ ಪಾಲಿಕೆಯ ಮೇಯರ್ ಮುಲ್ಲಂಗಿ ನಂದೀಶ್ ಸೇರಿದಂತೆ ಇತರರೊಡನೆ ಕೊಳಗಲ್ಲು ಗ್ರಾಮದಲ್ಲಿ ಮೇಗಾಡೇರಿ ಸ್ಥಾಪಿಸಲು ಗುರುತಿಸಿದ ಸ್ಥಳವನ್ನು ಪರಿಶೀಲನೆ ಮಾಡಿದರು.

ಈ ಸಂದರ್ಭದಲ್ಲಿ ರಾಯಚೂರು, ಬಳ್ಳಾರಿ, ಕೊಪ್ಪಳ ಮತ್ತು ವಿಜಯನಗರ ಜಿಲ್ಲೆಗಳ ಹಾಲು ಉತ್ಪಾದಕರ ಸಹಕಾರ ಸಂಘಗಳ ಒಕ್ಕೂಟದ ಉಪಾಧ್ಯಕ್ಷ ಕಾರಟಗಿಯ ಎನ್.ಸತ್ಯನಾರಾಯಣ, ವ್ಯವಸ್ಥಾಪಕ ನಿರ್ದೇಶಕ ಬಿ.ಆರ್.ಪ್ರಭುಶಂಕರ್ ಹಾಗೂ ಇತರರಿದ್ದರು.

ಆಯುರ್ವೇದ ಕಾಲೇಜಿನಲ್ಲಿ ಸಂಸ್ಕೃತ ಸಪ್ತಾಹ

## ಸಂಸ್ಕೃತ ಭಾಷೆ, ಸಂಸ್ಕೃತಿ, ಸಂಪ್ರದಾಯದ ಸಂಕೇತ-ಸತ್ಯನಾರಾಯಣ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.8-ಸಂಸ್ಕೃತ ಭಾಷೆ, ಸಂಸ್ಕೃತಿ ಭಾರತೀಯ ಸಂಪ್ರದಾಯಗಳ ಸಂಕೇತ ಎಂದು ಸಂಸ್ಕೃತ ಭಾರತೀಯ ಅಖಿಲ ಭಾರತೀಯ ಸಂಘಟನಾ ಮಂತ್ರಿ ಸತ್ಯನಾರಾಯಣ ಹೇಳಿದರು.

ಬಸವೇಶ್ವರ ವೀರಶೈವ ವಿದ್ಯಾವರ್ಧಕಸಂಘದಆಯುರ್ವೇದ ಮಹಾವಿದ್ಯಾಲಯ ಮತ್ತು ಆಸ್ಪತ್ರೆ ಹಾಗೂ ಸಂಹಿತಾ ಸಿದ್ದಾಂತ ಹಾಗೂ ಸಂಸ್ಕೃತ ವಿಭಾಗದ ವತಿಯಿಂದ ಮತ್ತು ಸಂಸ್ಕೃತ ಭಾರತಿ ಇವರ ಸಂಯುಕ್ತ ಆಶ್ರಯದಲ್ಲಿ ಸಂಸ್ಕೃತ ಸಪ್ತಾಹ-2025 ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಅವರು ಮಾತನಾಡಿದರು.

ಇನ್ನೋರ್ವ ಅತಿಥಿ ಕರ್ನಾಟಕ ರಾಜ್ಯ ಸಂಘಟನಾ ಮಂತ್ರಿ ಲಕ್ಷ್ಮೀನಾರಾಯಣ ಮಾತನಾಡಿ, ಸಂಸ್ಕೃತವನ್ನು ಹೇಗೆ ಪ್ರಾರಂಭಿಸಬೇಕು ಸಂಸ್ಕೃತದ ಪ್ರಚಾರ ಹಾಗೂ ಪ್ರಸಾರಕ್ಕೆ ಇರುವ ಅಗತ್ಯತೆಗಳ ಬಗ್ಗೆ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿದರು.

ಅಧ್ಯಕ್ಷತೆ ವಹಿಸಿದ್ದ ಮಹಾವಿದ್ಯಾಲಯದ ಆಡಳಿತ ಮಂಡಳಿ ಕಾರ್ಯಾಧ್ಯಕ್ಷ ಮಲ್ಲಿಕಾರ್ಜುನ ಸಾಸನೂರ ಮಾತನಾಡಿ, ಸಂಸ್ಕೃತವು ದೇವಭಾಷೆಯಾಗಿದ್ದು ಭಾರತೀಯ ಸಂಸ್ಕೃತಿ ಹಾಗೂ ಸಂಪ್ರದಾಯದ ಸಂಕೇತವಾಗಿದೆ. ಅದರ ಮೂಲಕ ಜಗತ್ತಿನ ಎಲ್ಲ ವಿಜ್ಞಾನಗಳು ಅಂತರ್ಗತವಾಗಿವೆ ಎಂದರು.

ಉತ್ತರ ಕರ್ನಾಟಕ ಪ್ರಾಂತ ಉಪಾಧ್ಯಕ್ಷರಾದ ಶಾರದಾ ಕುಲಕರ್ಣಿ, ಮಹಾವಿದ್ಯಾಲಯದ ಪ್ರಭಾರಿ ಪ್ರಾಚಾರ್ಯ ಡಾ.ಎಮ್. ಎಸ್.ಹಿರೇಮಠ ಭಾಗವಹಿಸಿದ್ದರು. ಮಹರ್ಷಿ ಪಾಣಿನಿ ಹಾಗೂ ಧನ್ವಂತರಿ ಪೂಜೆಯೊಂದಿಗೆ ಕಾರ್ಯಕ್ರಮವನ್ನು ಉದ್ಘಾಟಿಸಲಾಯಿತು. ಡಾ.ವ್ಹಿ. ಎಸ್.ಚೌಧರಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಸ್ನೇಹಾಂಕಿತ ಸ್ವಾಗತಿಸಿದರು. ಶ್ವೇತಾ ಮನಗೂಳಿ ವಂದಿಸಿದರು.

ಸಂಹಿತ ಸಿದ್ದಾಂತ ಸಂಸ್ಕೃತ ವಿಭಾಗದ ಉಪನ್ಯಾಸವೃಂದ ಬಳಗದ ಡಾ.ವಿ.ಎಸ್.ಚೌಧರಿ, ಡಾ.ಮಂಜುಳಾ ವಿ. ಕೆ, ಡಾ.ಪುನೀತ್ ಘಟಗೆ, ಡಾ.ಸ್ಮಿತಾ ನೂಲ್ವಿ, ಡಾ.ಜಿ.ಎಸ್. ಕುಲಕರ್ಣಿ, ಡಾ.ವಿ.ಎಸ್.ಹಿರೇಮಠ, ಡಾ.ಸಿ.ಆರ್.ಹೊನವಾಡ, ಹಾಗೂ ಇತರರು ಉಪಸ್ಥಿತರಿದ್ದರು.

## ರಾಷ್ಟ್ರೀಯ ಕೈಮಗ್ಗ ದಿನಾಚರಣೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.8-ಜಿಲ್ಲೆಯ ಹುನಗುಂದ ತಾಲೂಕಿನ ಕಮತಗಿ ಪಟ್ಟಣದ ಹುಚ್ಚೇಶ್ವರ ನೇಕಾರರ ಸಹಕಾರಿ ಸಂಘದಲ್ಲಿ ನೇಕಾರ ಕುಲದೇವ ಜೇಡರ ದಾಸಿಮಯ್ಯ ಅವರ ಭಾವಚಿತ್ರಕ್ಕೆ ಪುಷ್ಪಾರ್ಪಣೆ ಮಾಡುವ ಮೂಲಕ ರಾಷ್ಟ್ರೀಯ ಕೈಮಗ್ಗ ದಿನಾರಣೆಯನ್ನು ಆಚರಿಸಲಾಯಿತು.

ವೃತ್ತಿಪರ ನೇಕಾರ ನಿಂಗಪ್ಪ ಮುರಾಳ, ರಾಮಚಂದ್ರಪ್ಪ ಅಚನೂರು ಅವರನ್ನು ಸನ್ಮಾನಿಸಿ ಗೌರವಿಸಲಾಯಿತು. ಈ ಸಂದರ್ಭದಲ್ಲಿ ಹುಚ್ಚೇಶ್ವರ ನೇಕಾರರ ಸಹಕಾರಿ ಸಂಘದ ಅಧ್ಯಕ್ಷ ಈರಣ್ಣ ಜಾಪಾಳ, ಉಪಾಧ್ಯಕ್ಷ ಸೋಮಣ್ಣ ಮುಳಗುಂದ, ನಿರ್ದೇಶಕರಾದ ಈರಣ್ಣ ಬಂಡಿ, ರಿಂದಪ್ಪ ಅಚನೂರ, ಹುಚ್ಚೇಶ ಜಯ್ಯಾ, ರುದ್ರಪ್ಪ ಮತ್ತೂರ, ಹೊನ್ನಪ್ಪ ಶಿರಗುಂಪಿ ಹಾಗೂ ಹಿರಿಯರಾದ ಗುರುನಾಥ ಜಾಪಾಳ, ಅಡಿಯಪ್ಪ ಶಿರಗುಂಪಿ, ಸಂಗಪ್ಪ ಕುಮಚಗಿ, ನಾಗೇಶ ಜಯ್ಯಾ, ಶಿವಲಿಂಗಪ್ಪ ಮದ್ಲಿ ಹಾಗೂ ನೇಕಾರರು ಬಂಧುಗಳು ಉಪಸ್ಥಿತರಿದ್ದರು.

## ಜಿಲ್ಲಾ ಉಸ್ತುವಾರಿ ಸಚಿವ ಶ್ರೀ ಶರಣಬಸಪ್ಪ ದರ್ಶನಾಪೂರ ಅವರ ಜಿಲ್ಲಾ ಪ್ರವಾಸ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಆಗಸ್ಟ್ 08-: ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆಗಳ ಸಚಿವರು ಹಾಗೂ ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಶರಣಬಸಪ್ಪ ದರ್ಶನಾಪೂರ ಅವರು ಇದೇ ಆಗಸ್ಟ್ 9 ರಂದು ಜಿಲ್ಲಾ ಪ್ರವಾಸ ಕೈಗೊಳ್ಳಲಿದ್ದಾರೆ ಪ್ರವಾಸವು ಕೆಳಗಿನಂತಿದೆ ಎಂದು ಸಚಿವರ ಆಪ್ತ ಕಾರ್ಯದರ್ಶಿ ಡಾ.ಶ್ರೀಶೈಲ ಜಿ.ಬಿದರಕುಂದಿ ಅವರು ತಿಳಿಸಿದ್ದಾರೆ.

2025ರ ಆಗಸ್ಟ್ 9 ರ ಶನಿವಾರ ರಂದು ಬೆಳಿಗ್ಗೆ 10.30 ಗಂಟೆಗೆ ಶಹಾಪೂರ ಆಗಮಿಸಿ, ಗೋಗಿ ಗ್ರಾಮದಲ್ಲಿ ನೂತನವಾಗಿ ನಿರ್ಮಿಸಲಾಗಿರುವ ಗ್ರಾಮ ಪಂಚಾಯತಿಯ ಕಟ್ಟಡ ಉದ್ಘಾಟನಾ ಕಾರ್ಯಕ್ರಮದಲ್ಲಿ ಭಾಗವಹಿಸುವರು ನಂತರ ಬೆಳಿಗ್ಗೆ 11 ಗಂಟೆಗೆ ಶಹಾಪೂರ ಅರಬೋಳ ಕಲ್ಯಾಣ ಮಂಟಪದಲ್ಲಿ ಯಾದಗಿರಿ ಜಿಲ್ಲಾ ಮಟ್ಟದ ಸಂವಿಧಾನ ಜನಜಾಗೃತಿ ಸಮಾವೇಶದಲ್ಲಿ ಭಾಗವಹಿಸುವರು. ತದನಂತರ 5 ಗಂಟೆಗೆ ಕಲಬುರಗಿಗೆ ಪ್ರಯಾಣ ಬೆಳೆಸುವರು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಗ್ನಿವೀರ್ ಸೇನಾ ಭರ್ತಿಗೆ ಶಾಸಕ ಡಾ.ಶಿವರಾಜ ಎಸ್.ಪಾಟೀಲ್ ಅವರಿಂದ ಚಾಲನೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಆಗಸ್ಟ್ 08- ಆಗಸ್ಟ್ 08 ರಿಂದ ಆರಂಭವಾಗಿ ಆಗಸ್ಟ್ 26ರವರೆಗೆ ನಗರದ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದಲ್ಲಿ ನಡೆಯಲಿರುವ ಅಗ್ನಿವೀರ್ ಸೇನಾ ನೇಮಕಾತಿ ರಾಲಿಗೆ ರಾಯಚೂರ ನಗರ ಶಾಸಕರಾದ ಡಾ.ಎಸ್ ಶಿವರಾಜ ಪಾಟೀಲ್ ಅವರು ಆಗಸ್ಟ್ 8ರಂದು ಬೆಳಗ್ಗೆ ಚಾಲನೆ ನೀಡಿದರು.

ಈ ವೇಳೆ ಸೇನಾ ಅಧಿಕಾರಿಗಳು ಮತ್ತು ಅಧಿಕಾರಿಗಳನ್ನುದ್ದೇಶಿಸಿ ಮಾತನಾಡಿದ ಶಾಸಕರು, ಮಹತ್ವದ ಸೇನಾ ಭರ್ತಿಗೆ ನಮ್ಮ ರಾಯಚೂರು ನಗರವನ್ನು ಆಯ್ಕೆ ಮಾಡಿದ್ದು ಹೆಮ್ಮೆಯ ವಿಷಯ. ಸೇನಾ ಭರ್ತಿಯು ಉತ್ತಮವಾಗಿ ಆಯೋಜನೆಗೊಂಡಿತು ಎನ್ನುವ ಸಂದೇಶ ರವಾನೆಯಾಗುವ ಹಾಗೆ ಅಗ್ನಿವೀರ್ ಸೇನಾ ನೇಮಕಾತಿ ಯರ್ಾಲಿ ನಡೆಯಬೇಕು ಎಂದು ತಿಳಿಸಿದರು.

ಈಸಂದರ್ಭದಲ್ಲಿ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಪುಟ್ಟಮಾದಯ್ಯ, ಸೇನಾ ಅಧಿಕಾರಿ ಎಆರ್‌ಓ ಮನೋಜ್, ಸಹಾಯಕ ಆಯುಕ್ತರಾದ ಗಜಾನನ ಬಾಳೆ, ತಹಸೀಲ್ದಾರ ಅಮರೇಶ ಬಿರಾದಾರ, ಕೃಷ್ಣ ಶಾವಂತಗೇರಿ ಸೇರಿದಂತೆ ಇತರರು ಇದ್ದರು.

# ಸಾಂಸ್ಕೃತಿಕ, ಕ್ರೀಡಾ ಚಟುವಟಿಕೆಗಳ ಉದ್ಘಾಟನೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.8-ದೈಹಿಕ ಹಾಗೂ ಮಾನಸಿಕ ಸಾಮರ್ಥ್ಯ ಬಲಗೊಳ್ಳಲು ಕ್ರೀಡೆ ಹಾಗೂ ಸಾಂಸ್ಕೃತಿಕ ಚಟುವಟಿಕೆಗಳು ಸಹಕಾರಿಯಾಗುತ್ತವೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಜಾಸ್ಮಿನ್ ಕಿಲ್ಲೇದಾರ್ ಹೇಳಿದರು.

ಜಿಲ್ಲೆಯ ಹುನಗುಂದ ತಾಲೂಕಿನ ಕಮತಗಿ ಪಟ್ಟಣದ ಹುಚ್ಚೇಶ್ವರ ಪ್ರೌಢಶಾಲೆಯಲ್ಲಿ ಜರುಗಿದ ಸಾಂಸ್ಕೃತಿಕ ಹಾಗೂ ಕ್ರೀಡಾ ಚಟುವಟಿಕೆಗಳ ಉದ್ಘಾಟನಾ ಸಮಾರಂಭದಲ್ಲಿ ಅವರು ಮಾತನಾಡಿ, ಕಲಿಕೆಯಲ್ಲಿ ಏಕಾಗ್ರತೆ ಮೂಡಲು ಕ್ರೀಡೆ ಹಾಗೂ ಸಾಂಸ್ಕೃತಿಕ ಚಟುವಟಿಕೆಗಳು ಪ್ರಮುಖವಾಗಿವೆ ಎಂದರು.

ವಿದ್ಯಾರ್ಥಿಗಳು ಸತತ ಅಧ್ಯಯನದೊಂದಿಗೆ ಉತ್ತಮ ಅಂಕ ಗಳಿಸುವತ್ತ ಗಮನಹರಿಸಬೇಕು. ಪರಿಶ್ರಮದಿಂದ ಅಧ್ಯಯನ ಮಾಡಿದರೆ ಉತ್ತಮ ಭವಿಷ್ಯ ರೂಪಿಸಿಕೊಳ್ಳಬಹುದು ಎಂದು ಜಾಸ್ಮಿನ್ ಕಿಲ್ಲೇದಾರ ಹೇಳಿದರು.

ನಿವೃತ್ತ ಪ್ರಾಚಾರ್ಯ ಬಾಲಚಂದ್ರ ಹೊಸಗೌಡ್ರ ಹಾಗೂ ಉಪನ್ಯಾಸಕ ಜಗದೀಶ ಮೂಗನೂರ, ನಿವೃತ್ತ ಮುಖ್ಯಶಿಕ್ಷಕ ಎಸ್.ವಿ.ಶೆಟ್ಟರ ಮಾತನಾಡಿದರು. ಎಸ್.ಎಂ.ಕಂಬಾಳಿಮಠ ಹಾಗೂ ಎಸ್.ವ್ಹಿ.ಶೆಟ್ಟರ ಅವರನ್ನು ಸನ್ಮಾನಿಸಲಾಯಿತು.

ಸಂಘದ ಅಧ್ಯಕ್ಷರಾದ ಹುಚ್ಚೇಶ್ವರ ಸ್ವಾಮೀಜಿ ಸಾನಿಧ್ಯ ವಹಿಸಿದ್ದರು. ಸಹ ಕಾರ್ಯದರ್ಶಿ ವಿದ್ಯಾಧರ ಮಳ್ಳಿ, ನಿರ್ದೇಶಕರಾದ ಎಂ.ಬಿ.ಶಾಬಾದಿ, ಎಸ್.ಜಿ.ಗುರಿಕಾರ, ಮುಖ್ಯೋಪಾಧ್ಯಾಯ ಎಚ್. ಎಂ.ಪಾಟೀಲ, ಆಡಳಿತಾಧಿಕಾರಿ ಎ.ಎಸ್.ಕಲ್ಯಾಣಶೆಟ್ಟಿ ಇದ್ದರು. ದೀಪಾ ನವಲಗುಂದ ಪರಿಚಯಿಸಿದರು. ಸ್ನೇಹಾ ವಡ್ಡಟ್ಟಿ ಹಾಗೂ ಎಚ್. ವೈ.ಕೊತ್ತಲ ನಿರೂಪಿಸಿದರು.

## ಜಿಲ್ಲಾಧಿಕಾರಿಗಳು ದಿಡೀರನೆ ಆಗ್ರೋಗಳಿಗೆ ಭೇಟಿ

ಮಲ್ಲಮ್ಮ ನುಡಿ ವಾರ್ತೆ

ಶಹಾಪುರ: ನಗರದ ಕನಕ ಆಗ್ರೋ ಏಜೆನ್ಸಿ ನಾಗಟಗಿ ಅವರು ರಸಗೊಬ್ಬರ ನಿಯಂತ್ರಣ ಕಾಯ್ದೆ ನಿಯಮಾವಳಿಗಳನ್ನು ಉಲ್ಲಂಘಿಸಿದ್ದರಿಂದ ನಿನ್ನೆ ಗುರುವಾರ ಮಳಿಗೆ ರಸಗೊಬ್ಬರ ಪರವಾನಿಗೆ ಅಮಾನತ್ತುಗೊಳಿಸಿದೆ ಎಂದು ಸಹಾಯಕ ಕೃಷಿ ನಿರ್ದೇಶಕರು ಹಾಗೂ ರಸಗೊಬ್ಬರ ಪರವಾನಿಗೆ ಪ್ರಾಧಿಕಾರದ ಅಧಿಕಾರಿ ಸುನಿಲಕುಮಾರ ಯರಗೋಳ ಅವರು ಅಮಾನತ್ತುಗೊಳಿಸಿದ್ದಾರೆ. ಆರ್ ಸಿಎಫ್ ಕಂಪನಿಯ ಯೂರಿಯಾ ಗೊಬ್ಬರದ 400 ಚೀಲಗಳನ್ನು ರೈತರಿಗೆ ವಿತರಿಸಲು ಹಂಚಿಕೆ ಮಾಡಲಾಗಿತ್ತು. ಮಳಿಗೆ ಮಾಲೀಕರಿಗೆ ಸಾಕಷ್ಟು ಬಾರಿ ವಿತರಣೆ ಮಾಡಲು ಸೂಚಿಸಿದ್ದರು ಸಹ ತಮ್ಮ ದಾಸ್ತಾನು ಬಿಟ್ಟು ಬೇರೆ ಕಡೆ ಸ್ಥಳಾಂತರ ಮಾಡಿ ಕೃತಕ ಅಭಾವ ಸೃಷ್ಟಿ ಮಾಡಿದ್ದು ಮೇಲ್ನೋಟಕ್ಕೆ ಕಂಡು ಬಂದಿರುತ್ತದೆ ಎಂದು ಅಮಾನತ್ತಿನ ಆದೇಶದಲ್ಲಿ ಸ್ಪಷ್ಟಪಡಿಸಿದ್ದಾರೆ. ಹೆಚ್ಚಿನ ದರಲ್ಲಿ ಮಾರಾಟ ನಗರದ ನಗರೇಶ್ವರ ಅಗ್ರೋ ಏಜೆನ್ಸಿ ಅವರ ಗೋದಾಮಿಗೆ (ಜು.30) ರಂದು ಭೇಟಿ ನೀಡಿ ರೈತರನ್ನು ವಿಚಾರಿಸಿದಾಗ ಹೆಚ್ಚಿನ ಬೆಲೆಗೆ ಯೂರಿಯಾ ಮಾರಾಟ ಹಾಗೂ ಬಿಲ್ ನೀಡಿರುವುದಿಲ್ಲ ಮೇಲ್ನೋಟಕ್ಕೆ ಕಂಡು ಬಂದಿರುತ್ತದೆ. ಕೃಷಿ ಅಧಿಕಾರಿಯ ಶಿಫಾರಸಿನಂತೆ ನಗರೇಶ್ವರ ಅಗ್ರೋ ಏಜೆನ್ಸಿಯ ರಸಗೊಬ್ಬರ ಪರವಾನಿಗೆ ಅಮಾನತ್ತುಗೊಳಿಸಿದೆ ಎಂದು ಸಹಾಯಕ ಕೃಷಿ ನಿರ್ದೇಶಕರು ಹಾಗೂ ರಸಗೊಬ್ಬರ ಪರವಾನಿಗೆ ಪ್ರಾಧಿಕಾರದ ಅಧಿಕಾರಿ ಸುನಿಲಕುಮಾರ ಯರಗೋಳ ಅವರು ನೀಡಿದ ಅಮಾನತ್ತು ಆದೇಶದಲ್ಲಿ ತಿಳಿಸಿದ್ದಾರೆ. ನಗರದ ವಿಜಯ ಆಗ್ರೋ, ಸಂಗಮೇಶ್ವರ ಆಗ್ರೋ ಮರಡಿ ಮಲ್ಲಿಕಾರ್ಜುನ ಸೇರಿದಂತೆ ನಗರದ ವಿಜಯ ಆಗ್ರೋ ಸಂಗಮೇಶ್ವರ ಆಗ್ರೋ ಮರಡಿ ಮಲ್ಲಿಕಾರ್ಜುನ ಸೇರಿದಂತೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.



ಸಗಮಕುಂಟಾ, ಇಬ್ರಾಹಿಂದೊಡ್ಡಿ, ಕೊರ್ತಕುಂದ, ಮಾಮಡದೊಡ್ಡಿ, ಯರಗುಂಟಾ, ವಡ್ಡೆಪಲ್ಲಿ

## ಗ್ರಾಮಗಳಲ್ಲಿ ನಾನಾ ಅಭಿವೃದ್ಧಿ ಕಾಮಗಾರಿಗಳಿಗೆ ಶಾಸಕರಾದ ಬಸನಗೌಡ ದದ್ದಲ್ ಚಾಲನೆ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಆಗಸ್ಟ್ 08: ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್ ಅವರು ಆಗಸ್ಟ್ 8ರಂದು ರಾಯಚೂರ ಗ್ರಾಮೀಣ ಕ್ಷೇತ್ರದ ವ್ಯಾಪ್ತಿಯ ಸಗಮಕುಂಟಾ, ಇಬ್ರಾಹಿಂದೊಡ್ಡಿ, ಕೊರ್ತಕುಂದ, ಮಾಮಡದೊಡ್ಡಿ, ಯರಗುಂಟಾ, ವಡ್ಡೆಪಲ್ಲಿ ಗ್ರಾಮಗಳಲ್ಲಿ ಸಂಚರಿಸಿ ನಾನಾ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಿದರು. ಸಗಮಕುಂಟಾ ಗ್ರಾಮದಲ್ಲಿ ಮುಖ್ಯಮಂತ್ರಿಗಳ ವಿಶೇಷ ಅನುದಾನದಡಿಯಲ್ಲಿ ಶ್ರೀ ಆಂಜನೇಯ್ಯ ದೇವಸ್ಥಾನ, ಶ್ರೀ ಕರೆಮ್ಮ ಗುಡಿ ನಿರ್ಮಾಣ ಕಾಮಗಾರಿಗೆ ಚಾಲನೆ ನೀಡಿದರು.

ಇಬ್ರಾಹಿಂದೊಡ್ಡಿ ಗ್ರಾಮದಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ ಮ್ಯಾಕ್ರೋ ಯೋಜನೆಯಡಿ ಗ್ರಂಥಾಲಯ ಕಟ್ಟಡ ನಿರ್ಮಾಣ ಕಾಮಗಾರಿಗೆ ಚಾಲನೆ ನೀಡಿದರು. ಜೊತೆಗೆ

ಮುಖ್ಯಮಂತ್ರಿಗಳ ವಿಶೇಷ ಅನುದಾನದಡಿಯಲ್ಲಿ ಶ್ರೀ ಆಂಜನೇಯ್ಯ ದೇವಸ್ಥಾನ, ಶ್ರೀ ಮಾರೆಮ್ಮ ಗುಡಿ ನಿರ್ಮಾಣ ಕಾಮಗಾರಿಗೆ ಚಾಲನೆ ನೀಡಿದರು.

ಕೊರ್ತಕುಂದ ಗ್ರಾಮದಲ್ಲಿ ಮುಖ್ಯಮಂತ್ರಿಗಳ ವಿಶೇಷ ಅನುದಾನದಡಿಯಲ್ಲಿ ಶ್ರೀ ಆಂಜನೇಯ್ಯ ದೇವಸ್ಥಾನ ಕಾಮಗಾರಿಗೆ ಮತ್ತು ಅಭಿವೃದ್ಧಿ ಆರಾಧನಾ ಯೋಜನೆಯಡಿ ಶ್ರೀ ಬೆಟ್ಟದ ಮಲ್ಲಿಕಾರ್ಜುನ ದೇವಸ್ಥಾನ ಅಭಿವೃದ್ಧಿ ಕಾಮಗಾರಿಗೆ ಚಾಲನೆ ನೀಡಿದರು. ಯರಗುಂಟಾ ಗ್ರಾಮದಲ್ಲಿ ಮುಖ್ಯಮಂತ್ರಿಗಳ ವಿಶೇಷ ಅನುದಾನದಡಿಯಲ್ಲಿ ಶ್ರೀ ಆಂಜನೇಯ್ಯ ದೇವಸ್ಥಾನ ಅಭಿವೃದ್ಧಿಗೆ ಚಾಲನೆ ನೀಡಿದರು.

ಮಾಮಡದೊಡ್ಡಿ ಗ್ರಾಮದಲ್ಲಿ ಮುಖ್ಯಮಂತ್ರಿಗಳ ವಿಶೇಷ ಅನುದಾನದಡಿಯಲ್ಲಿ ಶ್ರೀ ಆಂಜನೇಯ ದೇವಸ್ಥಾನ ಅಭಿವೃದ್ಧಿಗೆ ಮತ್ತು ವಡ್ಡೆಪಲ್ಲಿ ಗ್ರಾಮದಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ

ಮ್ಯಾಕ್ರೋ ಯೋಜನೆಯಡಿ ಗ್ರಂಥಾಲಯ ಕಟ್ಟಡ ನಿರ್ಮಾಣ ಕಾಮಗಾರಿಗೆ ಜೊತೆಗೆ ಸಮುದಾಯ ಭವನ ನಿರ್ಮಾಣ ಕಾಮಗಾರಿಗೆ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ದೇವಸೂಗುರ ಬ್ಲಾಕ್ ಅಧ್ಯಕ್ಷರು, ಸಗಮಕುಂಟಾ, ಇಬ್ರಾಹಿಂದೊಡ್ಡಿ, ಕೊರ್ತಕುಂದ, ಮಾಮಡದೊಡ್ಡಿ, ಯರಗುಂಟಾ, ವಡ್ಡೆಪಲ್ಲಿ ಗ್ರಾಮಗಳ ಹಿರಿಯ ಮುಖಂಡರು, ಸುತ್ತಲಿನ ಗ್ರಾಮಗಳ ಹಿರಿಯ ಮುಖಂಡರು, ನಾಮನಿರ್ದೇಶನ ಸದಸ್ಯರು, ಅಧಿಕಾರಿಗಳು ಗ್ರಾಮ ಪಂಚಾಯತ್ ಅಧ್ಯಕ್ಷರು ಹಾಗೂ ಸದಸ್ಯರುಗಳು ಮತ್ತು ಕಾರ್ಯಕರ್ತರು ಉಪಸ್ಥಿತರಿದ್ದರು.

# 'ನುಡಿಗನ್ನಡಿ' ಪುಸ್ತಕಕ್ಕೆ ಪ್ರಶಸ್ತಿ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.8-ಜಿಲ್ಲೆಯ ಇಲಕಲ್ಲದ ವಿಜಯಮಹಾಂತೇಶ ಮಠದಿಂದ ಪೂಜ್ಯ ವಿಜಯ ಮಹಾಂತಶಿವಯೋಗಿಗಳವರ ಮತ್ತು ಡಾ.ಮಹಾಂತ ಶಿವಯೋಗಿಗಳವರ ಶರಣ ಸಂಸ್ಕೃತಿ ಮಹೋತ್ಸವದ ಅಂಗವಾಗಿ ಕೊಡಮಾಡುವ ಲಿಂಗವಂತ ಧರ್ಮ ಗ್ರಂಥ ಬಹುಮಾನಕ್ಕೆ ಈ ವರ್ಷ ಡಾ.ಮುರ್ತುಜಾ ಒಂಟಿ 'ನುಡಿಗನ್ನಡಿ' ಪುಸ್ತಕ ಆಯ್ಕೆಯಾಗಿದೆ.

ವೃತ್ತಿಯಿಂದ ಕನ್ನಡ ಪ್ರಾಧ್ಯಾಪಕರಾಗಿರುವ ಒಂಟಿಯವರು ಪ್ರವೃತ್ತಿಯಿಂದ ಲೇಖಕರು. ಉತ್ತಮ ವಾಗ್ಮಿಗಳಾದ ಅವರು 8 ಸ್ವತಂತ್ರ ಕೃತಿಗಳನ್ನು, 15 ಕ್ಕೂ ಹೆಚ್ಚು ಸಂಪಾದನಾ ಗ್ರಂಥಗಳನ್ನು ಪ್ರಕಟಿಸಿದ್ದಾರೆ. ಹಲವಾರು ಪ್ರಶಸ್ತಿಗಳಿಗೆ ಒಂಟಿ ಭಾಜನರಾಗಿದ್ದಾರೆ.

ಡಾ.ಮುರ್ತುಜಾ ಒಂಟಿ ಅವರಿಗೆ ಶ್ರೀಮಠದಲ್ಲಿ ಆಗಸ್ಟ್ 10 ರಂದು




ನಡೆಯುವ ಸಮಾರಂಭದಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಗುವುದು.

## ಸಕಲರ ಲೇಸು ಬಯಸಿ ಉದಯಿಸಿದ್ದು ಶರಣ ಧರ್ಮ-ಭೋವಿ ಶ್ರೀಗಳು

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.8-ಸಕಲ ಜೀವಾತ್ಮದ ಲೇಸು ಬಯಸಿ ಉದಯಸಿದ್ದು ಶರಣ ಧರ್ಮ. ಉನ್ನತ ತತ್ವ, ಸಿದ್ಧಾಂತ, ಆದರ್ಶಗಳ ಸಂಗಮ. ಅರಿವು, ಆಚಾರ, ಅನುಭಾವ, ಕಾಯಕ, ದಾಸೋಹ ಇದರ ಪ್ರಾಣಜೀವಾಳ ಎಂದು ಭೋವಿ ಗುರುಪೀಠದ ಇಮ್ಮಡಿ ಸಿದ್ಧರಾಮೇಶ್ವರ ಸ್ವಾಮೀಜಿ ಹೇಳಿದರು.



ನವನಗರದ ಚಂದ್ರಾದೇವಿ ಭೋವಿ-ವಡ್ಡರ್ ಸಮಾಜ ಕ್ಷೇಮಾಭಿವೃದ್ಧಿ ಸಂಘದಿಂದ ಗುರುವಾರ ಹಮ್ಮಿಕೊಂಡ ಚಂದ್ರಾದೇವಿ, ದುರ್ಗಾದೇವಿ, ವಿನಾಯಕ, ಹಾಗೂ ಮಾರುತಿ ದೇವಾಲಯಗಳ ಜಾತ್ರಾಮಹೋತ್ಸವದ ಸಾನ್ನಿಧ್ಯವಹಿಸಿ ಮಾತನಾಡಿದ ಅವರು, ಆಹಾರವನ್ನು ಯಾರು ನಿರ್ದಿಷ್ಟ ಸಮಯ, ನಿರ್ದಿಷ್ಟ ಪ್ರಮಾಣದಲ್ಲಿ ಸೇವಿಸುವರೋ ಅವರ ದೇಹ ಮತ್ತು ಮನಸ್ಸು ಆರೋಗ್ಯದಿಂದ ಇರುತ್ತವೆ ಎಂದರು.

ದೇಶದಲ್ಲಿ ಉತ್ತಮ ಆಹಾರದ ಕೊರತೆ ತುಂಬಾ ಹೆಚ್ಚಾಗಿದೆ ಎಂದು ಕಳವಳ ವ್ಯಕ್ತಪಡಿಸಿದ ಶ್ರೀಗಳು, ಕೆಲವರಿಗೆ ಉಣ್ಣುವುದೊಂದೇ ಜೀವನದ ಗುರಿಯಾಗಿದೆ. ತಿನ್ನುವುದಕ್ಕಾಗಿ ಬದುಕದೇ, ಬದುಕುವುದಕ್ಕಾಗಿ ಉಣ್ಣಬೇಕಾಗಿದೆ ಎಂದು ಹೇಳಿದರು.

ನಮ್ಮ ರಾಷ್ಟದಲ್ಲಿ ನೈಸರ್ಗಿಕ ಸಂಪನ್ಮೂಲಗಳಿಗೆ ಕೊರತೆ ಇರದಿದ್ದರೂ, ಪರರಾಷ್ಟಗಳ ಬಳಿ ಸಾಲಕ್ಕಾಗಿ ಕೈಯೊಡ್ಡುವಸ್ಥಿತಿಯಲ್ಲಿದ್ದೇವೆ. ರಾಷ್ಟವನ್ನು ಆರ್ಥಿಕ, ಆಧ್ಯಾತ್ಮಿಕ ದಿವ್ಯರಾಷ್ಟವನ್ನಾಗಿ ರೂಪಿಸಬೇಕಾಗಿದೆ ಎಂದು ಇಮ್ಮಡಿ ಸಿದ್ದರಾಮೇಶ್ವರ ಶ್ರೀಗಳು ಹೇಳಿದರು.

ಮಸ್ಕಿಯ ಇರಕಲ್ ಮಠದ ಬಸವ ಪ್ರಸಾದ ಶ್ರೀಗಳು ಮಾತನಾಡಿ, ಸೇವಿಸುವ ಅನ್ನವಷ್ಟೇ ಪ್ರಸಾದವಲ್ಲ, ಪಡೆವ ಜ್ಞಾನವೂ ಪ್ರಸಾದವೇ. ಅದಕ್ಕಾಗಿಯೇ ಪ್ರಸಾದವನ್ನು ಕ್ರಿಯಾ ಪ್ರಸಾದ, ಜ್ಞಾನ ಪ್ರಸಾದ ಹಾಗೂ ಭಾವ ಪ್ರಸಾದವೆಂದು ವಿಂಗಡಿಸಲಾಗಿದೆ. ಅನ್ನಪ್ರಸಾದವು ತನುವಿನ ಹಸುವನ್ನು ನೀಗಿಸಿ ಚಿತ್ತವೃತ್ತಿಗಳನ್ನು ತೃಪ್ತಿಗೊಳಿಸಿದರೆ, ಜ್ಞಾನ ಪ್ರಸಾದವು ಭ್ರಮೆ ಹಾಗೂ ಅಜ್ಞಾನಗಳನ್ನು ಹೋಗಲಾಡಿಸಿ ಬುದ್ಧಿ ಪ್ರಖರಗೊಳಿಸುತ್ತದೆ ಎಂದರು.

ಸಂಘದ ಅಧ್ಯಕ್ಷ ಯಲ್ಲಪ್ಪ ಪಾತ್ರೋಟಿ, ಸಿದ್ಧರಾಮಪ್ಪ ಪಾತ್ರೋಟ, ರಾಮಚಂದ್ರ ಮುಧೋಳ, ರಾಜು ಮಾಡಲಗೇರಿ, ಪ್ರಕಾಶ ವಡ್ಡರ, ಮಲ್ಲಿಕಾರ್ಜುನ ಪಾತ್ರೋಟ ಮತ್ತಿತರರು ಇದ್ದರು.

## ಆಗಸ್ಟ್ 12ರಂದು ಲಿಂಗಸುಗೂರಿನಲ್ಲಿ ತಾಲೂಕು ಮಟ್ಟದ ದಸರಾ ಕ್ರೀಡಾಕೂಟ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಆಗಸ್ಟ್ 08 -ಪ್ರತಿ ವರ್ಷದಂತೆ ಈ ವರ್ಷವೂ ಕೂಡ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಇಲಾಖೆ ರಾಯಚೂರು ಇವರ ಸಂಯುಕ್ತಾಶ್ರಯದಲ್ಲಿ 2025-26ನೇ ಸಾಲಿನ ಪುರುಷರು ಹಾಗೂ ಮಹಿಳೆಯರಿಗಾಗಿ ಲಿಂಗಸೂಗೂರು ತಾಲ್ಲೂಕಿನಲ್ಲಿ ತಾಲ್ಲೂಕು ಮಟ್ಟದ ದಸರಾ ಕ್ರೀಡಾಕೂಟದ ಆಯ್ಕೆ ಪ್ರಕ್ರಿಯೆಯನ್ನು ಹಮ್ಮಿಕೊಳ್ಳಲಾಗಿದೆ.

ದಸರಾ ಕ್ರೀಡಾಕೂಟವು ಆಗಸ್ಟ್ 12ರ ಬೆಳಿಗ್ಗೆ 9ಗಂ-ಟೆಗೆ ಲಿಂಗಸುಗೂರು ತಾಲೂಕು ಹೊರಾಂಗಣ ಕ್ರೀಡಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.

ತಾಲ್ಲೂಕ ಮಟ್ಟದ ಆಯ್ಕೆಯಲ್ಲಿ ಭಾಗವಹಿಸುವ ಕ್ರೀಡಾಪಟುಗಳಿಗೆ ಯಾವುದೇ ರೀತಿಯ ಪ್ರಯಾಣ ಭತ್ಯೆ ಹಾಗೂ ದಿನಭತ್ಯೆ ನೀಡುವುದಿಲ್ಲ. ತಾಲ್ಲೂಕ ಮಟ್ಟದಲ್ಲಿ ವಿಜೇತರಾಗಿ ಜಿಲ್ಲಾ ಮಟ್ಟದಲ್ಲಿ ಭಾಗವಹಿಸುವ ಪುರುಷ ಕ್ರೀಡಾಪಟುಗಳಿಗೆ ಮಾತ್ರ ಪ್ರಯಾಣ ಭತ್ಯೆ ಹಾಗೂ ದಿನಭತ್ಯೆಯನ್ನು ಖಜಾನೆ-2ರ ಮೂಲಕ ಕ್ರೀಡಾಪಟುಗಳ ಬ್ಯಾಂಕ್ ಖಾತೆಗೆ ನೇರವಾಗಿ ವರ್ಗಾಯಿಸಲಾಗುವುದು. ಪ್ರತೀ ವಿಜೇತ ಕ್ರೀಡಾಪಟುಗಳು ಆಧಾರ್ ಕಾರ್ಡ್ ವೈಯಕ್ತಿಕ ಹಾಗೂ ಗುಂಪು ತಂಡ ವಿವರ ಹಾಗೂ ತಂಡದ ನಾಯಕರ ಬ್ಯಾಂಕ್ ಪಾಸ್ ಬುಕ್ ಝರಾಕ್ಸ್ ಪ್ರತಿ ಹಾಗೂ ಮೊಬೈಲ್ ನಂಬರ್ ಅನ್ನು ಕಡ್ಡಾಯವಾಗಿ ನೊಂದಾವಣೆ ರಜಿಸ್ಟರ್‌ನಲ್ಲಿ ಒದಗಿಸತಕ್ಕದ್ದು, ಸಲ್ಲಿಸದೇ ಇರುವ ಕ್ರೀಡಾಪಟುಗಳು ಪ್ರಯಾಣ ಭತ್ಯೆ ಹಾಗೂ ದಿನಭತ್ಯೆ ಪಾವತಿ ಮಾಡಲಾಗುವುದಿಲ್ಲ. ಅದಕ್ಕೆ ತಾವೇ ನೇರ ಹೊಣೆಗಾರರು. ಯಾವುದೇ ರೀತಿಯ ನಗದು ಹಣ ನೀಡುವುದಿಲ್ಲ. ವಿಶೇಷ ಸೂಚನೆ ಸರ್ಕಾರದ ಶಕ್ತಿ ಯೋಜನೆ ಜಾರಿಯಲ್ಲಿರುವುದರಿಂದ ಮಹಿಳಾ ಕ್ರೀಡಾಪಟುಗಳಿಗೆ ಪ್ರಯಾಣ ಭತ್ಯೆಯನ್ನು




ಪಾವತಿ ಮಾಡಲಾಗುವುದಿಲ್ಲ.

ಹೆಚ್ಚಿನ ಮಾಹಿತಿಗಾಗಿ ದಸರಾ ಕ್ರೀಡಾಕೂಟದ ಸಂಘಟಕರಾದ ಸುನೀಲ್ ಮೊಬೈಲ್ ಸಂಖ್ಯೆ: 8971828923ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


**PAPER PUBLICATION**

**IN THE COURT OF SENIOR CIVIL JUDGE AT HUMNABAD**

**O.S No.181/2023**

Plaintiffs : Sonamma

**//Vs//**

Defendants : Shanker and others

Sub:-Suit for partition and separate possession.

To,

D 1- Shankar S/o Nagappa Age: 55 years, Occu: Agriculture, R/o Chidri Tq.Bidar.

Whereas, the plaintiff have filed the suit against the defendants for suit for declaration etc have taken steps your appearance in the proceeding several times but summons could not be served.

Therefore you are hereby summoned to appear before this Hon'ble court in person or through your pleader duly instructed and able to answer all material questions relating to the claim of the plaintiff on the day of 15- 09-2025 at 10.30 AM answer the claim of the plaintiff and you are directed to produce all such documents upon which you intend to rely in support of your defense.

Take notice that in default of your appearance on the day before mentioned the suit will be heard and determined in your absence.

Given under my hand and the seal of the court, on 02nd day of August-2025.

**//By order of the Court//**

**C.M.O**

**Senior Civil Judge & JMFC Court**

**Humnabad**

# ರಾಹುಲ್ ಗಾಂಧಿಯದ್ದು ಆಟಂ ಬಾಂಬ್ ಅಲ್ಲ, ಟುಸ್ ಪಟಾಕಿ: ಆರ್.ಅಶೋಕ್

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಅ.8: ಮತದಾರರ ಪಟ್ಟಿ ತಯಾರಿಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅಥವಾ ಬಿಜೆಪಿ ನಾಯಕರ ಪಾತ್ರವೇ ಇಲ್ಲ. ಇದನ್ನು ಅಧಿಕಾರಿಗಳೇ ತಯಾರು ಮಾಡುತ್ತಾರೆ. ಹೀಗಾಗಿ ರಾಹುಲ್ ಗಾಂಧಿಯದ್ದು ಆಟಂ ಬಾಂಬ್ ಅಲ್ಲ. ಹೊಸೂರಿನಲ್ಲಿ ತಯಾರಾದ ಹಳೇ ಟುಸ್ ಪಟಾಕಿಯಾಗಿದೆ ಅಂತ ವಿಪಕ್ಷ ನಾಯಕ ಅಶೋಕ್ ಲೇವಡಿ ಮಾಡಿದ್ದಾರೆ.ರಾಹುಲ್ ಗಾಂಧಿ ಪ್ರತಿಭಟನೆ ನಡೆಸಿದ ವಿಚಾರಕ್ಕೆ ವಿಧಾನಸೌಧದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ರಾಹುಲ್ ಗಾಂಧಿ ಬಾಂಬ್ ಹಾಕಿಲ್ಲ. ಅದು ಟುಸ್ ಪಟಾಕಿಯಾಗಿದೆ. ರಾಜ್ಯದಲ್ಲಿ ನಡೆದ ಲೋಕಸಭಾ ಚುನಾವಣೆಯಲ್ಲಿ ಪ್ರತಿ ಬೂತ್‌ಗೆ ಬಿಎಲ್‌ಎಗಳನ್ನು (ಬೂತ್ ಲೆವೆಲ್ ಏಜೆಂಟ್) ಕಾಂಗ್ರೆಸ್ ನೀಡಿದೆ. ಮತದಾರರ ಪಟ್ಟಿಯ ಮೊದಲ ಪ್ರತಿಯನ್ನು ಬಿಎಲ್‌ಎಗೆ ನೀಡಲಾಗುತ್ತದೆ. ಅವರನ್ನು ಕೆಪಿಸಿಸಿ ಅಧ್ಯಕ್ಷ ಡಿ.ಕೆ ಶಿವಕುಮಾರ್ ಅವರೇ ನೇಮಿಸಿದ್ದಾರೆ. ಮತದಾರರ ಪಟ್ಟಿಯಲ್ಲಿ ಸತ್ತವರ ಹೆಸರು ತೆಗೆದುಹಾಕುವುದು, ಹೊಸಬರನ್ನು ಸೇರಿಸುವುದು ಮೊದಲಾದ ಕೆಲಸವನ್ನು ಬಿಎಲ್‌ಎ ಮಾಡುತ್ತಾರೆ. ಇಂತಹ ಬಿಎಲ್‌ಎಗಳನ್ನು ನೇಮಿಸಿದ ಕಾಂಗ್ರೆಸ್ ಏನು ತಪ್ಪು ಮಾಡಿಲ್ಲವೇ? ಎಂದು ಪ್ರಶ್ನೆ ಮಾಡಿದರು. ಡಿ.ಕೆ.ಶಿವಕುಮಾರ್ ಅವರ ಬಳಿಯೇ ಮತದಾರರ ಪಟ್ಟಿ ಇದ್ದಾಗ, ಆಗಲೇ ಅಕ್ರಮದ ಬಗ್ಗೆ ದೂರು ನೀಡಬೇಕಿತ್ತು. ಇದರಲ್ಲಿ ಪ್ರಧಾನಿ ನರೇಂದ್ರ ಮೋದಿಯವರ ಪಾತ್ರವೇ ಇಲ್ಲ. ಅಥವಾ ಬಿಜೆಪಿ ನಾಯಕರ ಪಾತ್ರವೇ ಇಲ್ಲ. ಪಂಚಾಯಿತಿ ಕಾರ್ಯದರ್ಶಿ,



ಅಂಚೆಯವರು, ತೆರಿಗೆ ಸಂಗ್ರಹ ಮಾಡುವವರು, ಆರೋಗ್ಯ ಸಿಬ್ಬಂದಿ ಹೀಗೆ ಇವರೆಲ್ಲರೂ ಮತದಾರರ ಪಟ್ಟಿಗೆ ತಯಾರಿಯಲ್ಲಿ ಭಾಗವಹಿಸುತ್ತಾರೆ. ಇವರೆಲ್ಲರೂ ಬಿಜೆಪಿಯವರಾ? ಪಟ್ಟಿಗೆ ಅಕ್ರಮವಾಗಿ ಹೆಸರನ್ನು ಬಿಜೆಪಿಯವರು ಹೇಗೆ ಸೇರಿಸಲು ಸಾಧ್ಯ? ಎಂದು ಪ್ರಶ್ನಿಸಿದರು.

ಒಂದೇ ಮನೆಯಲ್ಲಿ 18 ಮುಸ್ಲಿಂ ಮತದಾರರಿದ್ದಾರೆ ಕೆಲವು ರಾಜ್ಯಗಳಲ್ಲಿ ಕಾಂಗ್ರೆಸ್ ನಾಯಕರು ಬೋಗಸ್ ವೋಟ್‌ಗಳ ಅಕ್ರಮ ಮಾಡಿದ್ದಕ್ಕೆ ಬಂಧಿತರಾಗಿದ್ದಾರೆ. ಬೆಂಗಳೂರಿನ ಗಾಂಧಿನಗರದ ಒಂದು ಚಿಕ್ಕಮನೆಯಲ್ಲಿ 18 ಮುಸ್ಲಿಂ ಮತದಾರರಿದ್ದಾರೆ. ಒಂದೇ ಮನೆಯಲ್ಲಿ ಇಷ್ಟೊಂದು ವೋಟು ಇರಲು ಹೇಗೆ ಸಾಧ್ಯ? ಸರ್ವಜ್ಞನಗರ ಕ್ಷೇತ್ರದ ನಾಗವಾರ ವಾರ್ಡ್‌ನಲ್ಲಿ ಕಾಂಗ್ರೆಸ್ ಶಾಸಕರಿಗಿಂತಲೂ ಸಂಸದರಿಗೆ 5,965 ಹೆಚ್ಚುವರಿ ಮತ ಸಿಕ್ಕಿದೆ. ಹಾಗಾದ್ರೆ ಕಾಂಗ್ರೆಸ್‌ಗೆ ಹೆಚ್ಚು ಮತ ಸಿಕ್ಕಿದ್ದು ಹೇಗೆ? ಹೆಚ್‌ಬಿಆರ್ ಲೇಔಟ್‌ನಲ್ಲಿ ಶಾಸಕರಿಗಿಂತಲೂ ಸಂಸದರಿಗೆ 3,646 ಮತ ಹೆಚ್ಚಾಗಿ ಸಿಕ್ಕಿದೆ. ಕಾಡುಗೊಂಡನಹಳ್ಳಿಯಲ್ಲಿ 3432 ಹೆಚ್ಚು ಮತ ಸಿಕ್ಕಿದೆ. ಹಾಗಾದರೆ ಇವೆಲ್ಲವನ್ನೂ ಸೇರಿಸಿದ್ದು ಯಾರು? ಸೋತ ಕೂಡಲೇ ಚುನಾವಣಾ ಆಯೋಗ ಸರಿ ಇಲ್ಲ ಎನ್ನುತ್ತಾರೆ ಎಂದರು. 2023ರ ವಿಧಾನಸಭಾ ಚುನಾವಣೆ ಬಳಿಕ 2024 ರಲ್ಲಿ ಲೋಕಸಭಾ ಚುನಾವಣೆ ನಡೆಯಿತು. ಒಂದೇ ವರ್ಷದಲ್ಲಿ ಕೆಲವು ಹೊಸ ಮತದಾರರು ಬಂದಿದ್ದಾರೆ. ಪದ್ಮನಾಭನಗರದಲ್ಲಿ 57,000 ಮತ ನನಗೆ ಬಂದಿದೆ. ಇನ್ನೂ 20,000 ಬರಬೇಕಿತ್ತು. ಆದರೆ ಬೇರೆ ಕಡೆಯಿಂದ ಮುಸ್ಲಿಮರನ್ನ ತಂದು ಇಲ್ಲಿಗೆ ಸೇರಿಸಿದ್ದಾರೆ. ಕಂದಾಯ ಇಲಾಖೆ ಎಲ್ಲ ಚುನಾವಣೆ ನಡೆಸುತ್ತದೆ. ಎಲ್ಲರೂ ಕಾಂಗ್ರೆಸ್ ಸರ್ಕಾರದವರೇ ಆಗಿರುವಾಗ ಅಕ್ರಮವಾಗಲು ಹೇಗೆ ಸಾಧ್ಯ? ಈ ಹಿಂದೆ ಕಾಂಗ್ರೆಸ್ ಎಲ್ಲ ಕಡೆ ಅಧಿಕಾರದಲ್ಲಿದ್ದಾಗ ಕಳ್ಳ ಮತದಾನ ಸಾಮಾನ್ಯವಾಗಿತ್ತು. ಮತಪೆಟ್ಟಿಗೆಗಳನ್ನು ಎತ್ತಿಕೊಂಡು ಹೋಗುತ್ತಿದ್ದರು. ಪೂಲನ್ ದೇವಿಯಂತಹ ಡಕಾಯಿತರ ಆಡಳಿತವೇ ಎಲ್ಲ ಕಡೆ ನಡೆಯುತ್ತಿತ್ತು. ಅಂತಹ ಚುನಾವಣೆ ರಾಹುಲ್ ಗಾಂಧಿಗೆ ಈಗ ಬೇಕಿದೆ ಅಂತ ಕಿಡಿಕಾರಿದರು. ಇಂದಿರಾಗಾಂಧಿ ಚುನಾವಣಾ ಅಕ್ರಮ ಮಾಡಿ ಗೆದ್ದು ಅನರ್ಹರಾಗಿದ್ದರು. ಅದೇ ರೀತಿ ನರೇಂದ್ರ ಮೋದಿಗೆ ಆಗಿಲ್ಲ. ಗಾಂಧಿ ಕುಟುಂಬದ ಇತಿಹಾಸವೇ ಅಕ್ರಮ. ಚುನಾವಣೆಯಲ್ಲಿ ಅಕ್ರಮ ಮಾಡಿಯೇ ಎಲ್ಲರೂ ಗೆದ್ದಿದ್ದಾರೆ ಅಂತ ರಾಹುಲ್ ಗಾಂಧಿ ವಿರುದ್ಧ ವಾಗ್ದಾಳಿ ನಡೆಸಿದರು.

# ಜಿಲ್ಲಾಧಿಕಾರಿ ಹಾಗೂ ಪೋಲಿಸ್ ವರಿಷ್ಠಾಧಿಕಾರಿಗಳಿಂದ ರಸಗೊಬ್ಬರ ಮಾರಾಟ ಮಳಿಗೆ ಗಳಿಗೆ ದಿಢೀರ್ ಭೇಟಿ, ಪರಿಶೀಲನೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಆ:8: ಜಿಲ್ಲಾಧಿಕಾರಿ ಶ್ರೀ ಹರ್ಷಲ್ ಭೋಯರ್ ಹಾಗೂ ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಶ್ರೀ ಪೃಥ್ವಿಕ್ ಶಂಕರ್,ಜಂಟಿ ಕೃಷಿ ನಿರ್ದೇಶಕ ಶ್ರೀ ರತೇಂದ್ರನಾಥ ಸುಗೂರು

ಅವರು ಇಂದು ಜಿಲ್ಲೆಯ ಶಹಾಪುರ ನಗರದ ವಿವಿಧ ರಸಗೊಬ್ಬರ ಮಳಿಗೆಗಳಿಗೆ ದಿಢೀರ್ ಭೇಟಿ ನೀಡಿ, ಪರಿಶೀಲನೆ ನಡೆಸಿದರು.

ಶಹಾಪುರ ನಗರದ ಶ್ರೀ ಮರಡ್ಡಿ ಮಲ್ಲಿಕಾರ್ಜುನ ಆಗ್ರೋ ಏಜನ್ಸಿ,ಶ್ರೀ ಸಂಗಮೇಶ್ವರ ಆಗ್ರೋ ಮತ್ತು ಶ್ರೀ ವಿಜಯ ಆಗ್ರೋ ಟ್ರೇಡರ್ಸ್ ರವರ ಕೃಷಿ ಪರಿಕರ ಮಾರಾಟ ಮಳಿಗೆ ಮತ್ತು ಗೋದಾಮು



ಗಳಿಗೆ ಅನಿರೀಕ್ಷಿತವಾಗಿ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಈ ಸಂದರ್ಭದಲ್ಲಿ ರೈತರಿಗೆ ವಿತರಿಸಲಾಗುವ ಮತ್ತು ಡಿ.ಎ.ಪಿ ರಸಗೊಬ್ಬರ ಗಳ ಪರಿಕರ ಮಾರಾಟ ನನ್ನು ಪರಿವೀಕ್ಷಿಸಿದರು.

ಎಂ.ಆರ್ ಪಿ ದರದಲ್ಲಿಯೇ ರಸಗೊಬ್ಬರ ವನ್ನು ಮಾರಾಟ ಮಾಡುವಂತೆ ತಿಳಿಸಿದ ಅವರು ರೈತರಿಗೆ ಒತ್ತಾಯ ಮಾಡಿ ಯಾವುದೇ ರೀತಿಯ ಲಿಂಕ್ಗಳನ್ನು ಕೊಡಬಾರದು ಎಂದು ಸೂಚಿಸಿದರು.

ಮಹಿಳೆಯರಿಗೆ,ಅಂಗವಿಕಲರಿಗೆ ಮತ್ತು ಹಿರಿಯರಿಗೆ ಪ್ರತ್ಯೇಕ ರೀತಿ ಸಾಲು ಮಾಡುವಂತೆ ಸೂಚಿಸಿದ ಜಿಲ್ಲಾಧಿಕಾರಿಗಳು ಜಿಲ್ಲೆಗೆ ಇನ್ನೂ ಹೆಚ್ಚಿನ ಪ್ರಮಾಣದಲ್ಲಿ ರಸಗೊಬ್ಬರಗಳನ್ನು ತರಿಸಲಾಗುತ್ತಿದೆ.ರೈತರು ಆತಂಕಪಡುವ ಅವಶ್ಯಕತೆ ಇಲ್ಲ ಎಂದ ಅವರು ಶಾಂತಿಯಿಂದ ಲಭ್ಯವಿರುವ ರಸಗೊಬ್ಬರ ಪಡೆಯುವಂತೆ ಅವರು ತಿಳಿಸಿದರು.

ಅದರಂತೆ ಯೂರಿಯಾ ಮತ್ತು ಡಿಎಪಿ ರಸಗೊಬ್ಬರಗಳನ್ನು ಮಾತ್ರ ಬಳಸದೇ, ಸಂಯುಕ್ತ ರಸಗೊಬ್ಬರಗಳು ಹಾಗೂ ನ್ಯಾನೋ ಯೂರಿಯಾ,ನ್ಯಾನೋ. ಡಿ.ಎ.ಪಿ.ರಸಗೊಬ್ಬರಗಳನ್ನು ಕೂಡ ಬಳಸುವಂತೆ ನಿಂತ ರೈತರಿಗೆ ತಿಳಿಸಿದರು.

ಪರಿಕರ ಮಾರಾಟ ಮಳಿಗೆಗಳಲ್ಲಿರುವ ರಸಗೊಬ್ಬರ ದಾಸ್ತಾನು ವಿತರಣಾ ಪ್ರಕ್ರಿಯೆ ಯನ್ನು ಪರಿಶೀಲಿಸಿ, ಇಲಾಖೆಯ ಅಧಿಕಾರಿಗಳು ರೈತರಿಗೆ ಯಾವುದೇ ತೊಂದರೆಯಾಗದ ರೀತಿಯಲ್ಲಿ ಸಮರ್ಪಕವಾಗಿ ವಿತರಿಸಲು ಅವರು ಸೂಚಿಸಿದರು.

# ರೋಗಿಗಳ ಚಿಕಿತ್ಸೆಗೆ ಅಸಡ್ಡೆ ಸಹಿಸಲಾಗದು



ಮಲ್ಲಮ್ಮ ನುಡಿ ವಾರ್ತೆ

ಬೀದರ್:ಅ.8:ಬ್ರಿಮ್ಸ್ ಆಸ್ಪತ್ರೆಯಲ್ಲಿ ಅವ್ಯವಸ್ಥೆ ಹೆಚ್ಚಾಗಿದೆ. ಸೂಕ್ತ ಚಿಕಿತ್ಸೆ ಸಿಗದಿರುವ ಬಗ್ಗೆ ಹಾಗೂ ಅಗತ್ಯ ವ್ಯವಸ್ಥೆ ಕಲ್ಪಿಸದಿರುವ ಬಗ್ಗೆ ದಿನವೂ ರೋಗಿಗಳ, ಕುಟುಂಬಸ್ಥರ ಗೋಳು ಸಾಮಾನ್ಯವಾಗಿವೆ. ಸಮಸ್ಯೆ ಹೊತ್ತು ಬರುವವರಿಗೆ ಸೂಕ್ತ ಚಿಕಿತ್ಸೆ ನೀಡದೇ ಅಸಡ್ಡೆ ವಹಿಸುವುದು ಸಹಿಸಲಾಗದು ಎಂದು ಶಾಸಕ ಡಾ.ಶೈಲೇಂದ್ರ ಬೆಲ್ದಾಳೆ ಎಚ್ಚರಿಸಿದ್ದಾರೆ.

ಶುಕ್ರವಾರ ಸಂಜೆ ಬ್ರಿಮ್ಸ್ ಆಸ್ಪತ್ರೆಗೆ ಭೇಟಿ ನೀಡಿ, ಬೀದರ್ ದಕ್ಷಿಣ ಕ್ಷೇತ್ರದ ಮನ್ನಾಎಖ್ಖೆಳ್ಳಿಯಲ್ಲಿ ಇತ್ತೀಚೆಗೆ ನಾಯಿ ಕಡಿದು ಗಾಯಗೊಂಡ ಮಕ್ಕಳು ಸೇರಿದಂತೆ ಇತರೆ ರೋಗಿಗಳ ಆರೋಗ್ಯ ವಿಚಾರಿಸಿದ ಅವರು, ಆಸ್ಪತ್ರೆಯಲ್ಲಿ ಸಿಗುತ್ತಿರುವ ಚಿಕಿತ್ಸೆ ಹಾಗೂ ವ್ಯವಸ್ಥೆ ಬಗ್ಗೆ ಮಾಹಿತಿ ಪಡೆದರು. ರೋಗಿಗಳು ಹಾಗೂ ಸಂಬಂಧಿಕರು ಹಲವಾರು ಗೋಳು ತೋಡಿಕೊಂಡಿದ್ದಕ್ಕೆ ಶಾಸಕರು ಬ್ರಿಮ್ಸ್ ಅವ್ಯವಸ್ಥೆ ಬಗ್ಗೆ ಸಿಡಿಮಿಡಿಗೊಂಡರು.

ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 750 ಹಾಸಿಗೆ ಆಸ್ಪತ್ರೆಯಿದೆ. ಕೋಟ್ಯಂತರ ಹಣ ಬರುತ್ತಿದೆ. ಇಷ್ಟಾದರೂ ಸೂಕ್ತ ಚಿಕಿತ್ಸೆ ಕಲ್ಪಿಸದಿರುವುದು ನೋವಿನ ಸಂಗತಿ. ಬರುವ ಆ.11ರಂದು ಶುರುವಾಗಲಿರುವ ವಿಧಾನಮಂಡಲ ಅಧಿವೇಶನದಲ್ಲಿ ಈ ವಿಷಯ ಪ್ರಸ್ತಾಪಿಸಿ ಗಡಿ ಜನರ ಆರೋಗ್ಯದ ಹಿತದಿಂದ ಸರ್ಕಾರದ ಗಮನ ಸೆಳೆಯುವೆ ಎಂದರು.

ಮನ್ನಾಎಖ್ಖೆಳ್ಳಿಯಲ್ಲಿ ನಾಯಿ ಕಡಿತದಿಂದ ಗಾಯಗೊಂಡ ಬಾಲಕನಿಗೆ ಬ್ರಿಮ್ಸ್ ಆಸ್ಪತ್ರೆಗೆ ತರಲಾಗಿತ್ತು. ಆದರೆ ಇಲ್ಲಿ ರೇಬಿಸ್ ಇಂಜೆಕ್ಷನ್ ಇಲ್ಲ ಎಂದು ವೈದ್ಯರು ಹೇಳಿದರು.

ಹೊರಗಿನಿಂದ ಇಂಜೆಕ್ಷನ್ ತರಬೇಕಾಯಿತು. ಔಷಧಿ ಕೊರತೆ ಇರುವ ಬಗ್ಗೆ ಚಿಕಿತ್ಸೆ ಬಾಲಕನ ಪಾಲಕರು ನನಗೆ ದೂರವಾಣಿ ಮೂಲಕ ತಿಳಿಸಿದರು. ನಾನು ತಕ್ಷಣ ಜಿಲ್ಲಾಧಿಕಾರಿಗಳ ಗಮನಕ್ಕೆ ವಿಷಯ ತಂದಿದ್ದೇನೆ. ಡಿಸಿ ಅವರು ವಿಷಯ ಗೊತ್ತಾದ ತಕ್ಷಣ ಬ್ರಿಮ್ಸ್ ಭೇಟಿ ನೀಡಿ ಸಮಗ್ರ ಪರಿಶೀಲನೆ ನಡೆಸಿದರು. ಪರಿಶೀಲನೆ ವೇಳೆ ರೇಬಿಸ್ ಇಂಜೆಕ್ಷನ್ ಸ್ಟಾಕ್ ಇರುವುದು ಪತ್ತೆಯಾಗಿದೆ. ಸ್ಟಾಕ್ ಇದ್ದರೂ ಇಂಜೆಕ್ಷನ್ ಕೊಡದಿರುವುದು ತಪ್ಪು ಎಂದು ಕಿಡಿಕಾರಿದರು.ಅಂದು ನಾನು ಜಿಲ್ಲೆಯ ಹೊರಗಿದ್ದ ಕಾರಣ ಇಂದು ಬ್ರಿಮ್ಸ್ ಆಸ್ಪತ್ರೆಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದೇನೆ. ಇಲ್ಲಿರುವ ಕುಂದುಕೊರತೆ ಕುರಿತು ಅಹವಾಲು ಸ್ವೀಕರಿಸಿ ಸಮಸ್ಯೆಗಳನ್ನು ಬಗೆಹರಿಸಲು ಸ್ಥಳದಲ್ಲಿದ್ದ ಅಧಿಕಾರಿಗಳಿಗೆ ಸೂಚನೆ ನೀಡಿದ್ದೇನೆ. ಅಂದು ಔಷಧಿ ಕೊರತೆಗೆ ವೈದ್ಯರ ನಿರ್ಲಕ್ಷ್ಯ ಕಾರಣವಾಗಿದೆ. ಇಂತಹ ಘಟನೆಗಳು ಮರುಕಳಿಸದಂತೆ ಎಚ್ಚರ ವಹಿಸಬೇಕು. ಬಡ ಜನರು ಚಿಕಿತ್ಸೆ ಪಡೆಯಲು ಆಸ್ಪತ್ರೆಗೆ ಬಂದಾಗ ವೈದ್ಯರು ಹಾಗೂ ಸಿಬ್ಬಂದಿ ಹೆಚ್ಚಿನ ನಿಗಾ ವಹಿಸಿ ಕೆಲಸ ಮಾಡಬೇಕು ಎಂದು ತಾಕೀತು ಮಾಡಿದ್ದೇನೆ. ನಿರ್ಲಕ್ಷ್ಯ ವಹಿಸಿದವರು ಯಾರಿದ್ದರೂ ಅವರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿರುವೆ ಎಂದರು.

# ಸಂತಪೂರ ನಾಡ ಕಚೇರಿಯಲ್ಲಿ ಮಳೆ ನೀರು, ಆತಂಕ

ಬೀದರ. ಅ. 08 : ಔರಾದ್ ತಾಲ್ಲೂಕಿನ ದೊಡ್ಡ ಹೋಬಳಿ ಕೇಂದ್ರವಾದ ಸಂತಪೂರ ನಾಡ ಕಚೇರಿ ಕಟ್ಟಡ ಶಿಥಿಲಗೊಂಡು ಅಲ್ಲಿಯ ಸಿಬ್ಬಂದಿ ಹಾಗೂ ಜನರಲ್ಲಿ ಆತಂಕ ಆವರಿಸಿದೆ. ಬುಧವಾರ ಸುರಿದ ಮಳೆಗೆ ನಾಡ ಕಚೇರಿ ಛಾವಣಿ ಮೇಲಿಂದ ನೀರು ಸುರಿಯುತ್ತಿದೆ. ಕಂಪ್ಯೂಟರ್ ಹಾಗೂ ದಾಖಲೆಗಳ ಮೇಲೆ ಹನಿ ಹನಿ ನೀರು ಬೀಳುತ್ತಿದ್ದು, ಸಿಬ್ಬಂದಿ ಇಂತಹ ಅವ್ಯವಸ್ಥೆ ನಡುವೆ ಕೆಲಸ ಮಾಡುತ್ತಿದ್ದಾರೆ.

ನಾಡ ಕಚೇರಿ ಕಟ್ಟಡ ಹಳೆಯದಾಗಿರುವುದರಿಂದ ಬಳಸಲು ಯೋಗ್ಯಾಗಿಲ್ಲ. ಸ್ವಲ್ಪ ಮಳೆಯಾದರೂ ಛಾವಣಿ ಮೇಲೆ ನೀರು ನಿಂತು ಕೊಠಡಿಯೊಳಗೆ ಬರುತ್ತಿದೆ. ನಾಲ್ಕು ಕೊಠಡಿಗಳಲ್ಲಿ ಒಂದೂ ಸುರಕ್ಷಿತಾಗಿಲ್ಲ ಎಂದು ಸ್ಥಳೀಯರು ಹಾಗೂ ಸಿಬ್ಬಂದಿ




ಆತಂಕ ವ್ಯಕ್ತಪಡಿಸಿದ್ದಾರೆ.

'ಸಂತಪೂರ ಹೋಬಳಿ ವ್ಯಾಪ್ತಿಯಲ್ಲಿ 30ಕ್ಕೂ ಹೆಚ್ಚು ಹಳ್ಳಿಗಳು ಬರುತ್ತವೆ. ರೈತರು, ವಿದ್ಯಾರ್ಥಿಗಳು ಸೇರಿದಂತೆ ಸರ್ಕಾರಿ ಕೆಲಸ ಕಾರ್ಯಕ್ಕೆ ನಾಡ ಕಚೇರಿಗೆ ಬರುವುದು ಅನಿವಾರ್ಯ. ಆದರೆ ಇಲ್ಲಿ ಸೂಕ್ತ ಸೌಲಭ್ಯವಿಲ್ಲದೆ ಜನರಿಗೆ ತೊಂದರೆಯಾಗುತ್ತಿದೆ. ಛಾವಣಿ ಸೋರುತ್ತಿರುವುದರಿಂದ ಕಡತಗಳೂ ಸುರಕ್ಷಿತವಾಗಿಲ್ಲ. ಸರ್ಕಾರ ತಕ್ಷಣ ನಾಡ ಕಚೇರಿಯನ್ನು ಸೂಕ್ತ ಕಡೆ ಸ್ಥಳಾಂತರಿಸಬೇಕು. ಆದಷ್ಟು ಬೇಗ ಹೊಸ ಕಟ್ಟಡಕ್ಕೆ ಕ್ರಮ ಕೈಗೊಳ್ಳಬೇಕು' ಎಂದು ದಲಿತ ಸಂಘರ್ಷ ಸಮಿತಿ ಜಿಲ್ಲಾ ಸಂಚಾಲಕ ಧನರಾಜ ಮುಸ್ತಾಪುರ ಒತ್ತಾಯಿಸಿದ್ದಾರೆ.

'ಸಂತಪೂರ ನಾಡ ಕಚೇರಿ, ಪಶು ಆಸ್ಪತ್ರೆ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಕಚೇರಿ, ಮೀನುಗಾರಿಕೆ ಕಚೇರಿ ಒಂದೇ ಕಡೆ ಇವೆ. ಆದರೆ ಈ ಕಚೇರಿಗಳಿಗೆ ಹೋಗಿ ಬರಲು ಸರಿಯಾದ ದಾರಿ ಇಲ್ಲ. ಮಳೆ ಬಂದರೆ ನೀರು ನಿಲ್ಲುತ್ತದೆ. ಇಡೀ ಪರಿಸರವೂ ಹಾಳಾಗಿದೆ. ಸಂಬಂಧ ಪಟ್ಟವರು ಈ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳುವ ಮೂಲಕ ಮುಂದಿನ ಎದುರಾಗಬಹುದಾದ ಅನಾಹುತಗಳನ್ನು ತಪ್ಪಿಸಬೇಕು' ಎಂದು ಸಾಮಾಜಿಕ ಕಾರ್ಯಕರ್ತ ಅರವಿಂದ ಮಲ್ಲಿಗೆ ತಿಳಿಸಿದ್ದಾರೆ.

'ಸಂತಪೂರ ನಾಡ ಕಚೇರಿ ಹಳೆ ಡಿಸಿಸಿ ಬ್ಯಾಂಕ್ ಕಟ್ಟಡದಲ್ಲಿ ನಡೆಯುತ್ತಿದೆ. ಇದು ಶಿಥಿಲಗೊಂಡಿರುವುದು ನಮ್ಮ ಗಮನಕ್ಕೂ ಬಂದಿದೆ. ಪಕ್ಕದಲ್ಲೇ ಇರುವ ಸರ್ಕಾರಿ ಆಸ್ಪತ್ರೆ ಕಟ್ಟಡ ಬಳಸಿಕೊಳ್ಳಲು ಚಿಂತನೆ ನಡೆಸಿದ್ದೇವೆ' ಎಂದು ತಹಶೀಲ್ದಾರ್ ಮಹೇಶ್ ಪಾಟೀಲ ತಿಳಿಸಿದ್ದಾರೆ.

# ಮಹಾದೇವಪುರದಲ್ಲಿ ಯಾವುದೇ ಅಕ್ರಮ ಆಗಿಲ್ಲ: ಲಿಂಬಾವಳಿ ತಿರುಗೇಟು

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಅ.8:ಬೆಂಗಳೂರು ಕೇಂದ್ರ ಲೋಕಸಭೆಯ ಮಹಾದೇವಪುರದಲ್ಲಿ 1,00,250 ಮತಗಳ್ಳತನ ಆಗಿದೆ ಎಂಬ ರಾಹುಲ್ ಗಾಂಧಿ ಆರೋಪಕ್ಕೆ, ಮಹಾದೇವಪುರ ಕ್ಷೇತ್ರದ ಮಾಜಿ ಶಾಸಕ ಅರವಿಂದ ಲಿಂಬಾವಳಿ ತಿರುಗೇಟು ಕೊಟ್ಟಿದ್ದಾರೆ.

ಬಿಜೆಪಿ ಕಚೇರಿಯಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಮಹಾದೇವಪುರದಲ್ಲಿ ಯಾವುದೇ ಅಕ್ರಮ ಆಗಿಲ್ಲ. ಸಕ್ರಮ ಚುನಾವಣೆ ನಡೆದಿದೆ. ರಾಹುಲ್ ಗಾಂಧಿ ಆರೋಪಗಳು ನಿರಾಧಾರ, ಸತ್ಯಕ್ಕೆ ದೂರ ಎಂದು ಸ್ಪಷ್ಟೀಕರಣ ನೀಡಿದ್ದಾರೆ. ಅಲ್ಲದೇ, ರಾಹುಲ್ ಗಾಂಧಿ ಮಾಡಿರುವ ಐದು ಹಂತದ ಮತಗಳ್ಳತನ ಹಾಗೂ ಏಳು ಉದಾಹರಣೆಗಳಿಗೂ ಲಿಂಬಾವಳಿ ದಾಖಲೆ ಸಹಿತ ಉತ್ತರ ಕೊಟ್ಟಿದ್ದಾರೆ.

ಆರೋಪ 1: ಡುಪ್ಲಿಕೇಟ್ ಮತದಾರರ ಸಂಖ್ಯೆ 11,965

ಉತ್ತರ – ಗುರುಕಿರೀತ್ ಸಿಂಗ್ ದಾಂಗ್ ಹೆಸರು ಸೇರ್ಪಡೆಗೆ 4 ಬಾರಿ ಅರ್ಜಿ ಸಲ್ಲಿಸಿದಾಗ ತಿರಸ್ಕರಿಸಲ್ಪಟ್ಟಿತ್ತು. ಆದರೆ, ಮತದಾರರ ಪಟ್ಟಿಯಲ್ಲಿ ಬೇರೆ ಬೇರೆ ಕಡೆ ಕಾಣಿಸಿಕೊಂಡಿದೆ. 3 ಕಡೆ ಹೆಸರು ರದ್ದತಿಗೆ ಅವರು ಕೋರಿದ್ದಾರೆ.

ಲಕ್ನೋದ ಆದಿತ್ಯ ಶ್ರೀವಾಸ್ತವ್ ಹೆಸರು ಲಕ್ನೋದಲ್ಲಿ ಸೇರ್ಪಡೆಯಾಗಿತ್ತು. ಬಳಿಕ ಕೆಲಸದಲ್ಲಿದ್ದ ಮುಂಬೈನಲ್ಲಿ ಮತದಾರರ ಪಟ್ಟಿಗೆ ಸೇರ್ಪಡೆ, ಬಳಿಕ ಬೆಂಗಳೂರಿನಲ್ಲಿ ಹೆಸರು ಸೇರಿಸಿ ಮತ ಚಲಾಯಿಸಿದ್ದಾರೆ. ಇವರು ಕೂಡ ಫಾರ್ಮ್ 7 ಮೂಲಕ ಬದಲಾವಣೆಗೆ ಅರ್ಜಿ ಕೊಟ್ಟವರು.

ವಾರಣಾಸಿಯ ವಿನೋದ್ ಸಿಂಗ್ ಬೆಂಗಳೂರಿನ ಮಾರಥಹಳ್ಳಿಯಲ್ಲಿದ್ರು. ಈಗ ಮನೆ ಖರೀದಿಸಿದ್ದಾರೆ. 513 ಬೂತ್‌ಗೆ ಮನೆ ಬದಲಾಯಿಸಿ ವೋಟ್ ಹಾಕಿದ್ದಾರೆ. ವೋಟರ್ ಲಿಸ್ಟ್ ನಿಯಮದ



ಪ್ರಕಾರ ಬದಲಾಯಿಸಿಕೊಂಡಿದ್ದಾರೆ. ಇವರು ವಾರಣಾಸಿಯಲ್ಲಿ ಮತ ಹಾಕಿಲ್ಲ, ಹಾಕಿದ್ರೆ ಪ್ರೂವ್ ಮಾಡಿ

ಆರೋಪ 2: ಒಂದೇ ವಿಳಾಸದ 10,452 ಬಲ್ಕ್ ಮತದಾರರು

ಉತ್ತರ – ನಕಲಿ ವಿಳಾಸದ ಚೆಕ್ ಮಾಡಿದ್ದು, 13 ಜನ ಸಿಕ್ಕಿದ್ದಾರೆ. ಇವರು ವಿಳಾಸ ಕೊಟ್ಟರೂ ಆಯೋಗದವರು ಸೇರಿಸಿಲ್ಲ. ಒಂದೇ ಮನೆ ನಂಬರ್ 35 ಅಂತ ಇದೆ. ಇಲ್ಲಿ 80 ವೋಟರ್ಸ್ ಇದ್ದಾರೆ ಅಂದಿದ್ದಾರೆ. ಬಲ್ಕ್ ವೋಟರ್ಸ್ ಬಿಟಿಎಂ ಲೇಔಟ್‌ನಲ್ಲೂ ಇದ್ದಾರೆ. ಬಲ್ಕ್ ಮತದಾರರ ಕುರಿತ ಆರೋಪ ಸರಿಯಲ್ಲ.

ಆರೋಪ 3: 40,009 ನಕಲಿ ವಿಳಾಸಗಳು ಮತ್ತು ಅಸಿಂಧು ಮತಗಳು

ಉತ್ತರ – ನಮ್ಮ ಕ್ಷೇತ್ರದಲ್ಲಿ ರಾಹುಲ್ ಗಾಂಧಿ ಮನೆ ವಿಳಾಸದ ಜಾಗದಲ್ಲಿ ಜೀರೋ ಇದೆ ಅಂತ ಅಂದಿದ್ದಾರೆ. ಸಿಎಂ ಅವರ ವರುಣಾ ಕ್ಷೇತ್ರದಲ್ಲಿ ಮನೆ ವಿಳಾಸದ ಜಾಗದಲ್ಲಿ ಜೀರೋ ಜೀರೋ ಅಂತ ಇದೆ. ವರುಣಾದ ವಾರ್ಡ್ ನಂಬರ್ 8 ರಲ್ಲಿ ವಿಳಾಸ ಜಾಗದಲ್ಲಿ ಜೀರೋ ಅಂತ ಇದೆ. ನಮ್ಮಲ್ಲಿ ಇದು ತಪ್ಪಾಗಿದ್ರೆ, ಸಿದ್ದರಾಮಯ್ಯ ಕ್ಷೇತ್ರದ್ದೂ ತಪ್ಪೇ ಅಲ್ಲವಾ? ಸಂಡೂರು,

ಮಾನ್ವಿ, ಮಸ್ಕಿ ಕ್ಷೇತ್ರಗಳಲ್ಲೂ ಮನೆ ವಿಳಾಸದ ಜಾಗದಲ್ಲಿ ಜೀರೋ ಜೀರೋ ಅಂತ ಇದೆ. ಇದು ಒಂದು ಎರರ್, ಸರಿಪಡಿಸುವ ಹೊಣೆ ಆಯೋಗದ್ದು.

ಆರೋಪ 4: ಫಾರ್ಮ್ 6ರ (ಹೊಸ ಮತದಾರ) ದುರ್ಬಳಕೆ–33692

ಉತ್ತರ – ಶಕುನ್ ರಾಣಿಯಯವರು 2 ಕಡೆ ಮತ ಹಾಕಿದ್ದಾರೆ ಎಂದು ರಾಹುಲ್ ಆರೋಪಿಸಿದ್ದು, ಅದನ್ನೂ ತಪಾಸಣೆ ಮಾಡಿದ್ದೇವೆ. ಅವರು ಒಂದೇ ಕಡೆ ಮತ ಹಾಕಿದ್ದಾರೆ.

ಆರೋಪ 5: ನಕಲಿ ಫೋಟೋಗಳು 4,132

ಉತ್ತರ – ಅಪ್‌ಲೋಡ್ ಮಾಡುವಾಗ ಫೋಟೋಗಳು ಹಾಗೆ ಬಂದಿವೆ. ಮಂಡೂರಿನ ಬೂತ್ ನಂಬರ್ 5 ರಲ್ಲಿ ಈ ಮತದಾರರು ಇದ್ದಾರೆ. ಫೋಟೋ ಸರಿಯಿಲ್ಲ ಅಂದ್ರೆ ವೋಟರ್ ಕಾರ್ಡ್ ಒಂದೇ ನೋಡಲ್ಲ, ಬೇರೆ ಗುರುತು ಚೀಟಿ ನೋಡಿಯೇ ವೋಟ್ ಹಾಕೋಕೆ ಅವಕಾಶ ಕೊಡೋದು ಎಂದು ಅರವಿಂದ್ ಲಿಂಬಾವಳಿ ಉತ್ತರಿಸಿದ್ದಾರೆ. ಆ ಮೂಲಕ ರಾಹುಲ್ ಗಾಂಧಿ ಎಲ್ಲಾ ಆರೋಪಗಳನ್ನು ಅಲ್ಲಗಳೆದಿದ್ದಾರೆ.

# ತೋಟಗಾರಿಕೆ ದಿನಾಚರಣೆಗೆ ಸಿಇಓ ಡಾ.ಗಿರೀಶ ಬದೋಲೆ ಚಾಲನೆ

ಮಲ್ಲಮ್ಮ ನುಡಿ ವಾರ್ತೆ

ಬೀದರ, ಆ.08 :ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ಬಾಗಲಕೋಟೆ, ತೋಟಗಾರಿಕೆ ಮಹಾವಿದ್ಯಾಲಯ ಬೀದರ ಹಾಗೂ ತೋಟಗಾರಿಕೆ ಇಲಾಖೆ (ಜಿಲ್ಲಾ ಪಂಚಾಯತ) ಬೀದರ ಇವರುಗಳ ಸಹಯೋಗದೊಂದಿಗೆ ದಿ.ಡಾ.ಎಂ.ಎಚ್.ಮರೀಗೌಡರ 109 ನೇ ಜನ್ಮ ದಿನದ ನಿಮಿತ್ಯ ಶುಕ್ರವಾರದಂದು ತೋಟಗಾರಿಕೆ ಮಹಾವಿದ್ಯಾಲಯ ಬೀದರನಲ್ಲಿ ಹಮ್ಮಿಕೊಂಡಿದ್ದ ತೋಟಗಾರಿಕೆ ದಿನಾಚರಣೆ ಆಚರಿಸಲಾಯಿತು. ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ಗಿರೀಶ ದಿಲೀಪ ಬದೋಲೆ ಅವರು ದಿ. ಡಾ. ಎಂ. ಎಚ್. ಮರೀಗೌಡರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ತೋಟಗಾರಿಕೆ ದಿನಾಚರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ದಿ. ಡಾ. ಎಂ. ಎಚ್. ಮರೀಗೌಡರ ಸಾಧನೆಗಳ ಕುರಿತು ಮಾತನಾಡುತ್ತಾ, ಅವರು ಕೈಗೊಂಡ ಅಭಿವೃದ್ಧಿ ಕಾರ್ಯಕ್ರಮಗಳಾದ ಲಾಲ್‌ಬಾಗ್




ಸ್ಥಾಪನೆ, ಹಲವು ತೋಟಗಾರಿಕೆ ಕ್ಷೇತ್ರಗಳ, ನರ್ಸರಿಗಳ ಸ್ಥಾಪನೆ ಹಾಪಕಾಮ್ಸ್ ಅಭಿವೃದ್ಧಿಗಳ ಮೂಲಕ ಕರ್ನಾಟಕದಲ್ಲಿ ತೋಟಗಾರಿಕೆ ಕ್ಷೇತ್ರವು ವಿಜೃಂಭಿಸುವಲ್ಲಿ ಕಾರಣಿಭೂತರೆಂದು ನೆನೆದರು. ರಾಯಚೂರ ಕೃಷಿ ವಿಶ್ವವಿದ್ಯಾಲಯದ ನಿವೃತ ಶಿಕ್ಷಣ ನಿರ್ದೇಶಕ ಡಾ. ಎಂ. ಜಿ. ಪಾಟೀಲ ಮಾತನಾಡಿ, ಕರ್ನಾಟಕದಲ್ಲಿ ತೋಟಗಾರಿಕೆ ಕ್ಷೇತ್ರ ಮುಂಚೂಣಿಗೆ ಬರಲು ದಿ. ಡಾ. ಎಂ.ಎಚ್.ಮರೀಗೌಡರ ದೂರದೃಷ್ಟಿ ವ್ಯಕ್ತಿತ್ವವೇ ಮುಖ್ಯ ಕಾರಣವೆಂದು ಹೇಳುತ್ತಾ ವಿದ್ಯಾರ್ಥಿಗಳು ಕೇವಲ ಸರ್ಕಾರಿ ಕೆಲಸಕ್ಕೋಸ್ಕರ ಪದವಿ ಪಡೆಯದೇ ಸ್ವಯಂ ಉದ್ಯಮಿಗಳಾಗಲು ಪದವಿ ಪಡೆಯಿರಿ ಎಂದು ಕರೆ ನೀಡಿದರು. ಬೀದರ ತೋಟಗಾರಿಕೆ ಮಹಾವಿದ್ಯಾಲಯದ ಡೀನ್ ಡಾ. ಎಸ್.ವಿ. ಪಾಟೀಲ ಮಾತನಾಡಿ, ಕೃಷಿ ಆಹಾರ ಭದ್ರತೆಗಾಗಿದ್ದರೆ ತೋಟಗಾರಿಕೆ ಪೌಷ್ಟಿಕಾಂಶ ಹಾಗೂ ಆರ್ಥಿಕ ಭದ್ರತೆಗಾಗಿದೆ. ತೋಟಗಾರಿಕೆ ಮಹಾವಿದ್ಯಾಲ ಬೀದರ ಪ್ರತಿ ವರ್ಷ ಸುಮಾರು 15 ಲಕ್ಷ ಮೌಲ್ಯದ ತೋಟಗಾರಿಕೆ ಸಸಿಗಳನ್ನು ರೈತರಿಗೆ ತಲುಪಿಸುವ ಮುಖಾಂತರ ತೋಟಗಾರಿಕೆ ಕ್ಷೇತ್ರದ ಅಭಿವೃದ್ಧಿಯಲ್ಲಿ ಪ್ರಮುಖ ಪಾತ್ರ ವಹಿಸಿದೆ ಎಂದು ಹೇಳಿದರು. ಬೀದರ ಜಿಲ್ಲಾ ಪಂಚಾಯತ ತೋಟಗಾರಿಕೆ ಉಪ ನಿರ್ದೇಶಕ ಮಲ್ಲಿಕಾರ್ಜುನ್ ಬಾವುಗೆ ಮಾತನಾಡಿ, ತೋಟಗಾರಿಕೆ ಇಲಾಖೆಯಿಂದ ಲಭ್ಯವಿರುವ ವಿವಿಧ ಯೋಜನೆಗಳನ್ನು ರೈತರು ಸದುಪಯೋಗ ಪಡೆದುಕೊಳ್ಳಬೇಕೆಂದು ಹೇಳಿದರು. ಈ ಕಾರ್ಯಕ್ರಮದಲ್ಲಿ ರೈತರಿಗೆ ಉಚಿತವಾಗಿ ಪೌಷ್ಟಿಕ ಕೈತೋಟ ಕಿಟ್ ಹಾಗೂ ಸಂಪದ್ಭರಿತ ಎರೆ ಗೊಬ್ಬರ ನೀಡಲಾಯಿತು. ಈ ಸಂದರ್ಭದಲ್ಲಿ ಕಲಬುರಗಿ ಕೃಷಿ ಮಹಾವಿದ್ಯಾಲಯದ

ನಿವೃತ್ತ ಡೀನ್ ಡಾ. ಸುರೇಶ ಪಾಟೀಲ, ಬೀದರ ಜಿಲ್ಲೆಯ 40 ಪ್ರಗತಿಪರ ರೈತರುಗಳು, ತೋಟಗಾರಿಕೆ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿ, ತೋಟಗಾರಿಕೆ ಮಹಾವಿದ್ಯಾಲಯ, ಬೀದರನ ಸಿಬ್ಬಂದಿಗಳು ಸೇರಿದಂತೆ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಅನಿರ್ದಿಷ್ಟಾವಧಿ ಮುಷ್ಕರ ಕೈಬಿಟ್ಟ ಸಾರಿಗೆ ನೌಕರರು

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಅ.8:ಕೆಎಸ್‌ಆರ್‌ಟಿಸಿ ನೌಕರರ ಕಾರ್ಮಿಕ ಸಂಘಗಳ ಜಂಟಿ ಕ್ರಿಯಾ ಸಮಿತಿಯು ಅನಿರ್ದಿಷ್ಟಾವಧಿ ಸಾರಿಗೆ ಮುಷ್ಕರವನ್ನು ತಕ್ಷಣದಿಂದ ಜಾರಿಗೆ ಬರುವಂತೆ ಹಿಂಪಡೆಯಲು ಸರ್ವಾನುಮತದಿಂದ ನಿರ್ಧರಿಸಿರುವುದಾಗಿ ಕರ್ನಾಟಕ ಹೈಕೋರ್ಟ್‌ಗೆ ಗುರುವಾರ ತಿಳಿಸಿದೆ. ಕಾರ್ಮಿಕ ಸಂಘಟನೆಗಳು ನೀಡಿದ ಈ ಹೇಳಿಕೆಯನ್ನು ಪರಿಗಣಿಸಿ, ಮುಷ್ಕರ ಪ್ರಶ್ನಿಸಿ ಸಲ್ಲಿಕೆಯಾಗಿದ್ದ ಸಾರ್ವಜನಿಕ ಹಿತಾಸಕ್ತಿ ಅರ್ಜಿಯನ್ನು ಮುಖ್ಯ ನ್ಯಾಯಮೂರ್ತಿ ವಿಭು ಬಖ್ರು ಮತ್ತು ನ್ಯಾಯಮೂರ್ತಿ ಸಿ ಎಂ ಜೋಶಿ ಅವರ ವಿಭಾಗೀಯ ಪೀಠವು ಇತ್ಯರ್ಥಪಡಿಸಿತು.

ಮುಷ್ಕರದಿಂದ ಜನಸಾಮಾನ್ಯರಿಗೆ ತೊಂದರೆ ಉಂಟಾಗುವುದರಿಂದ ಮುಷ್ಕರ ನಡೆಸದಂತೆ ಕೆಎಸ್‌ಆರ್‌ಟಿಸಿ ಕಾರ್ಮಿಕ ಸಂಘಟನೆಗಳ ಜಂಟಿ ಕ್ರಿಯಾ ಸಮಿತಿಗೆ ಆದೇಶಿಸುವಂತೆ ಕೋರಿ ಬೆಂಗಳೂರಿನ ಜೆ ಸುನೀಲ್ ಮತ್ತಿತರರು ಸಾರ್ವಜನಿಕ ಹಿತಾಸಕ್ತಿ ಅರ್ಜಿ ಸಲ್ಲಿಸಿದ್ದರು. ಅರ್ಜಿಯನ್ನು ಆ.5ರಂದು ವಿಚಾರಣೆ ನಡೆಸಿದ್ದ ಹೈಕೋರ್ಟ್, ಸರ್ಕಾರ ಎಸ್ಮಾ ಕಾಯ್ದೆ ಜಾರಿ ಮಾಡಿದ್ದರೂ ಮುಷ್ಕರ ನಡೆಸಿರುವುದು ಅಕ್ರಮವೆಂದು ಕಾರ್ಮಿಕ ಸಂಘಟ ನೆಗಳ ಜಂಟಿ ಕ್ರಿಯಾ ಸಮಿತಿಯನ್ನು ತರಾಟೆಗೆ ತೆಗೆದುಕೊಂಡಿತ್ತು.ಮುಷ್ಕರ ಹಿಂಪಡೆದು ನ್ಯಾಯಾಲಯಕ್ಕೆ ಪ್ರಮಾಣ ಪತ್ರ ಸಲ್ಲಿಸಬೇಕು. ಇಲ್ಲವಾದರೆ ಕ್ರಿಯಾ ಸಮಿತಿಯ ಪದಾಧಿಕಾರಿಗಳನ್ನು ಬಂಧಿಸಲು ಆದೇಶಿಸಲಾಗುವುದು ಎಂದು ಎಚ್ಚರಿಕೆ ನೀಡಿ ವಿಚಾರಣೆ ಮುಂದೂಡಿತ್ತು.ನಿನ್ನೆ ನಡೆದ ವಿಚಾರಣೆ ವೇಳೆ ಸರ್ಕಾರದ ಪರ ವಕೀಲರು "ಕಾರ್ಮಿಕರ

ಜತೆ ಸಂಧಾನ ಮುಂದುವರಿಯುತ್ತಿದೆ. ಇಂದೂ ಸಹ ಮಾತುಕತೆ ನಡೆದಿದ್ದು, ಆಗಸ್ಟ್ 28ಕ್ಕೆ ಮತ್ತೆ ಸಂಧಾನ ಸಭೆ ನಡೆಯಲಿದೆ" ಎಂದು ತಿಳಿಸಿದರು. ಅರ್ಜಿದಾರರ ಪರ ವಕೀಲರು ವಾದಿಸಿ, ಸದ್ಯ ಮುಷ್ಕರ ನಿಲ್ಲಿಸಿದ್ದರೂ ಮುಂದಿನ ದಿನಗಳಲ್ಲಿ ಇದೇ ಪರಿಸ್ಥಿತಿ ಮರುಕಳಿಸುವ ಸಾಧ್ಯತೆ ಇದೆ. ಆದ್ದರಿಂದ, ಪ್ರಕರಣ ಸಂಬಂಧ ನಿರ್ಧಾರ ಕೈಗೊಳ್ಳಲು ಸರ್ಕಾರಕ್ಕೆ ಕಾಲಮಿತಿ ನಿಗದಿಪಡಿಸಬೇಕು ಎಂದು ಮನವಿ ಮಾಡಿದರು.

ವಾದ ಪ್ರತಿವಾದ ಆಲಿಸಿದ ಪೀಠವು ಸರ್ಕಾರ ಮತ್ತು ಕಾರ್ಮಿಕರ ನಡುವೆ ಸಂಧಾನ ಮುಂದುವರಿಯಲಿ.

ಸದ್ಯ ಮುಷ್ಕರ ಹಿಂಪಡೆಯಲಾಗಿದೆ. ಆದ್ದರಿಂದ,ಪಿಐಎಲ್ ಇತ್ಯರ್ಥಪಡಿಸಲಾಗುವುದು ಎಂದು ತಿಳಿಸಿ, ಅರ್ಜಿ ವಿಲೇವಾರಿ ಮಾಡಿತು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.